ಇನ್ನಷ್ಟು ಸ್ಥಳೀಯ
ಸುದ್ದಿಗಳು
ಪುಟ 09 ರಲ್ಲಿ

ಕನ್ನಡಪ್ರಭ
ಗುರುವಾರ 7.05.2026

ಗರಿಷ್ಠ 34°c | ಕನಿಷ್ಠ 23°c

ಸುದ್ದಿ ಸಿಂಚನ

ಸಚ್ಚಿದಾನಂದ ಮನವಿಗೆ ವಿ.ಸೋಮಣ್ಣ ಸ್ಪಂದನೆ

ಮಂಡ್ಯ: ಜಿಲ್ಲೆಯಲ್ಲಿ ಹಾದು ಹೋಗಿರುವ ರೈಲು ಸಂಚಾರ ಮಾರ್ಗಗಳಲ್ಲಿ ಸೌಕರ್ಯ ಕಲ್ಪಿಸಿಕೊಡುವಂತೆ ಬಿಜೆಪಿ ಯುವ ನಾಯಕ ಇಂಡುವಾಳು ಸಚ್ಚಿದಾನಂದ ಅವರು ಬರೆದಿರುವ ಪತ್ರಕ್ಕೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಸ್ಪಂದಿಸಿದ್ದಾರೆ. ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿದಂತೆ



ಪ್ರತ್ಯೇಕವಾರು ಪತ್ರ ಬರೆದು ಕೊತ್ತತ್ತಿ ಹೋಬಳಿ ನೊದೆಕೊಪ್ಪಲು ಗ್ರಾಮದ ಸಮೀಪವಿರುವ ಅಂಡರ್ ಪಾಸ್ ಕಿರಿದಾಗಿದೆ. ಇಲ್ಲಿ ಲಾರಿ ಸೇರಿದಂತೆ ಎತ್ತರದ ವಾಹನಗಳ ಓಡಾಟ ಕಷ್ಟಕರವಾಗಿದೆ. ಮಾತ್ರವಲ್ಲದೆ ಮಳೆ ಬಂದರೆ ನೀರು ನಿಲ್ಲುತ್ತದೆ. ಜತೆಗೆ ವಿದ್ಯುತ್ ದೀಪವೂ ಇಲ್ಲ. ಪರಿಣಾಮ ಮಕ್ಕಳು, ಮಹಿಳೆಯರ ಓಡಾಟಕ್ಕೂ ಕಷ್ಟವಾಗಿದೆ. ಈ ಸಮಸ್ಯೆ ಬಗಹರಿಸಲು ಮೇಲ್ಸೇತುವೆ ನಿರ್ಮಾಣ ಮಾಡಿಕೊಡುವ ಮೂಲಕ ಜನರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದ್ದಾರೆ. ಶ್ರೀರಂಗಪಟ್ಟಣದ ರೈಲ್ವೆ ನಿಲ್ದಾಣವನ್ನು ತುರ್ತಾಗಿ ಮೇಲ್ದರ್ಜೆಗೇರಿಸಬೇಕಿದೆ. ಜೊತೆಗೆ ಪ್ಲಾಟ್ ಫಾರ್ಮ್ ವಿಸ್ತರಣೆ, ಕೆಲ ರೈಲುಗಳ ನಿಲುಗಡೆಗೆ ಕ್ರಮ ವಹಿಸಬೇಕು. ಇಂಡುವಾಳು ಗ್ರಾಮದಲ್ಲಿ ಕೆಳ ಸೇತುವೆ ಮಾಡಿಕೊಡಬೇಕು. ಯಲಿಯೂರು ಗ್ರಾಮದಲ್ಲಿ ಶಾಲಾ ಮಕ್ಕಳಿಗೆ ಆಟವಾಡಲು ಅನುಕೂಲವಾಗುವಂತೆ ರೈಲ್ವೆ ಜಾಗ ಬಿಟ್ಟುಕೊಡಬೇಕು. ಜೊತೆಗೆ ರೈಲ್ವೆ ಗೂಡ್ಸ್ ಸ್ಟೇಷನ್ ಯಲಿಯೂರು ಗ್ರಾಮದಲ್ಲಿಯೇ ಸ್ಥಾಪಿಸಬೇಕೆಂದು ಸಚ್ಚಿದಾನಂದ ಮನವಿ ಮಾಡದ್ದು, ಇದಕ್ಕೆ ಉತ್ತರ ನೀಡಿರುವ ಸಚಿವ ವಿ.ಸೋಮಣ್ಣ, ಸಮಸ್ಯೆಗೆ ಸಂಬಂಧಿಸಿದಂತೆ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಹೇಳಿದ್ದಾರೆ.

'ದೇಗುಲ ಪರಂಪರೆ ಜನರ ಬದುಕು ಗಟ್ಟಿಗೊಳಿಸಲಿದೆ'



ಕಿಕ್ಕೇರಿ: ಜನರ ಬದುಕು ಗಟ್ಟಿಗೊಳಿಸುವ ದೇಗುಲ, ಪೂಜಾರಾಧನೆ ಸಂಸ್ಕೃತಿಯನ್ನು ಪಾಲಿಸಲು ಮುಂದಾಗಬೇಕು ಎಂದು ಸಮಾಜ ಸೇವಕ ಆರ್‌ಟಿಒ ಮಲ್ಲಿಕಾರ್ಜುನ ತಿಳಿಸಿದರು. ಹೋಬಳಿಯ ಮಾರ್ಗೋನಹಳ್ಳಿಯಲ್ಲಿ ಲೋಕಾರ್ಪಣೆಯಾದ ನವೀಕೃತ ವೀರಭದ್ರೇಶ್ವರ, ಭದ್ರಕಾಳಮ್ಮ ದೇಗುಲ ಉದ್ಘಾಟನೆ ಸಮಾರಂಭದಲ್ಲಿ ದೇಗುಲ ಅಭಿವೃದ್ಧಿಗಾಗಿ ಧನಸಹಾಯ ನೀಡಿ ಮಾತನಾಡಿ, ಭಾರತ ನಿಂತಿರುವುದೇ ಧಾರ್ಮಿಕ ಭಾವನೆಯ ತಳಹದಿಯಲ್ಲಿ. ದೇಗುಲ ಆರಾಧನೆ, ಪೂಜೆ, ಹೋಮ, ಹವನಗಳಲ್ಲಿ ವೈಜ್ಞಾನಿಕ ಮಹತ್ವ ಇದೆ. ಗ್ರಾಮಗಳನ್ನು ಸೌಹಾರ್ದತೆಯಿಂದ ಬೆಸೆಯುವ ಶ್ರದ್ಧಾ ಕೇಂದ್ರ ದೇಗುಲವಾಗಿದೆ ಎಂದರು. ದೇಗುಲ ಮಾನಸಿಕ ನೆಮ್ಮದಿ, ಶಾಂತಿ ನೀಡಿದರೆ, ಶಾಲೆಗಳು ಜ್ಞಾನದೇಗುಲವಾಗಿದೆ. ಎರಡನ್ನುಜೋಪಾನವಾಗಿ ನೋಡಿಕೊಂಡು ಹೋದಲ್ಲಿ ಸುಂದರ ಸಮಾಜ ನಿರ್ಮಾಣವಾಗಲಿದೆ. ಜಪ, ತಪ, ಧ್ಯಾನಗಳಿಂದ ಶಾರೀರಿಕ, ಆರೋಗ್ಯಕರ ವಾತಾವರಣ ಸೃಷ್ಟಿಯಾಗಲಿದೆ. ಯುವಕರು ನಮ್ಮ ಪೂರ್ವಜರು ಹಾಕಿಕೊಟ್ಟರ ಪರಂಪರೆ ಉಳಿಸಿಕೊಂಡು ನೆಮ್ಮದಿ ಬದುಕು ಕಾಣಬೇಕು ಎಂದರು. ಮಹಿಳೆಯರು ಮಂಗಳವಾದ್ಯದೊಂದಿಗೆ ಹೇಮಾವತಿ ನದಿಯಿಂದ ಪವಿತ್ರಗಂಗೆಯನ್ನು ಕಳಸದಲ್ಲಿ ತುಂಬಿಕೊಂಡು ಮೆರವಣಿಗೆ ಮೂಲಕ ತಂದರು. ದೇವರಿಗೆ ಗಂಗಾಜಲಾಭಿಷೇಕ, ಪಂಚಮೃತ, ಎಳನೀರು ಅಭಿಷೇಕ ನೆರವೇರಿಸಲಾಯಿತು. ವಿವಿಧ ಸುಗಂಧ ಪುಷ್ಪಗಳಿಂದ ಅಲಂಕಾರ, ವಸ್ತ್ರಾಭರಣ ತೊಡಿಸಿ ಧೂಪ, ದೀಪ ಸೇವೆ ಅರ್ಪಿಸಲಾಯಿತು. ವಿವಿಧ ಹೋಮ ಹವನ, ಅರ್ಚನೆಗಳು ಜರುಗಿತು. ಮಹಾ ಮಂಗಳಾರತಿ, ತೀರ್ಥ ಪ್ರಸಾದ, ಮಹಾಪ್ರಸಾದ ಭಕ್ತರಿಗೆ ನೀಡಲಾಯತು, ಅನ್ನದಾಸೋಹ ನಡೆಯಿತು. ಈ ವೇಳೆ ನಾಗರಾಜು, ಪ್ರಕಾಶ್, ನಾಗರಾಜಶೆಟ್ಟಿ, ಯೋಗೇಶ್, ಶ್ರೀನಿವಾಸ ಮುಂತಾದವರು ಇದ್ದರು.

ವಿಜೃಂಭಣೆಯ ಶ್ರೀಮದ್ದೂರಮ್ಮನವರ ಅಗ್ನಿಕೊಂಡ ಮಹೋತ್ಸವ

• **ಕನ್ನಡಪ್ರಭ ವಾರ್ತೆ** ಮದ್ದೂರು

ಪಟ್ಟಣದ ಶಕ್ತಿ ದೇವತೆ ಶ್ರೀಮದ್ದೂರಮ್ಮನವರ ಅಗ್ನಿಕೊಂಡ ಮಹೋತ್ಸವ ಬುಧವಾರ ಮುಂಜಾನೆ ಸಾವಿರಾರು ಭಕ್ತರ ಉದ್ಘೋಷಗಳ ನಡುವೆ ವಿಜೃಂಭಣೆಯಿಂದ ನೆರವೇರಿತು.

ದೇಗುಲದ ಪ್ರಧಾನ ಅರ್ಚಕ ಪೂಜಾರಿ ಶಿವಣ್ಣ ಶ್ರೀಮದ್ದೂರಮ್ಮನವರ ಪಟವನ್ನು ಹೊತ್ತು ಅಗ್ನಿಕೊಂಡ ಹಾಯ್ದರು. ಶ್ರೀಅಗ್ನಿಕೊಂಡ ಮಹೋತ್ಸವದ ಪೂರ್ವಭಾವಿಯಾಗಿ ಮಂಗಳವಾರ ದೇವಿಗೆ ಮೂಲ ದೇಗುಲದಲ್ಲಿ ಹೋಮ ಅವನಾದಿಗಳೊಂದಿಗೆ ವಿಶೇಷ ಪೂಜಾ ಕಾರ್ಯಗಳು ಜರುಗಿದವು.

ನಂತರ ಎಲ್ಲಮ್ಮ ದೇವಿಗೆ ಚಂದ್ರ ಬಂಡಾರ ಸೇವೆ ಬಳಿಕ ಸಂಜೆ 5 ಗಂಟೆಗೆ ಸುಮಾರಿಗೆ ಗ್ರಾಮಸ್ಥರಿಂದ ಕೊಂಡಾ ಬಂಡಿ ಉತ್ಸವ ನೆರವೇರಿತು. ಸಂಜೆ ಅಮ್ಮನವರ ಮೂಲ ದೇಗುಲದಲ್ಲಿ ಅಭಿಷೇಕದೊಂದಿಗೆ ವಿಶೇಷ ಪೂಜೆ ಮಹಾ ಮಂಗಳಾರತಿ ನಡೆಯಿತು. ಮಂಗಳವಾರ ಮಧ್ಯ ರಾತ್ರಿ ವೇಳೆಗೆ ಬೆಂಗಳೂರು, ಮೈಸೂರು ಹೆದ್ದಾರಿಯ ಪಕ್ಕದ ಶ್ರೀಮದ್ದೂರಮ್ಮದೇವರ ಮುಂದೆ ನಿರ್ಮಿಸಲಾಗಿದ್ದ ಕೊಂಡಕ್ಕೆ ಅಗ್ನಿಸ್ಪರ್ಶ ಮಾಡಲಾಯಿತು. ಮುಂಜಾನೆ ಗಂಟೆ ಸುಮಾರಿಗೆ ಅಸಂಖ್ಯಾತಭಕ್ತರ ಸಮ್ಮುಖದಲ್ಲಿ ಅಗ್ನಿಕೊಂಡ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತು.



ಕೊಂಡ ಮಹೋತ್ಸವದ ಪೂರ್ವಭಾವಿಯಾಗಿ ಮೂಲ ದೇವಸ್ಥಾನದಿಂದ ಸೋಮೇಗೌಡರ ಬೀದಿ, ದೊಡ್ಡಿ ಬೀದಿ ಮೂಲಕ ಅಮ್ಮನವರ ಪುಷ್ಪಾಲಂಕೃತ ಪಟದ ಮೆರವಣಿಗೆ ನಡೆಯಿತು. ಮಾರ್ಗ ಮಧ್ಯೆ ಭಕ್ತರು ತಮ್ಮ ಮನೆಗಳ ಮುಂದೆ ಕುರಿ, ಕೋಳಿ ಬಲಿಕೊಟ್ಟು ಪೂಜೆ ಸಲ್ಲಿಸಿದರು.

ಇಂದು ಬ್ರಹ್ಮ ರಥೋತ್ಸವ: ಮದ್ದೂರಮ್ಮನ ಜಾತ್ರಾ ಮಹೋತ್ಸವದ ಅಂಗವಾಗಿ ಪಟ್ಟಣದ ಪುರಾಣ ಪ್ರಸಿದ್ಧ ಶ್ರೀನರಸಿಂಹ ಸ್ವಾಮಿ ದೇವರ ಬ್ರಹ್ಮ ರಥೋತ್ಸವ ಮೇ 7ರಂದು ನಡೆಯಲಿದೆ. ಬ್ರಹ್ಮ ರಥೋತ್ಸವದ ನಿಮಿತ್ತ ನರಸಿಂಹಸ್ವಾಮಿ ದೇಗುಲದಲ್ಲಿ ಏಪ್ರಿಲ್ 30 ರಿಂದಲೇ ಸೇವಾ ಕರ್ತರಿಂದ ವಿಶೇಷ ಪೂಜಾ ಕಾರ್ಯಗಳು ಈಗಾಗಲೇ ನಡೆಯುತ್ತಿದೆ. ಮೇ 7 ರಂದು ಬೆಳಗ್ಗೆ 11 .15 ಗಂಟೆಯಿಂದ 12 15ರ ಗಂಟೆಯೊಳಗೆ ಸಲ್ಲುವ ಕರ್ಕಾಟಕ ಲಗ್ನದಲ್ಲಿ ಬ್ರಹ್ಮರಥೋತ್ಸವ ನಡೆಯಲಿದೆ. ರಥೋತ್ಸವಕ್ಕೆ ಬರುವ ಭಕ್ತಾದಿಗಳಿಗೆ ಶ್ರೀ ನರಸಿಂಹಸ್ವಾಮಿ ಸೇವಾ ಸಂಘದ ವತಿಯಿಂದ ಪಾನಕ ಮಜ್ಜಿಗೆ ಹಾಗೂ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ.

ಬಿಜೆಪಿಗೆ ಜಯದಿಂದ ಕಾರ್ಯಕರ್ತರಿಗೆ ಹುಮ್ಮಸ್ಸು

ಮಂಡ್ಯ: ದೇಶದ ಎರಡು ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಬಿಜೆಪಿ ಅಭೂತ ಪೂರ್ವ ಗೆಲುವು ಕಾರ್ಯಕರ್ತರಿಗೆ ಹೊಸ ಹುಮ್ಮಸ್ಸು ತಂದುಕೊಟ್ಟಿದೆ ಎಂದು ಬಿಜೆಪಿ ಮುಖಂಡ ಎಸ್.ಜೆ. ಆನಂದ್ ತಿಳಿಸಿದ್ದಾರೆ.



ಈ ಕುರಿತು ಹೇಳಿಕೆ ನೀಡಿರುವ ಆನಂದ್, ಪ್ರಧಾನಿ ಮೋದಿ ಹಾಗೂ ಗೃಹ ಮಂತ್ರಿ ಅಮಿತ್ ಶಾ ನೇತೃತ್ವದಲ್ಲಿ ನಡೆದ ಚುನಾವಣೆಯಲ್ಲಿ ಗೆಲುವಿನ ಹಿಂದೆ ನಮ್ಮ ಪಕ್ಷದ ನಾಯಕರ ಶ್ರಮ ಅಪಾರವಾಗಿದೆ ಎಂದಿದ್ದಾರೆ. ಕರ್ನಾಟಕದಲ್ಲೂ 2028ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಪಶ್ಚಿಮ ಬಂಗಾಳ ಮಾದರಿಯಲ್ಲಿ ಅಧಿಕಾರಕ್ಕೆ ತರಬೇಕಿದೆ. ರಾಜ್ಯದಲ್ಲಿ ಮುಂದೆ ನಡೆಯುವ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತರುವುದು, ಕಾಂಗ್ರೆಸ್ ಬೇರನ್ನು ಬುಡ ಸಮೇತ ಕಿತ್ತು ಹಾಕಬೇಕು. ಆ ನಿಟ್ಟಿನಲ್ಲಿ ನಾಯಕರು, ಕಾರ್ಯಕರ್ತರು ಒಮ್ಮತವಾಗಿ ಈಗಿನಿಂದಲೇ ಕೆಲಸ ಮಾಡಬೇಕಿದೆ ಎಂದು ಆನಂದ್ ಸಲಹೆ ನೀಡಿದ್ದಾರೆ.

ಬಹುತೇಕ ಆರ್‌ಒ ಪ್ಲಾಂಟ್‌ಗಳು ನಿರುಪಯುಕ್ತ

ಮಂಡ್ಯ ಜಿಲ್ಲೆಯ ಪ್ರತಿ ಗ್ರಾಪಂನಲ್ಲೂ ಒಂದರಿಂದ ಎರಡು ಘಟಕಗಳ ದುರವಸ್ಥೆ | ಒತ್ತಡದಿಂದ ಗ್ರಾಪಂಗಳಿಗೆ ಘಟಕಗಳು ಹಸ್ತಾಂತರ; ಆರ್ಥಿಕ ಹೊರೆ

• **ಮಂಡ್ಯ ಮಂಜುನಾಥ**
ಕನ್ನಡಪ್ರಭ ವಾರ್ತೆ ಮಂಡ್ಯ

ಮಂಡ್ಯ ತಾಲೂಕಿನಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ದುರವಸ್ಥೆಯಿಂದ ಕೂಡಿವೆ. ಪ್ರತಿ ಪಂಚಾಯ್ತಿ ವ್ಯಾಪ್ತಿಯಲ್ಲಿ ಒಂದರಿಂದ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳು ಅವ್ಯವಸ್ಥಿತ ಸ್ಥಿತಿಯಲ್ಲಿವೆ. ಕೆಲವೊಂದು ಕೆಟ್ಟು ನಿಂತಿದ್ದರೆ, ಇನ್ನು ಕೆಲವು ಘಟಕಗಳಲ್ಲಿ ನೀರು ಸರಿಯಾಗಿ ಶುದ್ಧೀಕರಣವಾಗುತ್ತಿಲ್ಲ. ಇದರಿಂದ ಜನರ ಪಾಲಿಗೆ ಇವು ಇದ್ದೂ ಇಲ್ಲದಂತಾಗಿವೆ.

ಕಳೆದ ಮೂರು ವರ್ಷಗಳಿಂದ ಬೇಸಿಗೆ ಮಳೆ, ಮುಂಗಾರು ಮಳೆ ಉತ್ತಮವಾಗಿ ಆಗಿದ್ದರಿಂದ ಕುಡಿಯುವ ನೀರಿನ ಪರಿಸ್ಥಿತಿ ಈ ವರ್ಷದಷ್ಟು ಹದಗೆಟ್ಟಿರಲಿಲ್ಲ. ಈ ಬಾರಿ ಜಿಲ್ಲೆಗೆ ಬೇಸಿಗೆ ಮಳೆ ಕೊರತೆ ಎದುರಾಗಿದೆ. ಮುಂಗಾರು ಮಳೆಯ ಅಭಾವ ಎದುರಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ಎದುರಾಗಿದೆ. ಇದರಿಂದ ಕುಡಿಯುವ ನೀರಿನ ಸಮಸ್ಯೆ ದಿನೇ ದಿನೇ ಉಲ್ಬಣಗೊಳ್ಳಲಾರಂಭಿಸಿದೆ.

ಹಿರಿಯ ಅಧಿಕಾರಿಗಳ ಒತ್ತಡದಿಂದ ಹಸ್ತಾಂತರ: ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕೆಟ್ಟು ನಿಂತು ವರ್ಷಗಳೇ ಕಳೆದರೂ ಅವುಗಳನ್ನು ದುರಸ್ತಿಗೊಳಿಸುವ ಗೋಜಿಗೆ ಹೋಗಿರಲಿಲ್ಲ. ನಿರ್ವಹಣೆ ವೆಚ್ಚ ಹೆಚ್ಚು ಎಂಬ ಕಾರಣಕ್ಕೆ ಏಜೆನ್ಸಿಗಳು ದೂರ ಉಳಿದಿದ್ದವು. ಐದು ವರ್ಷಗಳ ಕಾಲ ಏಜೆನ್ಸಿಗಳು ನಿರ್ವಹಣೆ ಮಾಡಿದ ಬಳಿಕ ಹಲವಾರು ಘಟಕಗಳನ್ನು ಜಿಲ್ಲಾ ಪಂಚಾಯ್ತಿಯ ಹಿರಿಯ ಅಧಿಕಾರಿಗಳ ಮಾತಿಗೆ ಕಟ್ಟುಬಿದ್ದು ಏಜೆನ್ಸಿಗಳಿಂದ ವಿದ್ಯುತ್ ಬಿಲ್ ಬಾಕಿ ಪಾವತಿಸಿ ಪಂಚಾಯ್ತಿಗಳಿಗೆ ಹಸ್ತಾಂತರ ಮಾಡಿಸಿಕೊಂಡಿವೆ.

ಐದು ವರ್ಷಗಳ ಕಾಲ ಕಾರ್ಯಾಚರಣೆಯಲ್ಲಿದ್ದ ಘಟಕಗಳು ಅಸಮರ್ಪಕ ನಿರ್ವಹಣೆಯಿಂದ ಕೆಟ್ಟು ನಿಂತಿದ್ದು, ಅವುಗಳನ್ನು ಆತುರಾತುರವಾಗಿ ದುರಸ್ತಿಗೊಳಿಸಿ ಪಂಚಾಯ್ತಿಗಳಿಗೆ ಹಸ್ತಾಂತರಿಸಿ ಏಜೆನ್ಸಿಗಳು ಕೈತೊಳೆದುಕೊಂಡಿವೆ. ಪಂಚಾಯ್ತಿಗೆ ಹಸ್ತಾಂತರವಾದ ಕೆಲವೇ ತಿಂಗಳುಗಳಲ್ಲಿ ಹಲವಾರು ಘಟಕಗಳು ಮತ್ತೆ ಕೆಟ್ಟು ನಿಂತಿವೆ. ಕೆಲವೊಂದರಲ್ಲಿ ನೀರು ಬರುತ್ತಿದ್ದರೂ ಮೆಮ್ಬ್ರೇನ್‌ಗಳು ಮತ್ತು ಕಾರ್ಬನ್‌ಗಳು ಸರಿಯಾಗಿ ಕಾರ್ಯನಿರ್ವಹಿಸದಿರುವ ಕಾರಣ ನೀರು ಶುದ್ಧೀಕರಣಗೊಳ್ಳುತ್ತಿಲ್ಲ. ಆ ನೀರು ಕುಡಿಯಲು ಯೋಗ್ಯವಾಗಿಲ್ಲದ ಕಾರಣ ಆ ಘಟಕಗಳು ನಿರುಪಯುಕ್ತವಾಗಿ ಉಳಿದುಕೊಂಡಿವೆ.



ಜಲಜೀವನ್ ಮಿಷನ್‌ನಡಿ ಓವರ್‌ಹೆಡ್ ಟ್ಯಾಂಕ್ ಕಾಮಗಾರಿ ಹಣವಿಲ್ಲದೆ ಸ್ಥಗಿತಗೊಂಡಿರುವುದು.

ಕೆಟ್ಟಿವೆ 75 ರಿಂದ 80 ಘಟಕಗಳು: ಮಂಡ್ಯ ತಾಲೂಕಿನ 46 ಗ್ರಾಪಂಗಳ ವ್ಯಾಪ್ತಿಯಲ್ಲಿ 172 ಶುದ್ಧ ಕುಡಿಯುವ ನೀರಿನ ಘಟಕಗಳಿವೆ. ಇವುಗಳಲ್ಲಿ 162 ಕಾರ್ಯನಿರ್ವಹಿಸುತ್ತಿದ್ದು, 10 ಘಟಕಗಳು ಮಾತ್ರ ಕೆಟ್ಟು ನಿಂತಿರುವುದಾಗಿ ಅಧಿಕಾರಿ ವರ್ಗ ಹೇಳುತ್ತಿದೆ. ಆದರೆ, ವಾಸ್ತವದಲ್ಲಿರುವ ಸತ್ಯ ಸಂಗತಿಯೇ ಬೇರೆಯಾಗಿದೆ. ಪ್ರತಿ ಗ್ರಾಪಂ ವ್ಯಾಪ್ತಿಯಲ್ಲೂ ಒಂದರಿಂದ ಎರಡು ಶುದ್ಧೀಕರಣಗಳು ನಿರುಪಯುಕ್ತವಾಗಿವೆ. ಸರಿ ಸುಮಾರು ಮಂಡ್ಯ ತಾಲೂಕಿನಲ್ಲೇ 75 ರಿಂದ 80 ಘಟಕಗಳು ಜನರ ಉಪಯೋಗದಿಂದ ದೂರವೇ ಉಳಿದಿವೆ.

ಸಾಕಷ್ಟು ವರ್ಷ ಕಾರ್ಯಾಚರಣೆಯಾಗಿರುವ ಘಟಕಗಳು ಹಳೆಯದಾಗಿವೆ. ಬಿಡಿಭಾಗಗಳ ಬೆಲೆಯೂ ದುಬಾರಿಯಾಗಿದೆ. ಹೀಗಾಗಿ ಘಟಕಗಳು ಪದೇ ಪದೇ ರಿಪೇರಿಗೆ ಬರುತ್ತಲೇ ಇರುವುದರಿಂದ ಪಂಚಾಯ್ತಿಗಳಿಗೆ ಘಟಕಗಳು ಹೊರೆಯಾಗಿ ಪರಿಣಮಿಸಿವೆ. ಮಂಡ್ಯ ತಾಲೂಕಿನ ಬೇಲೂರು ಗ್ರಾಮದ ಶುದ್ಧ ಕುಡಿಯುವ ನೀರಿನ ಘಟಕ ಕಳೆದೊಂದು ತಿಂಗಳ ಹಿಂದೆ ದುರಸ್ತಿಯಾಗಿದ್ದರೆ, ಬಿ.ಯರಹಳ್ಳಿ ಗ್ರಾಮದ ಶುದ್ಧ ಕುಡಿಯುವ ನೀರಿನ ಘಟಕ ಕಾರ್ಯಾಚರಣೆಯಲ್ಲಿದ್ದರೂ ನೀರು ಶುದ್ಧೀಕರಣಗೊಳ್ಳುತ್ತಿಲ್ಲ. ಈ ಘಟಕದ ನೀರನ್ನು ಗ್ರಾಮದ ಜನರು ಉಪಯೋಗಿಸುತ್ತಲೇ ಇಲ್ಲ. ಆದರೂ ಅಧಿಕಾರಿಗಳ ದೃಷ್ಟಿಯಲ್ಲಿ ಈ ಘಟಕ ಚಾಲನೆಯಲ್ಲಿರುವುದಾಗಿ ಹೇಳಲಾಗುತ್ತಿದೆ. ಅದೇ ರೀತಿ ಬೂದನೂರು ಪಂಚಾಯ್ತಿ ವ್ಯಾಪ್ತಿಯಲ್ಲೂ ಒಂದು ಘಟಕ ನಿರುಪಯುಕ್ತವಾಗಿರುವುದು. ಬೇಲೂರು ಪಂಚಾಯ್ತಿಗೆ ಸೇರಿದ ಕಾವೇರಿ ನಗರದಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕವೂ ದುರಸ್ತಿಯಲ್ಲಿರುವುದು ಕಂಡುಬಂದಿದೆ.



ಮಂಡ್ಯ ತಾಲೂಕಿನ ಬಿ.ಯರಹಳ್ಳಿಯಲ್ಲಿ ನೀರು ಸರಿಯಾಗಿ ಶುದ್ಧೀಕರಣಗೊಳ್ಳದೆ ನಿರುಪಯುಕ್ತವಾಗಿರುವ ಘಟಕ.

ಹೊಸ ಯಂತ್ರೋಪಕರಣಗಳ ಜೋಡಣೆ ಅವಶ್ಯ

ಶುದ್ಧ ಕುಡಿಯುವ ನೀರಿನ ಘಟಕಗಳು ಏಳೆಂಟು ವರ್ಷಗಳಿಂದ ಕಾರ್ಯಾಚರಣೆ ನಡೆಸಿರುವುದರಿಂದ ಸರಿಯಾದ ನಿರ್ವಹಣೆಯಿಲ್ಲದೆ ಯಂತ್ರೋಪಕರಣಗಳು ತುಕ್ಕು ಹಿಡಿದಿವೆ, ಬಿಡಿಭಾಗಗಳು ಪದೇ ಪದೇ ದುರಸ್ತಿಗೆ ಬರುತ್ತಿವೆ. ನೀರು ಸಮರ್ಪಕವಾಗಿ ಶುದ್ಧೀಕರಣಗೊಳ್ಳುತ್ತಿಲ್ಲದಿರುವುದೂ ಸೇರಿದಂತೆ ಅನೇಕ ಸಮಸ್ಯೆಗಳು ಎದುರಾಗುತ್ತಲೇ ಇವೆ. ಹಾಗಾಗಿ ಜಿಲ್ಲೆಯಲ್ಲಿರುವ ಒಟ್ಟು 677ಕ್ಕೂ ಹೆಚ್ಚು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ರಾಜ್ಯ ಮಟ್ಟದಲ್ಲಿ ಟೆಂಡರ್‌ಮಾಡಿ ಹೊಸ ಯಂತ್ರೋಪಕರಣಗಳನ್ನು ಅಳವಡಿಸಿ ಪಂಚಾಯ್ತಿಗಳಿಗೆ ಹಸ್ತಾಂತರ ಮಾಡಿದರೆ ಆಗ ನಿರ್ವಹಣೆ ಮಾಡುವುದಕ್ಕೆ ಸುಲಭವಾಗಲಿದೆ. ಇಲ್ಲದಿದ್ದರೆ ದುರಸ್ತಿಯ ವೆಚ್ಚ ಹೆಚ್ಚುತ್ತಲೇ ಹೋಗುತ್ತಿರುತ್ತದೆ ಎಂದು ಹೆಸರೇಳಲಿಚ್ಚಿಸದ ಅಧಿಕಾರಿಯೊಬ್ಬರು 'ಕನ್ನಡಪ್ರಭ' ಪತ್ರಿಕೆಗೆ ತಿಳಿಸಿದರು.

ನೀರೇ ಬರುತ್ತಿಲ್ಲ

ಜಲಜೀವನ್ ಯೋಜನೆ ಆಮೆವೇಗದಲ್ಲಿ ಸಾಗುತ್ತಿರುವ ಪ್ರತಿ ಮನೆಗೆ ನಳ ಸಂಪರ್ಕವಿದ್ದರೂ ನೀರೇ ಬರುತ್ತಿಲ್ಲ. ಹಲವು ಗ್ರಾಪಂಗಳಲ್ಲಿ ಓವರ್‌ಹೆಡ್ ಟ್ಯಾಂಕ್‌ಗಳು ನಿರ್ಮಾಣವಾಗಿಲ್ಲ. ಕೆಲವೆಡೆ ಓವರ್‌ಹೆಡ್ ಟ್ಯಾಂಕ್‌ಗಳು ಅರ್ಧಕ್ಕೆ ಸ್ಥಗಿತಗೊಂಡಿವೆ. ಹಣ ಬಿಡುಗಡೆಯಾಗಿಲ್ಲವೆಂಬ ಕೂಗು ಕೇಳಿಬಂದಿದೆ. ಹೀಗಾಗಿ ಜಲಜೀವನ್ ಜನರ ಕುಡಿಯುವ ನೀರಿನ ದಾಹವನ್ನು ಇಂಗಿಸದಂತಾಗಿವೆ. ಹೀಗಾಗಿ ಗ್ರಾಪಂಗಳು ಸರ್ಕಾರಿ ಕೊಳವೆ ಬಾವಿಗಳ ಮೂಲಕವೇ ಗ್ರಾಮಗಳಿಗೆ ನೀರೊದಗಿಸುವ ಕಾರ್ಯವನ್ನು ನಡೆಸುತ್ತಿವೆ. ಈ ಕೊಳವೆ ಬಾವಿಗಳಲ್ಲೂ ನೀರಿನ ಇಳುವರಿ ಕುಂಠಿತಗೊಂಡಿರುವುದು, ಇನ್ನೊಂದೆಡೆ ಮಳೆಯಾಗದಿರುವುದು ದಿನೇ ದಿನೇ ಪರಿಸ್ಥಿತಿಯನ್ನು ಕ್ಲಿಷ್ಟಗೊಳಿಸುತ್ತಿವೆ. ಇನ್ನೊಂದು ವಾರದಲ್ಲಿ ಕುಡಿಯುವ ನೀರಿನ ಪರಿಸ್ಥಿತಿ ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆಗಳಿವೆ ಎನ್ನಲಾಗುತ್ತಿದ್ದು, ಸದ್ಯಕ್ಕೆ ಪರಿಸ್ಥಿತಿ ನಿಭಾಯಿಸಲಾಗುತ್ತಿದ್ದು, ಅವ್ಯವಸ್ಥೆಯ ನಡುವೆಯೂ ಶುದ್ಧ ಕುಡಿಯುವ ನೀರಿನ ಘಟಕಗಳು ತಕ್ಕಮಟ್ಟಿಗೆ ಜನರ ದಾಹವನ್ನು ಇಂಗಿಸುತ್ತಿವೆ.



ಮಂಡ್ಯ ತಾಲೂಕಿನಲ್ಲಿ 172 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಅದರಲ್ಲಿ 162 ಕಾರ್ಯನಿರ್ವಹಿಸುತ್ತಿವೆ. 10 ಘಟಕಗಳು ಮಾತ್ರ ಕೆಟ್ಟಿವೆ. ಪ್ರತಿ ಗ್ರಾಪಂ ವ್ಯಾಪ್ತಿಯಲ್ಲಿ ಒಂದರಿಂದ ಎರಡು ಘಟಕಗಳು ಕಾರ್ಯಾಚರಣೆಯಲ್ಲಿಲ್ಲದಿರುವ ಮಾಹಿತಿ ನಮಗೆ ಇಲ್ಲ. ಅದರ ಬಗ್ಗೆ ಪಿಡಿಓಗಳಿಂದ ಮಾಹಿತಿ ಪಡೆದುಕೊಳ್ಳುವೆ. ನಿರುಪಯುಕ್ತವಾಗಿರುವ ಘಟಕಗಳನ್ನು ಜನರಿಗೆ ಉಪಯೋಗವಾಗುವಂತೆ ಮಾಡಲಾಗುವುದು.

• **ಲೋಕೇಶ್ ಮೂರ್ತಿ** ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯ್ತಿ

ಏಳು ಕೂಟದ ದೇವರ ಸಂಭ್ರಮದ ಉತ್ಸವ

• **ಕನ್ನಡಪ್ರಭ ವಾರ್ತೆ** ನಾಗಮಂಗಲ

ತಾಲೂಕಿನ ಬೀರೇಶ್ವರಪುರ ಗ್ರಾಮದಲ್ಲಿ ನಡೆಯುತ್ತಿರುವ ಶ್ರೀಕಾಟಣ್ಣಸ್ವಾಮಿ ಜಾತ್ರಾ ಮಹೋತ್ಸವದ ಪ್ರಯುಕ್ತ ಬುಧವಾರ ಬೆಳಿಗ್ಗೆ ಏಳು ಕೂಟದ ದೇವರುಗಳ ಉತ್ಸವವು ಕಾಟಣ್ಣಸ್ವಾಮಿ ದೇವಸ್ಥಾನದಿಂದ ಹೊರಟು ಗ್ರಾಮದ ಹೊರವಲಯದ ಬನ್ನಿ ಮಂಟಪದಲ್ಲಿ ಸೇರಿ ಹಣ್ಣು ತುಪ್ಪ ಸೇವೆಯೊಂದಿಗೆ ಶಿವಪೂಜೆ ನಡೆಸಿ ನೈವೇದ್ಯ ಅರ್ಪಿಸಲಾಯಿತು.

ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ದೊರೆ ದೊಡ್ಡಯ್ಯಸ್ವಾಮಿ, ಕಾಟಣ್ಣಸ್ವಾಮಿ, ತುಪ್ಪದಮಡು ಗ್ರಾಮದ ದಳವಾಯಿ ದೊಡ್ಡಯ್ಯಸ್ವಾಮಿ, ಮುಂಗೊಂಡ ಮುಂದಲಾರತಿ ಚಿಕ್ಕಯ್ಯಸ್ವಾಮಿ, ದೊಡ್ಡಾಬಾಲ ಗ್ರಾಮದ ಮಂತ್ರಿ ಹುಚ್ಚಪ್ಪಸ್ವಾಮಿ, ಹೊಂಗನೂರಮ್ಮದೇವಿ, ಅರಕೆರೆ ಗ್ರಾಮದ ಗಾಳಿಗುಂಡ ಹುಚ್ಚಪ್ಪಸ್ವಾಮಿ ಹಾಗೂ ಜೋಡಿನೇರಲಕೆರೆ ಗ್ರಾಮದ ದೊಡ್ಡಲಕ್ಷ್ಮಿದೇವಿ ಮತ್ತು ಚಿಕ್ಕಲಕ್ಷ್ಮಿದೇವಿ ದೇವರುಗಳನ್ನು ನಂದಿ ಪಟದ ಕುಣಿತ, ತಮಟೆ ನಗಾರಿ ಮೇಳದೊಂದಿಗೆ ಎರಡು ಗಂಟೆಗೂ ಹೆಚ್ಚು ಕಾಲ ಉತ್ಸವ ನಡೆಸಲಾಯಿತು.



ಏಳು ಕೂಟದ ದೇವರುಗಳ ಉತ್ಸವ ಮೆರವಣಿಗೆ ಸಾಗುತ್ತಿದ್ದ ವೇಳೆ ಗ್ರಾಮದ ಹಿರಿಯ ಮಹಿಳೆಯರು ದೇವರನ್ನು ಸ್ಮರಿಸುವ ಜಾನಪದ ಮತ್ತು ಸೋಬಾನೆ ಪದಗಳನ್ನು ಹಾಡುತ್ತಿದ್ದರೆ, ಬಾಳೆಹಣ್ಣು ಬೆಲ್ಲದ ಆರತಿ ಹೊತ್ತಿದ್ದ ಸಹಸ್ರಾರು ಹೆಣ್ಣುಮಕ್ಕಳು ಉತ್ಸವ ಮೆರವಣಿಗೆಯೊಂದಿಗೆ ಹೆಜ್ಜೆಹಾಕಿ ತಮ್ಮ ಭಕ್ತಿಭಾವ ಸಮರ್ಪಿಸಿದರು.

ದೇವರುಗಳ ಉತ್ಸವ ಮುಗಿಯುತ್ತಿದ್ದಂತೆ ಗ್ರಾಮದ ಶ್ರೀಮೈಲಾರಲಿಂಗೇಶ್ವರ ಹಾಗೂ ಶ್ರೀಚಿಕ್ಕದೇವಮ್ಮದೇವಿ ದೇವಸ್ಥಾನದ ಆವರಣದಲ್ಲಿ ನೂರಾರು ಮಂದಿ ಪುರುಷರು ಮತ್ತು ಹೆಣ್ಣುಮಕ್ಕಳು ಪ್ರತ್ಯೇಕವಾಗಿ ಪರಸ್ಪರ ಬಣ್ಣ ಬಳಿದುಕೊಂಡು ಒಂದು ಗಂಟೆಗೂ ಹೆಚ್ಚು ಬಣ್ಣದ ನೀರಿನ ಓಕುಳಿ ಆಟವಾಡಿ ಸಂಭ್ರಮಿಸಿದರು.


ಜಾತ್ರಾ ಮಹೋತ್ಸವದಲ್ಲಿ ನೆರೆದಿದ್ದ ಸಹಸ್ರಾರು ಮಂದಿ ಭಕ್ತರು ಪಾಯಸ, ಬೂಂದಿ, ತರಣಿಕಾಳು ಕೂಟು ಅನ್ನಸಾಂಬರ್‌ಸವಿದರು.

ಜಾತ್ರೆ ಹಿನ್ನೆಲೆಯಲ್ಲಿ ಆದಿಚುಂಚನಗಿರಿ ಮಠದ ಚೈತನ್ಯನಾಥಸ್ವಾಮೀಜಿ ಅವರು ಬುಧವಾರ ಮಧ್ಯಾಹ್ನ ಗ್ರಾಮಕ್ಕೆ ಭೇಟಿ ಕೊಟ್ಟು ಶ್ರೀಕಾಟಣ್ಣಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದರು. ಗ್ರಾಮದ ಪ್ರಧಾನ ಅರ್ಚಕ ಶಿವರಾಜು, ಮುಖ್ಯಸ್ಥರಾದ ಶಿವಣ್ಣ, ಮಹೇಶ, ಮಂಜುನಾಥ್, ಪುಟ್ಟಪ್ಪ, ಸುರೇಶ, ರಮೇಶ್, ಮಹದೇವ, ಬಿ.ಎಲ್.ಶಿವಕುಮಾರ್, ಜವರಪ್ಪ ಸೇರಿದಂತೆ ಸಹಸ್ರಾರು ಮಂದಿ ಭಕ್ತರು ಇದ್ದರು.

ಮೇ 7 ಗುರುವಾರ ಬೆಳಗ್ಗೆ ಶ್ರೀ ಕಾಟಣ್ಣಸ್ವಾಮಿ ದೇವಸ್ಥಾನದಲ್ಲಿ ವಿವಿಧ ಬಗೆಯ ಧಾರ್ಮಿಕ ಪೂಜಾ ವಿಧಿ ವಿಧಾನಗಳ ನಂತರ ಏಳು ಕೂಟದ ದೇವರುಗಳನ್ನು ಆಯಾ ಗ್ರಾಮಗಳಿಗೆ ಕರೆದೊಯ್ಯಲು ಕೂಟ ಹೊಡೆಯುವ ಕಾರ್ಯಕ್ರಮ ನಡೆಯಲಿದೆ. ನಂತರ ಎಲ್ಲಾ ದೇವರುಗಳನ್ನು ಗ್ರಾಮದಿಂದ ಅದ್ದೂರಿಯಾಗಿ ಬೀಳ್ಕೊಡಲಾಗುವುದು.

ರೈಲಿನಲ್ಲಿ ಸೀಟಿನ ವಿಚಾರಕ್ಕೆ ಜಗಳ: ಮೂವರು ಯುವಕರಿಂದ ಪ್ರಯಾಣಿಕನಿಗೆ ಚಾಕು ಇರಿತ

ಜಿಲ್ಲಾಸ್ಪತ್ರೆಗೆ ದಾಖಲು, ಗ್ರಾಮಸ್ಥರಿಂದ ಆರೋಪಿಗಳಿಗೆ ಥಳಿತ



• **ಕನ್ನಡಪ್ರಭ ವಾರ್ತೆ** ಮದ್ದೂರು

ಸೀಟಿನ ವಿಚಾರಕ್ಕೆ ಮೂವರು ಯುವಕರು ಹಾಗೂ ಪ್ರಯಾಣಿಕರ ನಡುವೆ ಮಾತಿನ ಚಕಮಕಿ ನಡೆದು ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಯುವಕರ ಗುಂಪು ಪ್ರಯಾಣಿಕರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಮೈಸೂರಿನಿಂದ ಬೆಂಗಳೂರಿಗೆ ತೆರಳುತ್ತಿದ್ದ ರಾಜರಾಣಿ ಎಕ್ಸ್‌ಪ್ರೆಸ್ ರೈಲಿನಲ್ಲಿ ಬುಧವಾರ ಮಧ್ಯಾಹ್ನ ನಡೆದಿದೆ.

ಮಂಡ್ಯದಿಂದ ಬೆಂಗಳೂರಿಗೆ ಪ್ರಯಾಣ ಮಾಡುತ್ತಿದ್ದ ಮಧುಗಿರಿ ತಾಲೂಕಿನ ಬಡವನಹಳ್ಳಿಯ ಶಿವಕುಮಾರ್(44), ಚನ್ನೇಗೌಡನದೊಡ್ಡಿಯ ಗೇಟ್ ಮನ್ ಕುಮಾರ (36), ಚನ್ನೇಗೌಡನದೊಡ್ಡಿಯ ಶಿವಕುಮಾರ್(40) ಹಾಗೂ ಆರೋಪಿಗಳಾದ ಮೈಸೂರಿನ ಗೌಸಿಯಾನಗರದ ಖುರೇಶಿ (27), ವಾಸಿಂ (23), ಕ್ಯಾತನಹಳ್ಳಿಯ ಸೊಯೇಬ್ (20) ಗಾಯಗೊಂಡವರು.

ಘಟನೆ ವಿವರ: ಮೈಸೂರಿನ ಗೌಸಿಯಾ ಬಡಾವಣೆಯ ಖುರೇಶಿ ತನ್ನ ಪತ್ನಿ ಸುಬಾನ್, ಇಬ್ಬರು ಮಕ್ಕಳು ಹಾಗೂ ಸುಜಾತ ಎಂಬ ಹಿಂದೂ ಹೆಣ್ಣು ಮಗಳು ಮತ್ತು ಸ್ನೇಹಿತರಾದ ವಾಸಿಂ, ಸೋಯೇಬ್ ಅವರೊಂದಿಗೆ ಚಿಂತಾಮಣಿಯಲ್ಲಿ ನಡೆಯುತ್ತಿದ್ದ ದರ್ಗಾ ಉತ್ಸವದಲ್ಲಿ ಪಾಲ್ಗೊಳ್ಳಲು ಮೈಸೂರಿನಿಂದ ರಾಜರಾಣಿ ಎಕ್ಸ್‌ಪ್ರೆಸ್ ರೈಲಿನಲ್ಲಿ ಪ್ರಯಾಣಿಸುತ್ತಿದ್ದರು.

ಈ ವೇಳೆ ರೈಲಿನಲ್ಲಿ ಸೀಟಿನ ವಿಚಾರಕ್ಕಾಗಿ ಸಹ ಪ್ರಯಾಣಿಕರೊಂದಿಗೆ ಆರೋಪಿಗಳಾದ ಖುರೇಶಿ, ವಾಸಿಂ, ಸೋಯೇಬ್ ಅವರು ಜಗಳ ತೆಗೆದಿದ್ದಾರೆ. ಮಾತಿನ ಚಕಮಕಿ ವೇಳೆ ಮಹಿಳೆಯೊಬ್ಬರ ಮೇಲೆ ಹಲ್ಲೆ ನಡೆಸಿದ್ದಾರೆ. ಮಧ್ಯ ಪ್ರವೇಶಿಸಿದ ಮಧುಗಿರಿಯ ಶಿವಕುಮಾರ್‌ಅವರು ಪ್ರಶ್ನೆ ಮಾಡಿದ್ದಾರೆ.

ಇದರಿಂದ ಕುಪಿತಗೊಂಡ ಆರೋಪಿಗಳು ಅವರ ಕುತ್ತಿಗೆಗೆ ಚಾಕುವಿನಿಂದ ಇರಿದಿದ್ದಾರೆ. ಸಾಲದೆಂಬಂತೆ ಅವರ ಕಿಬ್ಬೊಟ್ಟೆ, ತೋಳಿನ ಮೇಲೂ ಚಾಕುವಿನಿಂದ ಇರಿದಿದ್ದಾರೆ. ಇದರಿಂದ ಆತಂಕಗೊಂಡ ಶಿವಕುಮಾರ್‌ಅವರು ರೈಲಿನ ಚೈನು ಎಳೆದಿದ್ದಾರೆ. ಚನ್ನೇಗೌಡನದೊಡ್ಡಿ ಬಳಿ ನಿಂತಿದೆ. ರೈಲು ನಿಲ್ಲುತ್ತಿದ್ದಂತೆ ಆರೋಪಿಗಳು ರೈಲಿನಿಂದ ಇಳಿದು ಹೊರಗೆ ಓಡಲು ಪ್ರಾರಂಭಿಸಿದರು. ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕರು ಆರೋಪಿಗಳನ್ನು ಹಿಡಿಯುವಂತೆ ಕೂಗಿಕೊಂಡಿದ್ದಾರೆ.

ಇದರಿಂದ ಎಚ್ಚೆತ್ತ ಚನ್ನಪ್ಪನದೊಡ್ಡಿ ಗ್ರಾಮದ ಬಳಿ ಗೇಟ್‌ಮನ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ಕುಮಾರ ಅಡ್ಡ ಬಂದಾಗ ಆತನ ಮೇಲೂ ಆರೋಪಿಗಳು ಚಾಕುವಿನಿಂದ ಇರಿದು ಪರಾರಿಯಾಗಲು ಯತ್ನಿಸಿದ್ದಾರೆ. ತಕ್ಷಣ ಸ್ಥಳದಲ್ಲಿದ್ದ ಅದೇ ಗ್ರಾಮದ ಶಿವಕುಮಾರ್‌ಅವರೂ ಸಹ ರಕ್ಷಣೆಗೆ ಬಂದಾಗ ಅವರ ಮೇಲೂ ಹಲ್ಲೆ ನಡೆಸಿದ್ದಾರೆ.

ಈ ದೃಶ್ಯವನ್ನು ಕಂಡ ಸಾರ್ವಜನಿಕರು ತಕ್ಷಣ ಆರೋಪಿಗಳನ್ನು ಹಿಡಿದು ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಸಾರ್ವಜನಿಕರ ಧರ್ಮದೇಟಿನಿಂದ ಮೂವರು ಆರೋಪಿಗಳಿಗೂ ಗಾಯಗಳಾಗಿವೆ. ಸುದ್ದಿ ತಿಳಿದ ತಕ್ಷಣ ಸ್ಥಳಕ್ಕೆ ಧಾವಿಸಿದ ಮದ್ದೂರು ಗ್ರಾಮಾಂತರ ಠಾಣೆ ಪಿಎಸ್ಐ ನಾರಾಯಣ ಮತ್ತು ಸಿಬ್ಬಂದಿ ಗುಂಪನ್ನು ಚದುರಿಸಿ ಯುವಕರನ್ನು ವಶಕ್ಕೆ ಪಡೆದು ಗಾಯಾಳುಗಳನ್ನು ಮದ್ದೂರು ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ಕೊಡಿಸಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಈ ಸಂಬಂಧ ರೈಲ್ವೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಮುಂದಿನ ಕ್ರಮಕ್ಕೆಗೊಂಡಿದ್ದಾರೆ.

ಪ್ರಗತಿ ಪರಿಶೀಲನಾ ಸಭೆ | ಶಾಸಕರಿಂದ ಮಂಡ್ಯ ನಗರ ಹೈಟೆಕ್ ಮಾದರಿ ಅಭಿವೃದ್ಧಿ | ಮಾರುಕಟ್ಟೆ ಆವರಣದಲ್ಲಿ 126 ವಾಣಿಜ್ಯ ಮಳಿಗೆ ನಿರ್ಮಾಣ: ಡಾ.ಕುಮಾರ

ಮಂಡ್ಯ ನಗರಕ್ಕೆ ಕುಡಿವ ನೀರಿಗೆ ಯಾವುದೇ ಸಮಸ್ಯೆ ಇಲ್ಲ: ಡೀಸಿ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಮಂಡ್ಯ ನಗರಕ್ಕೆ ಸರಬರಾಜಾಗುವ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆ ಇಲ್ಲ. ಪ್ರತಿನಿತ್ಯ 32 ಎಂಎಲ್‌ಡಿ ನೀರು ಹರಿದು ಬರುತ್ತಿದೆ. ಮುಂದಿನ ದಿನಗಳಲ್ಲಿ ಕಡಿಮೆಯಾಗುವ ಸಾಧ್ಯತೆಗಳಿದ್ದರೂ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಯೂ ಆದ ನಗರಸಭೆ ಆಡಳಿತಾಧಿಕಾರಿ ಡಾ.ಕುಮಾರ ತಿಳಿಸಿದರು.

ನಗರಸಭೆ ಧರಣಪ್ಪ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ನಗರಸಭೆ ವ್ಯಾಪ್ತಿಯಲ್ಲಿ 585 ಕೊಳವೆ ಬಾವಿಗಳಿವೆ. ಎಲ್ಲವನ್ನೂ ಪರಿಶೀಲಿಸುವಂತೆ ತಿಳಿಸಲಾಗಿದೆ. ಈ ಕೊಳವೆ ಬಾವಿಗಳಲ್ಲಿ ನೀರಿನ ಸಂಗ್ರಹ ಕಡಿಮೆ ಇದ್ದಲ್ಲಿ ಅದಕ್ಕೆ ಪೂರಕ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ನಗರಸಭೆ ವ್ಯಾಪ್ತಿ 12 ವಾರ್ಡ್‌ಗಳಿಗೆ ಪ್ರತಿನಿತ್ಯ ನೀರು ಪೂರೈಕೆ ಮಾಡಲಾಗುತ್ತಿದೆ. 23 ವಾರ್ಡ್‌ಗಳಿಗೆ ದಿನ ಬಿಟ್ಟು ದಿನ ನೀರು ಪೂರೈಕೆಯಾಗುತ್ತಿದೆ. ಮುಂದಿನ ದಿನಗಳಲ್ಲಿ 23 ವಾರ್ಡ್‌ಗಳಿಗೆ ನಿತ್ಯ ನೀರು ಸರಬರಾಜು ಮಾಡುವ ವ್ಯವಸ್ಥೆಯನ್ನು ಉನ್ನತೀಕರಣಕ್ಕೆ ಸೂಚನೆ ನೀಡಲಾಗಿದೆ ಎಂದರು.



ಒಳಚರಂಡಿ ಮತ್ತು ಕುಡಿಯುವ ನೀರಿನ ಸರ್ವೇ ಮಾಡಲು 70 ಲಕ್ಷ ಬೇಕಾಗಿದೆ. ಅದಕ್ಕಾಗಿ ಈಗಾಗಲೇ ನಗರಸಭೆಯಿಂದ ಹಣ ಭರಿಸಲಾಗಿದೆ. ಏಜೆನ್ಸಿ ಗುರುತಿಸಿ ಸರ್ವೇ ಮಾಡಿ ಉನ್ನತೀಕರಣ ಮಾಡಲು ಸೂಚನೆ ನೀಡಲಾಗಿದೆ. ಸದ್ಯಕ್ಕೆ ಕುಡಿವ ನೀರಿನ ಸಮಸ್ಯೆ ಇಲ್ಲ. ಆದರೂ ನಾಗರೀಕರು ಬೇಸಿಗೆ ಕಾಲವಾದ್ದರಿಂದ ನೀರನ್ನು ಪೋಲಾಗತಂತೆ ಮಿತ ಬಳಕೆ ಮಾಡುವಂತೆ ಮನವಿ ಮಾಡಿದರು. ಕಾರು ತೊಳೆಯಲು, ಉದ್ಯಾನಕ್ಕೆ ನೀರು ಹಾಕುವಂತಹ ಕೆಲಸಗಳಿಗೆ ಶುದ್ಧ ಕುಡಿಯುವ ನೀರು ಬಳಕೆ ಮಾಡದಂತೆ ತಿಳಿಸಿದರು.

ಕೆಎಚ್‌ಬಿ ಬಡಾವಣೆಗೆ ಕುಡಿವ ನೀರು ಸರಬರಾಜು ಮಾಡಲು ಶಾಸಕರ ಆಸಕ್ತಿಯಿಂದ ಟೆಂಡರ್‌ಪ್ರಕ್ರಿಯೆ ಪೂರ್ಣಗೊಂಡಿದೆ. ಮುಂದಿನ ದಿನಗಳಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸಿ ಶೀಘ್ರ ನೀರೊದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ನಗರದ ಮಾರುಕಟ್ಟೆ ಆವರಣದಲ್ಲಿ 126 ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಿದ್ದು, ಅವುಗಳನ್ನು ವಿತರಿಸಲು ಕ್ರಮ ವಹಿಸಲಾಗಿದೆ. ಈ ಹಿಂದೆ 2023ರಲ್ಲಿ ಯಾರು ಅಲ್ಲಿ ವ್ಯಾಪಾರ ಮಾಡುತ್ತಿದ್ದರು ಅವರಿಗೆ ಕೊಡಬೇಕೆಂದು ಅಂದಿನ ನಗರಸಭೆ ಸಾಮಾನ್ಯ ಸಭೆಯಲ್ಲಿ ನಿರ್ಣಯ ಮಾಡಲಾಗಿದೆ. ನಮ್ಮ ಬಳಿ ಇರುವ ದಾಖಲಾತಿ ಪರಿಶೀಲಿಸಲಾಗುತ್ತಿದೆ. ಜೊತೆಗೆ ಬಾಡಿಗೆ ಕಟ್ಟಿ ವ್ಯಾಪಾರ ಮಾಡುತ್ತಿದ್ದ ವ್ಯಾಪಾರಸ್ಥರು ತಮ್ಮ ಬಳಿ ಇರುವ ದಾಖಲಾತಿಗಳನ್ನು ನಗರಸಭೆಗೆ ಹಾಜರುಪಡಿಸಿದರೆ ಪರಿಶೀಲಿಸಿ ಯಾರಿಗೂ ಅನ್ಯಾಯ ಆಗದಂತೆ ಕ್ರಮ ವಹಿಸಲಾಗುವುದು ಎಂದರು.

ನಗರಸಭೆ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತು ಫಲಕಗಳನ್ನು ತೆರವುಗೊಳಿಸುವಂತೆ ಸೂಚಿಸಲಾಗಿದೆ. ಜೊತೆಗೆ ಎಲ್ಲೆಲ್ಲಿ ಅಗತ್ಯವಿರುವ ಕಡೆಗಳಲ್ಲಿ ಜಾಹೀರಾತು ಫಲಕಗಳನ್ನು ಅಳವಡಿಸಲು ಕ್ರಮ ಕೊಗೊಳ್ಳುವಂತೆ ಪೌರಾಯುಕ್ತರಿಗೆ ಸೂಚಿಸಲಾಗಿದೆ ಎಂದರು.

ಮಂಡ್ಯ ನಗರವನ್ನು ಹೈಟೆಕ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಶಾಸಕರು ಮುಂದಾಗಿದ್ದಾರೆ. ಕೆಲವು ಕಾಮಗಾರಿಗಳು ನಡೆಯಬೇಕಿರುವುದರಿಂದ ಟೆಂಡರ್‌ಪ್ರಕ್ರಿಯೆ ಮುಗಿಸಿ ಕಾಮಗಾರಿಗೆ ಕಾರ್ಯಾದೇಶ ನೀಡಲು ಕ್ರಮ ವಹಿಸಲಾಗಿದೆ ಎಂದರು.

ಗುತ್ತಲು ಕೆರೆ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದೆ. ನಾವೂ ಸಹ ಪ್ರತಿ 15 ದಿನಗಳಿಗೊಮ್ಮೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದೇವೆ. ಶೀಘ್ರ ಕಾಮಗಾರಿ ಪೂರ್ಣಗೊಳಿಸುತ್ತೇವೆ ಎಂದು ಭರವಸೆ ನೀಡಿದರು.

ನಗರಸಭೆ ವ್ಯಾಪ್ತಿಯಲ್ಲಿ 268 ಜನಗಣತಿ ಕೇಂದ್ರಗಳನ್ನು ಮಾಡಲಾಗಿತ್ತು. ಮೇ 12ಕ್ಕೆ ನಗರ ವ್ಯಾಪ್ತಿಯಲ್ಲಿ ಜನಗಣತಿ ಪೂರ್ಣಗೊಳಿಸುವಂತೆ ಸೂಚಿಸಲಾಗಿತ್ತು. ನಮ್ಮ ಗಣತಿದಾರರು ಮೇ 5 ಕ್ಕೇ ಗಣತಿ ಕಾರ್ಯವನ್ನು ಪೂರ್ಣಗೊಳಿಸಿದ್ದಾರೆ. ಪೂರ್ಣಗೊಳಿಸಿದ್ದ ಗಣತಿದಾರರಿಗೆ ಪ್ರಮಾಣ ಪತ್ರ ವಿತರಿಸಲಾಗಿದೆ ಎಂದರು. ಸಭೆಯಲ್ಲಿ ಶಾಸಕ ಪಿ. ರವಿಕುಮಾರ್, ನಗರಸಭೆ ಪೌರಾಯುಕ್ತೆ ಪಂಪಶ್ರೀ, ನಗರ ಯೋಜನಾಭಿವೃದ್ಧಿ ಕೋಶದ ಯೋಜನಾಧಿಕಾರಿ ನರಸಿಂಹಮೂರ್ತಿ, ಮುಡಾ ಅಧ್ಯಕ್ಷ ಬಿ.ಪಿ.ಪ್ರಕಾಶ್, ಇತರ ಅಧಿಕಾರಿಗಳು ಪಾಲ್ಗೊಂಡಿದ್ದರು.

> ಮಂಡ್ಯ ನಗರವನ್ನು ಹೈಟೆಕ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಶಾಸಕರು ಮುಂದಾಗಿದ್ದಾರೆ. ಕೆಲವು ಕಾಮಗಾರಿಗಳು ನಡೆಯಬೇಕಿರುವುದರಿಂದ ಟೆಂಡರ್‌ಪ್ರಕ್ರಿಯೆ ಮುಗಿಸಿ ಕಾಮಗಾರಿಗೆ ಕಾರ್ಯಾದೇಶ ನೀಡಲು ಕ್ರಮ ವಹಿಸಲಾಗಿದೆ.
> • **ಡಾ.ಕುಮಾರ** ಜಿಲ್ಲಾಧಿಕಾರಿ

ಸುದ್ದಿ ಸಿಂಚನ

ಜಗದೀಶ್ ನಿಧನಕ್ಕೆ ಸಂತಾಪ

ಮಂಡ್ಯ: ಭಾರತೀಯ ಜನತಾ ಪಕ್ಷದ ಮುಖಂಡರು, ಮಾಜಿ ರಾಜ್ಯ ಕಾರ್ಯದರ್ಶಿಗಳು, ಅತ್ಯಂತ ಆಪ್ತರು ಆಗಿದ್ದ ಜಗದೀಶ್ ಹಿರೇಮನಿ ಅವರ ಅಕಾಲಿಕ ನಿಧನದ ಸುದ್ದಿ ಕೇಳಿ ದಿಗ್ಭ್ರಮೆಯಾಗಿದೆ. ತೀರಾ ಇತ್ತೀಚಿನವರೆಗೂ ಅವರೊಂದಿಗೆ ಒಡನಾಟ ಹೊಂದಿದ್ದು, ಹೀಗೆ ಅನಿರೀಕ್ಷಿತವಾಗಿ ವಿಧಿವಶರಾಗಿರುವುದು ಅತೀವ ಆಘಾತವನ್ನು ಉಂಟುಮಾಡಿದೆ. ಅವರ ನಿಧನದಿಂದ ಪಕ್ಷ ಒಬ್ಬ ಸಕ್ರಿಯ ಮುಖಂಡರನ್ನು ಕಳೆದುಕೊಂಡಿದ್ದು, ವೈಯಕ್ತಿಕವಾಗಿ ಕೂಡ ಭರಿಸಲಾಗದ ನಷ್ಟವಾಗಿದೆ ಎಂದು ಮೈಸೂರು ಸಿಂಡಿಕೇಟ್ ಸದಸ್ಯ ಡಾ.ಈ.ಸಿ.ನಿಂಗರಾಜ್‌ಗೌಡ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಎಬಿವಿಪಿ ಕಾಲದಿಂದಲೂ ಸಂಘಟನೆಯೇ ಉಸಿರೆಂದು ಬದುಕಿದ ಜಗದೀಶ್ ಅವರು ಕಾರ್ಯಕರ್ತರಾಗಿ, ಆತ್ಮೀಯ ಸ್ನೇಹಿತರಾಗಿದ್ದರು. ಕೇಂದ್ರ ಸರ್ಕಾರದ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರಾಗಿ, ರಾಜ್ಯ ಕಾರ್ಯದರ್ಶಿಗಳಾಗಿ ಪಕ್ಷಕ್ಕೆ ಗಣನೀಯ ಸೇವೆ ಸಲ್ಲಿಸಿದ್ದ ಅವರು, ಪ್ರಸ್ತುತ ಎಸ್.ಐ.ಆರ್‌ಜಾಗೃತಿ ಅಭಿಯಾನದ ರಾಜ್ಯ ಸಂಚಾಲಕರಾಗಿ ಕಾರ್ಯ ನಿರ್ವಹಿಸುತ್ತಿದ್ದರು. ದೇವರು ಅವರಿಗೆ ಸದ್ಗತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.

ಇಂದು ಜನರೊಂದಿಗೆ ಜನತಾದಳ ಕಾರ್ಯಕ್ರಮ

ಜೆಡಿಎಸ್ ಪಕ್ಷದ 25ನೇ ಬೆಳ್ಳಿ ಹಬ್ಬ ಆಚರಣೆಗೆ ಸಕಲ ಸಿದ್ಧತೆ | ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಸೇರಿದಂತೆ ಹಲವು ನಾಯಕರು ಭಾಗಿ

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಪಟ್ಟಣದ ಪಾಂಡವ ಕ್ರೀಡಾಂಗಣದ ಎದುರು ಮೇ 7ರಂದು ನಡೆಯಲಿರುವ ಮೇಲುಕೋಟೆ ವಿಧಾನ ಸಭಾ ವ್ಯಾಪ್ತಿಯ ಜನರೊಂದಿಗೆ ಜನತಾದಳ ಕಾರ್ಯಕ್ರಮ ಹಾಗೂ ಜೆಡಿಎಸ್ ಪಕ್ಷದ 25ನೇ ವರ್ಷದ ಬೆಳ್ಳಿಹಬ್ಬ ಆಚರಣೆಗೆ ಸಕಲ ಸಿದ್ಧತೆಗಳು ನಡೆಯುತ್ತಿವೆ.

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹಾಗೂ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು ನೇತೃತ್ವದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕಾಗಿ ಬೃಹತ್ ವೇದಿಕೆ ನಿರ್ಮಾಣ ಮಾಡಲಾಗಿದೆ. ಕಾರ್ಯಕ್ರಮದ ಹಿನ್ನೆಲೆಯಲ್ಲಿ ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ನಿಖಿಲ್ ಕುಮಾರಸ್ವಾಮಿ ಅವರ ಭಾವಚಿತ್ರಗಳಿರುವ ಫ್ಲೆಕ್ಸ್ ಗಳು, ಬ್ಯಾನರ್ ಗಳು ರಾರಾಜಿಸುತ್ತಿವೆ.

ಹೆದ್ದಾರಿ, ಮುಖ್ಯ ರಸ್ತೆಯ ಬದಿಗಳಲ್ಲಿ, ವಿದ್ಯುತ್ ಕಂಬಗಳಲ್ಲಿ ಜೆಡಿಎಸ್ ನಾಯಕರ ಫ್ಲೆಕ್ಸ್ ಗಳು ರಾರಾಜಿಸುತ್ತಿವೆ. ಇಂದು ಬೆಳಗ್ಗೆ 10 ಗಂಟೆಗೆ ಪಟ್ಟಣದ ಡಾ.ರಾಜ್ ಕುಮಾರ್‌ವೃತ್ತ (ಮಂಡ್ಯ ಸರ್ಕಲ್)ನಿಂದ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರನ್ನು ತೆರೆದ ವಾಹನದಲ್ಲಿ ಬೃಹತ್ ಮೆರವಣಿಗೆ ಮೂಲಕ ವೇದಿಕೆಗೆ ಕರೆತರಲಾಗುವುದು.

ಕಾರ್ಯಕ್ರಮದಲ್ಲಿ ಪಕ್ಷದ ರಾಜ್ಯ ಮಟ್ಟದ ನಾಯಕರು, ಜಿಲ್ಲಾ ಮಟ್ಟದ ಮಾಜಿ ಸಚಿವರು, ಶಾಸಕರು, ಮಾಜಿ ಶಾಸಕರು, ಎಂಎಲ್ಸಿ ಹಾಗೂ ಪಕ್ಷದ ಜಿಲ್ಲಾಧ್ಯಕ್ಷ ಭಾಗವಹಿಸಲಿದ್ದಾರೆ. ಮೇಲುಕೋಟೆ ವಿಧಾನಸಭಾ ವ್ಯಾಪ್ತಿಯ ಹಳ್ಳಿಹಳ್ಳಿಂದ ಸಾವಿರಾರು ಸಂಖ್ಯೆಯಲ್ಲಿ ಪಕ್ಷದ ಕಾರ್ಯಕರ್ತರು, ಮುಖಂಡರು, ಮಹಿಳೆಯರು, ಸಂಘ ಸಂಸ್ಥೆಗಳ ಅಧ್ಯಕ್ಷರು, ಸದಸ್ಯರ ಭಾಗವಹಿಸಲಿದ್ದಾರೆ.

ವಿಶೇಷವಾಗಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ. ಬರುವ ಎಲ್ಲ ಮುಖಂಡರು, ಕಾರ್ಯಕರ್ತರಿಗೂ ಊಟದ ವ್ಯವಸ್ಥೆಕಲ್ಪಿಸಲಾಗಿದೆ. ಬಿಸಿಲುಹೆಚ್ಚುಇರುವುದರಿಂದ ನಿಗಧಿತ ಸಮಯಕ್ಕೆ ಕಾರ್ಯಕ್ರಮ ಆರಂಭಿಸಿ ಮುಕ್ತಾಯಗೊಳಿಸಲು ಕ್ರಮ ವಹಿಸಲಾಗಿದೆ ಎಂದು ಜಿಪಂ ಮಾಜಿ ಸದಸ್ಯ ಸಿ.ಅಶೋಕ್ ತಿಳಿಸಿದ್ದಾರೆ.

ಜನರೊಂದಿಗೆ ಜನತಾದಳ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಈಗಾಗಲೇ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಯುವ ನಾಯಕ ಸಿ.ಪಿ.ಶಿವರಾಜು, ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ಮನ್ಮುಲ್ ನಿರ್ದೇಶಕ ಶಿವಕುಮಾರ್, ಜೆಡಿಎಸ್ ತಾಲೂಕು ಅಧ್ಯಕ್ಷ ಮಲ್ಲೇಶ್ ಸೇರಿದಂತೆ ಪಕ್ಷದ ವಿವಿಧ ಘಟಕಗಳ ಮುಂಚೂಣಿ ನಾಯಕರು ಹಳ್ಳಿಹಳ್ಳಿಗಳಿಗೆ ಭೇಟಿ ನೀಡಿ ಸಭೆ ಮಾಡಿ ಪಕ್ಷದ ಸ್ಥಳೀಯ ಹಿರಿಯ ಮುಖಂಡರು, ಯುವಕರೊಂದಿಗೆ ಚರ್ಚೆ ನಡೆಸಿ ಸಮಾರಂಭದಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ.


ಪಾಂಡವಪುರದಲ್ಲಿ ನಡೆಯುವ ಜನರೊಂದಿಗೆ ಜನತಾದಳ, ಜೆಡಿಎಸ್ ಪಕ್ಷದ 25ನೇ ವರ್ಷದ ಬೆಳ್ಳಿ ಹಬ್ಬ ಆಚರಣೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ವೇದಿಕೆ ಸಿದ್ಧತೆ, ಜೆಡಿಎಸ್ ನಾಯಕರ ಬೃಹತ್ ಕಟೌಟ್ ಗಳನ್ನು ಹಾಕಿರುವುದು

ರಾಜಕಾರಣಿಗಳು ಜನರಿಗಾಗಿ ಕೆಲಸ ಮಾಡಬೇಕು

ಎಸ್.ಎಂ.ಕೃಷ್ಣ ಪ್ರಶಸ್ತಿ ಸ್ವೀಕರಿಸಿದ ಮಾಜಿ ಸಚಿವ ಕಿಮ್ಮನೆ ರತ್ನಾಕರ್ ಸಲಹೆ | ಸಾರ್ವಜನಿಕ ಬದುಕು ಅನುಭವಿಸಿದವರಿಗಷ್ಟೇ ಗೊತ್ತು

• **ಕನ್ನಡಪ್ರಭ ವಾರ್ತೆ** ಮಂಡ್ಯ

ನಾನು ಗೆದ್ದರೆಷ್ಟೇ ದೇಶದ ಅಭಿವೃದ್ಧಿ ಎನ್ನುವ ಗುಂಗಿನಿಂದ ರಾಜಕಾರಣಿಗಳು ಹೊರಬಂದು ತಮ್ಮ ಭವಿಷ್ಯಕ್ಕಿಂತ ಸಮಾಜ, ಜನರಿಗಾಗಿ ಕೆಲಸ ಮಾಡಿದಾಗ ಮಾತ್ರ ರಾಜಕೀಯದಲ್ಲಿ ಯಶಸ್ಸು ಸಾಧ್ಯ ಎಂದು ಮಾಜಿ ಸಚಿವ ಕಿಮ್ಮನೆ ರತ್ನಾಕರ್‌ಅಭಿಪ್ರಾಯಪಟ್ಟರು.

ನಗರದ ಕೆವಿಎಸ್ ಭವನದಲ್ಲಿ ಕರ್ನಾಟಕ ಸಂಘ ದಿಂದ ಏರ್ಪಡಿಸಿದ್ದ ಸಮಾರಭದಲ್ಲಿ ಎಸ್.ಎಂ.ಕೃಷ್ಣ ಪ್ರಶಸ್ತಿ ಸ್ವೀಕರಿಸಿ ಮಾತನಾಡಿ, ಸಾರ್ವಜನಿಕ ಬದುಕು ಅನುಭವಿಸಿದವರಿಗಷ್ಟೇ ಗೊತ್ತು. ಅದು ರಾಜಕಾರಣಿಗಳಿಗೆ ಹೆಚ್ಚು ಗೊತ್ತಿರುತ್ತದೆ. ಇದೆಲ್ಲ ವನ್ನೂ ಎಸ್.ಎಂ.ಕೃಷ್ಣ ಅವರು ಹೇಗೆ ನಿರ್ವಹಿಸಿದರು ಎಂಬ ಪ್ರಶ್ನೆ ಕಾಡುತ್ತಿದೆ ಎಂದರು.

ರಾಜಕಾರಣವನ್ನು ಹೋರಾಟದಿಂದಲೇ ಬದಲಾವಣೆ ಮಾಡುತ್ತೇವೆ ಎನ್ನುವುದನ್ನು ಬಿಡಬೇಕು. ಜಾತಿ ವ್ಯವಸ್ಥೆ, ಧಾರ್ಮಿಕ ಅಸಮಾನತೆಯನ್ನು ಶೇ.100 ರಷ್ಟು ವಿದ್ಯಾವಂತರೆ ಮಾಡುತ್ತಾರೆ. ಅದನ್ನು ಬಿಡಬೇಕು ಎಂದು ಅಭಿಪ್ರಾಯಪಟ್ಟರು.

ನಾನು ವಕೀಲರಾನಗಿದ್ದಾಗ ರೈತರ ಎರಡು ಸಾವಿರ ಪ್ರಕರಣಗಳಿಗೆ ಹಣ ತೆಗೆದುಕೊಳ್ಳದೇ ಸಾರ್ವಜನಿಕರ ಸೇವೆ ಮಾಡಿದ್ದೇನೆ. ಬಡವರು ಇದನ್ನು ಈಗಲೂ ನೆನೆಯುತ್ತಾರೆ. ಆದರೆ, ಶ್ರೀಮಂತರಿಗೆ ಯಾವುದೇ ಸಹಾಯ ಮಾಡಿದರೂ ತಕ್ಷಣ ಮರೆಯುತ್ತಾರೆ ಎಂದರು.

ಮದುವೆ, ತಿಥಿ ಹಾಗೂ ಸಮಾರಂಭಗಳಿಗಿಂತ ಸದನಕ್ಕೆ ಹೋಗುವುದು ಶಾಸಕರಿಗೆ ಮುಖ್ಯ ಎನ್ನುವ ಭಾವನೆ ಜನರಿಗೆ ಬರಬೇಕು. ನಮ್ಮ ಕಾರ್ಯಕ್ರಮಗಳಿಗೆ ಬರಲಿಲ್ಲ ಎನ್ನುವುದನ್ನು ಬಿಟ್ಟು, ಸದನಕ್ಕೆ ಹೋಗಿ ಸಮಸ್ಯೆಗಳ ಬಗ್ಗೆ ಮಾತನಾಡಲಿ ಎಂಬುದು ತಿಳಿದಾಗ ಜನಪ್ರತಿನಿಧಿಗೆ ಜನರ ಸಮಸ್ಯೆ ಅರಿತು ಪರಿಹರಿಸಲು ಸಾಧ್ಯ ಎಂದರು.

ಶಾಸಕನಾದ ನಂತರ ನಾನು ಇಲ್ಲಿತನಕ ಸದನಕ್ಕೆ ಗೈರಾಗಿಲ್ಲ, ಬದಲಿಗೆ ವಿಳಂಬವಾಗಿಯೂ ಹೋ ಗಿಲ್ಲ. ಅಧಿಕಾರಿಗಳ ಬಳಿಯೇ ಹೋಗಿ ಜನರ ಕೆಲಸ ಮಾಡಿಸಿದ್ದೇನೆ. ರಾಜಕಾರಣಕ್ಕೆ ಬರಲು ಹಾಗೂ ಸೇವೆ ಮಾಡಲು ಎಸ್.ಎಂ.ಕೃಷ್ಣ ಅವರೇ ಮಾದರಿ. ದಿ.ಕೃಷ್ಣರ ಹೆಸರಿನಲ್ಲಿ ಕೊಟ್ಟಿರುವ ಪ್ರಶಸ್ತಿಯನ್ನು ಯಾವ ವಿಷಯದ ಮೇಲೆ ನಂಬಿಕೆ ಇಟ್ಟುಕೊಂಡಿ ದ್ದೀರೋ ಅದರ ನೆಲೆಗಟ್ಟಿನಲ್ಲಿ ನಡೆದು ನಂಬಿಕೆ ಉಳಿಸಿಕೊಳ್ಳುವೆ ಎಂದರು.

ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ನಿಜವಾಗಿಯೂ ಎಸ್.ಎಂ.ಕೃಷ್ಣರ ಪ್ರಶಸ್ತಿಗೂ ಮೀರಿದ ಯೋಗ್ಯರು ಎನ್ನುವ ವ್ಯಕ್ತಿತ್ವ ಕಿಮ್ಮನೆ ರತ್ನಾಕರ್‌ಅವರದ್ದಾಗಿದೆ. ರಾಮಮನೋಹರ ಲೋಹಿಯಾ ಅವರ ಸಿದ್ಧಾಂತ ಓದಿಕೊಂಡು ಬಂದವರು ಕಿಮ್ಮನೆ ಅವರು. ಜಗತ್ತಿನ ನಾಗಾಲೋಟದಲ್ಲಿ ಸಾಗಬೇಕೆನ್ನುವ ದೃಷ್ಟಿಯಿಂದ ಕಾರ್ಖಾನೆ ಸ್ಥಾಪನೆ ಮಾಡುವುದಷ್ಟೇ ಅಲ್ಲ ಅಥವಾರೈತರಜಮೀನುಗಳಿಗೆಪರಿಹಾರಕೊಡಿಸುವುದಲ್ಲ. ಬದಲಿಗೆ ರೈತರ ಮಕ್ಕಳು ವಿದ್ಯಾವಂತರಾಗಿ ಅಲ್ಲಿನ ತಾಂತ್ರಿಕತೆ ಜ್ಞಾನ ಬೆಳೆಸಿಕೊಂಡು ಕೆಲಸ ಮಾಡಲಿ ಎಂಬುದಾಗಿತ್ತು. ಅಂದಿನ ಅವರ ಈ ಕನಸಿನ ಶಕೆ ಇಂದಿಗೂ ಮುಂದುವರಿ ಯುತ್ತಿದೆ ಎಂದರು.


ಮಂಡ್ಯ ಕೆವಿಎಸ್ ಭವನದಲ್ಲಿ ನಡೆದ ಸಮಾರಭದಲ್ಲಿ ಮಾಜಿಸಚಿವ ಕಿಮ್ಮನೆ ರತ್ನಾಕರ ಅವರಿಗೆ ಎಸ್.ಎಂ.ಕೃಷ್ಣ ಪ್ರಶಸ್ತಿ ಪ್ರದಾನ ಮಾಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವ ರಾಯಸ್ವಾಮಿ, ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿದರು. ಬಿಜೆಪಿ ಮುಖಂಡ ಸಿದ್ದರಾಮಯ್ಯ, ಹಾಗೂ ನಾಗಮಂಗಲ ವಕೀಲ ಜೀರಹಳ್ಳಿ ರಮೇಶ್‌ಗೌಡ ಅವರು 'ಎಸ್.ಎಂ.ಕೃಷ್ಣ ಸ್ಥಳೀಯ ನೆಲೆಯಲ್ಲಿ' ವಿಷಯ ಮಂಡಿಸಿದರು. ವಿದ್ವಾನ್ ಮೈಸೂರು ಎನ್.ಶ್ರೀನಾಥ್ ಮತ್ತು ತಂಡದವರು ಕೃಷ್ಣಾಂಜಲಿ ಗೀತ ಗಾಯನ ನಡೆಸಿಕೊಟ್ಟು ಪ್ರೇಕ್ಷಕರ ಚಪ್ಪಾಳೆ ಗಿಟ್ಟಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು, ಶಾಸಕ ಪಿ.ರವಿಕುಮಾರ್, ಮಾಜಿ ಶಾ ಸಕ ಎಂ.ಶ್ರೀನಿವಾಸ್, ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಜಯಪ್ರಕಾಶಗೌಡ, ಲೋಕೇಶ್ ಚಂದಗಾಲು, ಎಚ್.ಡಿ.ಸೋಮಶೇಖರ್ ಪಾಲ್ಗೊಂಡಿದ್ದರು. ಎಸ್.ಎಂ.ಕೃಷ್ಣ ಸಾಹಿತ್ಯ-ಸಾಂಸ್ಕೃತಿಕ ನೆಲೆಯಲ್ಲಿ ಎಂಬುವ ವಿಷಯ ಕುರಿತು ಮಾತನಾಡಿದ ರಂಗಕರ್ಮಿ ಶ್ರೀನಿವಾಸ್ ಜಿ.ಕಪ್ಪಣ್ಣ, ಎಸ್.ಎಂ.ಕೃಷ್ಣ ಅವರಂತಹ ಸುಸಂಸ್ಕೃತ ಮುಖ್ಯಮಂತ್ರಿಯನ್ನು ನಾನು ಕಂಡಿಲ್ಲ. ಸಾಂಸ್ಕೃತಿಕ ಬೆಳವಣಿಗೆಗೆ ಸಾಕಷ್ಟು ಪ್ರೋತ್ಸಾಹ ನೀಡಿ, ಕಲಾವಿದರ ಬಗ್ಗೆ ಅಪಾರ ಗೌ ರವ ಇಟ್ಟುಕೊಂಡಿದ್ದರು. ಬೆಂಗಳೂರು ಐಟಿ- ಬಿಟಿ, ಸಿಲಿಕಾನ್ ಸಿಟಿ ಎನಿಸಿಕೊಳ್ಳಲು ಎಸ್.ಎಂ.ಕೃಷ್ಣರ ಕೊಡುಗೆ ಕಾರಣ ಎಂಬುದನ್ನು ಒತ್ತಿ ಹೇಳಿದರು.

ಬೆಂಗಳೂರನ್ನು ಸಾಂಸ್ಕೃತಿಕ ಮಹಾನಗರಿಯಾಗಿ ಬೆಳೆಸಬೇಕೆಂಬ ಮಹದಾಸೆಗೆ ಎಲ್ಲೋ ಕುತ್ತು ತರುವಂತಹ ಸನ್ನಿವೇಶಗಳು ಕಾಣುತ್ತಿವೆ. ಏಕೆಂದರೆ ಬೆಂಗಳೂರು ಒಂದು ಕೆಟ್ಟ ನಗರವಾಗಿ ಬೆಳೆಯುತ್ತಿದೆ. ಬೆಂಗಳೂರಿನ ಬ್ರಿಗೇಡ್ ರೋಡ್ ಮತ್ತು ಎಂ.ಜಿ. ರೋಡ್ ಒಂದು ದೊಡ್ಡ ಪಬ್ ಆಗಿದೆ. ನಮ್ಮದು ಎಂದು ಹೇಳಿಕೊಳ್ಳುವ ಸಂಸ್ಕೃತಿ ಮರೆಯಾಗುತ್ತಿದೆ. ಕುಡಿಯುವ ಹಾಗೂ ಕುಣಿಯುವ ನಾಗರೀಕತೆ ಬೆಳೆಯುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

> ಯುವ ಸಮೂಹವು ದೇಶದ ರಾಜಕಾರಣವನ್ನು ಹೇಗೆ, ಯಾವ ಕಡೆ ಕೊಂಡೊಯ್ಯಬೇಕೆಂದು ಆಲೋಚನೆ ಮಾಡಬೇಕು. ಪ್ರಸ್ತುತದಲ್ಲಿ ಸಾಹಿತ್ಯವನ್ನು ಜನರಿಗೆ ತಲುಪಿಸದೇ ಇದ್ದರೆ ದೇಶದ ಭವಿಷ್ಯಕ್ಕೆ ಖಂಡಿತಾ ಕಷ್ಟವಿದೆ. ಏಕೆಂದರೆ ಜಾತ್ಯತೀತ ಎಂದರೆ ಗೊತ್ತಿಲ್ಲ, ಅಂಬೇಡ್ಕರ್, ಗಾಂಧೀಜಿ ಅವರನ್ನು ಓದಿಕೊಂಡಿಲ್ಲ.
> • **ಕಿಮ್ಮನೆ ರತ್ನಾಕರ್** ಮಾಜಿ ಸಚಿವ

> ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರು ನಮ್ಮ ನಾಡಿಗೆ, ಜಿಲ್ಲೆಗೆ ಸಂಸ್ಕಾರ, ಶಿಸ್ತನ್ನು ಕಲಿಸಿಕೊಟ್ಟ ಅತ್ಯಂತ ಆದರ್ಶ ರಾಜಕಾರಣಿ. ಮೌನ ಸಾಧಕರಾಗಿಯೂ ಕೆಲಸ ಮಾಡಿಕೊಟ್ಟು ಬೆಂಗಳೂರನ್ನೇ ವಿಶ್ವದಲ್ಲಿಯೇ ಗುರತಿಸುವಂತೆ ಮಾಡಿದ್ದರು.
> • **ಎನ್.ಚಲುವರಾಯಸ್ವಾಮಿ** ಜಿಲ್ಲಾ ಉಸ್ತುವಾರಿ ಸಚಿವ

ಡೇರಿ ಕಟ್ಟಡ ನಿರ್ಮಾಣಕ್ಕೆ ಚಾಲನೆ



• **ಕನ್ನಡಪ್ರಭ ವಾರ್ತೆ** ಪಾಂಡವಪುರ

ತಾಲೂಕಿನ ತಿರುಮಲಾಪುರ (ತಿರ್ಲಾಪುರ) ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಕಟ್ಟಡ ನಿರ್ಮಾಣ ಕಾಮಗಾರಿಗೆ ಮನ್ಮುಲ್ ನಿರ್ದೇಶಕ ಸಿ.ಶಿವಕುಮಾರ್ ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿ, ಸಂಘದ ಸ್ವಂತ ಕಟ್ಟಡ ನಿರ್ಮಾಣಕ್ಕೆ ಒಕ್ಕೂಟದಿಂದ 5.50 ಲಕ್ಷ ಅನುದಾನ ನೀಡಲಾಗುತ್ತಿದೆ. ಜೊತೆಗೆ ಧರ್ಮಸ್ಥಳ ಸಂಘ ಹಾಗೂ ಸ್ಥಳೀಯರ ಸಹಕಾರ ಪಡೆಯಲಾಗಿದೆ. ನಾನು ನಿರ್ದೇಶಕನಾದ ಬಳಿಕ ಡೇರಿ ಕಟ್ಟಡಕ್ಕೆ ಶಂಕುಸ್ಥಾಪನೆ ಮಾಡುತ್ತಿರುವುದು ಇದೇ ಮೊದಲ ಕಟ್ಟಡ. ಹೀಗಾಗಿ ಹೆಚ್ಚಿನ ಆದ್ಯತೆ ನೀಡಿ ಸುಸಜ್ಜಿತ ಕಟ್ಟಡ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಡೇರಿ ದೇವಸ್ಥಾನ ಇದ್ದಂತೆ. ಇಲ್ಲಿ ಕಲಬೆರಕೆ, ರಾಜಕೀಯ ಮಾಡದೆ ಎಲ್ಲರೂ ಜತೆಗೂಡಿ ಅಭಿವೃದ್ಧಿಪಡಿಸಬೇಕು. ನಮ್ಮ ಗ್ರಾಮ, ನಮ್ಮ ಡೇರಿ ಎಂಬ ಭಾವನೆ ಮೂಡಿಸಿಕೊಳ್ಳಬೇಕು. ಯುವಕರು ಹೆಚ್ಚು ಹೈನುಗಾರಿಕೆಯಲ್ಲಿ ತೊಡಗಿಸಿಕೊಂಡು ಗುಣಮಟ್ಟದ ಹಾಲು ಪೂರೈಕೆ ಮಾಡಬೇಕು ಎಂದು ಮನವಿ ಮಾಡಿದರು.

ಈ ವೇಳೆ ಡೇರಿ ಅಧ್ಯಕ್ಷೆ ರಾಧಮ್ಮ, ಉಪಾಧ್ಯಕ್ಷೆ ಭಾಗ್ಯಮ್ಮ, ನಿರ್ದೇಶಕರಾದ ಜಯಲಕ್ಷ್ಮಮ್ಮ, ಶಿವರತ್ನಮ್ಮ, ಶ್ವೇತಾ, ಸುಶೀಲಮ್ಮ, ಲೀಲಾವತಿ, ಸಾವಿತ್ರಮ್ಮ, ಮಂಗಳಮ್ಮ, ಕಾರ್ಯದರ್ಶಿ ಶೋಭಾ ಅಶೋಕ್, ವಿಸ್ತರ್ಣಾಧಿಕಾರಿ ಉಷಾ, ಡಾ.ಸಂತೋಷ್, ಮುಖಂಡ ದೇಶವಳ್ಳಿ ಪ್ರಭಾಕರ್, ಯಜಮಾನರಾದ ಕರಿಗಿರೀಗೌಡ, ತಿಮ್ಮೇಗೌಡ, ಕೃಷ್ಣೇಗೌಡ, ನಾಗಣ್ಣ, ಲೋಕೇಶ್, ಟಿ.ಎಂ. ಚಲುವೇಗೌಡ, ರಾಮೇಗೌಡ, ವಿಜಯೇಂದ್ರ, ಟಿ.ಎಂ.ತಿಮ್ಮೇಗೌಡ, ವನರಾಜು, ಬೆಟ್ಟಯ್ಯ ಸೇರಿದಂತೆ ಗ್ರಾಮದ ಮುಖಂಡರು, ಯುವಕರು ಹಾಜರಿದ್ದರು.

ಮೈಸೂರಿನ ರೌಡಿಶೀಟರ್ ಬರ್ಬರವಾಗಿ ಹತ್ಯೆ

• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ

ನಟೋರಿಯಸ್ ರೌಡಿಶೀಟರ್‌ನನ್ನು ಆತನ ಸಹಚರರೇ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಮೈಸೂರಿನ ರೌಡಿಶೀಟರ್‌ಮಹಮದ್ ಸಾಹಿಲ್ ಆಲಮ್ ಅಲಿಯಾಸ್ ಚುವ್ವಾ (38) ಕೊಲೆಯಾದ ದುರ್ದೈವಿ. ಈತ ಕಳೆದ ನಾಲ್ಕೈದು ವರ್ಷಗಳಿಂದ ಪೊಲೀಸರ ಕಣ್ಣಿಗೆ ಮಣ್ಣೆರಚಿ ತಲೆಮರೆಸಿಕೊಂಡಿದ್ದ ಎಂದು ತಿಳಿದು ಬಂದಿದೆ.



ಬೇರೆಡೆ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿ ಮೈಸೂರು-ಬೆಂಗಳೂರು ಹೆದ್ದಾರಿಯ ಹಳ್ಳಿ ಮನೆ ಹೋಟೆಲ್ ಹಿಂಭಾಗ ಪೊದೆಯಲ್ಲಿ ಮಂಗಳವಾರ ತಡರಾತ್ರಿ ದೇಹ ಎಸೆದು ಹೋಗಿದ್ದಾರೆ. ಕಳೆದ ಒಂದು ತಿಂಗಳಿನಿಂದ ಮೈಸೂರು ಮತ್ತು ಮಂಡ್ಯ ಭಾಗಗಳಲ್ಲಿ ರಾತ್ರಿ ವೇಳೆ ಈತ ಓಡಾಡಿಕೊಂಡಿದ್ದ. ಹಳೆ ದ್ವೇಷದ ಹಿನ್ನೆಲೆಯಲ್ಲಿ ಈತನ ಜೊತೆಗಿದ್ದವರೇ ಸಂಚು ರೂಪಿಸಿ ಈ ಕೃತ್ಯ ಎಸಗಿದ್ದಾರೆ ಎಂದು ಪೊಲೀಸರು ಶಂಕಿಸಿದ್ದಾರೆ.

ಕೊಲೆಯಾದ ಸಾಹಿಲ್ ಚುವ್ವಾ ಮೈಸೂರಿನ ಉದಯಗಿರಿ, ಎನ್.ಆರ್.ಮೊಹಲ್ಲಾ, ಮಂಡಿ ಮೊಹಲ್ಲಾ ಹಾಗೂ ವಿ.ವಿ.ಪುರಂ ಸೇರಿದಂತೆ ತುಮಕೂರಿನಲ್ಲೂ ಹಲವು ಗಂಭೀರ ಪ್ರಕರಣಗಳಲ್ಲಿ ಭಾಗಿಯಾಗಿದ್ದ. ಸುಮಾರು 15ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಈತ ಪೊಲೀಸರಿಗೆ ಬೇಕಾಗಿದ್ದ ಎನ್ನಲಾಗಿದೆ.

ವಿಷಯ ತಿಳಿದು ಸ್ಥಳಕ್ಕೆ ಜಿಲ್ಲಾ ಎಸ್ಪಿ ಶೋಭರಾಣಿ, ಅಡಿಷನಲ್ ಎಸ್‌ಪಿ ತಿಮ್ಮಯ್ಯ, ಡಿವೈಎಸ್‌ಪಿ ಕೃಷ್ಣಕುಮಾರ್, ಟೌನ್ ಪೊಲೀಸ್ ಠಾಣೆ ಸಿಪಿಐ ಕುಮಾರ್ ಹಾಗೂ ಪಿಎಸ್‌ಐ ಗಳಾದ ವಿವೇಕಾನಂದ್, ಆನಂದ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಈ ಸಂಬಂಧ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತಲೆಮರೆಸಿಕೊಂಡಿರುವ ಆರೋಪಿಗಳ ಪತ್ತೆಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

ಗ್ರಾಮಗಳಲ್ಲಿ ಮದ್ಯ ಅಕ್ರಮ ಮಾರಾಟಕ್ಕೆ ಕಡಿವಾಣ ಹಾಕಿ

ಅಧಿಕಾರಿಗಳಿಗೆ ಶಾಸಕ ಎಚ್.ಟಿ.ಮಂಜು ಸೂಚನೆ



ಕೆ.ಆರ್.ಪೇಟೆ ಸಮೀಪದ ಚಿಕ್ಕೋನಹಳ್ಳಿ ರೇಷ್ಮೆ ತರಬೇತಿ ಕೇಂದ್ರದಲ್ಲಿ ಶಾಸಕ ಎಚ್.ಟಿ.ಮಂಜು ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

• **ಕನ್ನಡಪ್ರಭ ವಾರ್ತೆ** ಕೆ.ಆರ್.ಪೇಟೆ

ತಾಲೂಕಿನ ವಿವಿಧ ಗ್ರಾಮಗಳಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವಂತೆ ಶಾಸಕ ಎಚ್.ಟಿ.ಮಂಜು ಅಬಕಾರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣದ ಹೊರವಲಯದ ಚಿಕ್ಕೋನಹಳ್ಳಿ ರೇಷ್ಮೆ ತರಬೇತಿ ಕೇಂದ್ರದಲ್ಲಿ ವಿವಿಧ ಇಲಾಖೆಗಳ (ಕೆಡಿಪಿ) ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನ ಮೂಡನಹಳ್ಳಿ ಹಾಗೂ ದೊಡ್ಡಸೋಮನಹಳ್ಳಿ ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟದಿಂದ ಕಲುಷಿತ ವಾತಾವರಣ ನಿರ್ಮಾಣವಾಗಿರುವ ಬಗ್ಗೆ ಆ ಗ್ರಾಮಗಳ ಮಹಿಳೆಯರು ನಮಗೆ ದೂರು ಹೇಳುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಗ್ರಾಮಗಳಲ್ಲದೆ ತಾಲೂಕಿನಾದ್ಯಂತ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿದೆ. ಅಬಕಾರಿ ಅಧಿಕಾರಿಗಳು ಅಕ್ರಮ ಮದ್ಯ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ಗ್ರಾಮಗಳಲ್ಲಿ ಉತ್ತಮ ವಾತಾವರಣ ನಿರ್ಮಿಸಲು ಕ್ರಮ ವಹಿಸಬೇಕು ಎಂದು ಸೂಚಿಸಿದರು.

ರೈತರು ಸ್ವಾಧೀನದಲ್ಲಿರುವ ಭೂಮಿಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ದಬ್ಬಾಳಿಕೆ ಮಾಡಿ ರೈತರನ್ನು ಭೂಮಿಯಿಂದ ಒಕ್ಕಲೆಬ್ಬಿಸಲು ಪ್ರಯತ್ನಿಸಿದರೆ ನಾನು ಸಹಿಸುವುದಿಲ್ಲ. ರೈತರು ತಮ್ಮ ಬದುಕಿಗಾಗಿ ಅರಣ್ಯದ ಬಳಿ ಹತ್ತಾರು ವರ್ಷಗಳಿಂದ ಉಳುಮೆ ಮಾಡಿಕೊಂಡು ಬರುತ್ತಿರುತ್ತಾರೆ. ಆದರೆ, ಜಂಟಿ ಸರ್ವೆ ಮಾಡಿಸದೆ ಸದರಿ ಭೂಮಿಯಿಂದ ರೈತರನ್ನು ಒಕ್ಕಲೆಬ್ಬಿಸಿದರೆ ರೈತರೊಡಗೂಡಿ ಹೋರಾಟ ನಡೆಸಬೇಕಾಗುತ್ತದೆ. ಕೆರೆ ಕಟ್ಟೆಗಳ ಹೂಳು ತೆಗೆದು ಅಭಿವೃದ್ಧಿ ಮಾಡುವ ರೈತರನ್ನು ತಡೆಯುವುದು ಸರಿಯಲ್ಲ ಎಂದು ಎಚ್ಚರಿಕೆ ನೀಡಿದರು.


ಹಲವು ಗ್ರಾಮಗಳಲ್ಲಿ ಜೆಜೆಎಂ ಕೆಲಸ ಪೂರ್ಣಗೊಳ್ಳದೇ ಇದ್ದರೂ ಸಹ ಗ್ರಾಪಂ ಕೆಲಸ ಪೂರ್ಣಗೊಂಡಿದೆ ಎಂದು ಚಾರ್ಜ್ ತೆಗೆದುಕೊಳ್ಳುತ್ತಿರುವುದು ಕಂಡು ಬರುತ್ತಿದೆ. ಗುತ್ತಿಗೆದಾರರಿಗೆ ಅನುಕೂಲ ಮಾಡಿಕೊಟ್ಟು ಸಾರ್ವಜನಿಕರ ಕೆಲಸ ಅರ್ಧಕ್ಕೆ ನಿಂತು ತೊಂದರೆಯಾದರೆ ಸಂಬಂಧಪಟ್ಟ ಪಿಡಿಒ ಹಾಗೂ ಜಿಪಂ ಕುಡಿಯುವ ನೀರು ವಿಭಾಗದ ಎಂಜಿನಿಯರ್ ಅವರನ್ನು ಹೊಣೆಗಾರರನ್ನಾಗಿ ಮಾಡಿ ಸೂಕ್ತ ಕಾನೂನು ಕ್ರಮಕ್ಕೆ ಮೇಲಾಧಿಕಾರಿಗಳಿಗೆ ಪತ್ರ ಬರೆಯಬೇಕಾಗುತ್ತದೆ ಎಂದು ಎಚ್ಚರಿಸಿದರು.

ಬಣ್ಣೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ರೈತರ ಹೆಸರಿನಲ್ಲಿ ಜಮೀನು ಸಾಗುವಳಿ ಚೀಟಿಯಿದ್ದು ಭೂಮಿ ರೈತರಿಗೆ ಸೇರಿದ್ದರೂ ಸಹ ಅಧಿಕಾರಿಗಳು ರೈತರಿಗೆ ಪರಿಹಾರ ಕೊಡಿಸದೇ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗೆ ಗುತ್ತಿಗೆ ಪಡೆದುಕೊಂಡಿರುವ ಫೇವರೀಚ್ ಮೆಘಾ ಫುಡ್‌ಪಾರ್ಕ್ ಮಾಲೀಕನಿಗೆ ಅನುಕೂಲ ಮಾಡಿಕೊಡುತ್ತಿರುವ ಕಾರಣ ಹಲವು ರೈತರಿಗೆ ಅನ್ಯಾಯವಾಗಿದೆ ಎಂದರು.

ಇತ್ತ ಭೂಮಿಯೂ ಇಲ್ಲ, ಅತ್ತ ಪರಿಹಾರವೂ ಇಲ್ಲದೆ ರೈತರು ಕಂಗಾಲಾಗಿದ್ದಾರೆ. ಈ ಬಗ್ಗೆ ಕಂದಾಯ ಇಲಾಖೆ ಹಾಗೂ ಸರ್ವೆ ಇಲಾಖೆಯ ಅಧಿಕಾರಿಗಳು ತುರ್ತು ಗಮನ ಹರಿಸಿ ಸಾಗುವಳಿ ಚೀಟಿ, ಆರ್.ಟಿ.ಸಿ ಇತರೆ ದಾಖಲೆಗಳು ಇರುವ ರೈತರಿಗೆ ಪರಿಹಾರ ಪಡೆದುಕೊಳ್ಳಲು ಅಗತ್ಯ ಸಹಕಾರ ನೀಡಬೇಕು ಎಂದು ತಾಕೀತು ಮಾಡಿದರು.

ಸಭೆಗೆ ಹಲವು ಇಲಾಖೆಗಳ ಅಧಿಕಾರಿಗಳ ಗೈರು, ಪ್ರಗತಿ ಹಿನ್ನೆಡೆ ಕುರಿತು ಅತೃಪ್ತಿ ವ್ಯಕ್ತಪಡಿಸಿ ನೋಟಿಸ್ ಜಾರಿ ಮಾಡುವಂತೆ ತಾಪಂ ಇಒ ಕೆ.ಸುಷ್ಮ ಅವರಿಗೆ ಸಲಹೆ ನೀಡಿದರು.

ಸಭೆಯಲ್ಲಿ ತಹಸೀಲ್ದಾರ್ ಡಾ.ಎಸ್.ಯು.ಅಶೋಕ್, ತಾಪಂ ಆಡಳಿತಾಧಿಕಾರಿ ಮೀನುಗಾರಿಕೆ ಜಿಲ್ಲಾ ನಿರ್ದೇಶಕ ಬಾಬಾಸಾಬ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಎ.ಬಿ.ಕುಮಾರ್, ಪಾಂಡವಪುರ ಉಪ ವಿಭಾಗದ ಸಹಾಯಕ ನಿಬಂಧಕ ನಾಗಭೂಷಣ್, ತಾಪಂ ಇಒ ಕೆ.ಸುಷ್ಮ, ಯೋಜನಾಧಿಕಾರಿ ಎಂ.ಶ್ರೀನಿವಾಸ್, ಕೆ.ಡಿ.ಪಿ ಸಮಿತಿ ಸದಸ್ಯರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.



ಮೇಲುಕೋಟೆ ಕ್ಷೇತ್ರದಲ್ಲಿ ಅಭಿವೃದ್ಧಿಯ ಮೈಲಿಗಲ್ಲುಗಳು



200 ಕೋಟಿ ರು. ವೆಚ್ಚದಲ್ಲಿ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ

ಒಂದೇ ವರ್ಷದಲ್ಲಿ ಮೂರು ಚುನಾವಣೆ ಎದುರಿಸಿರುವ ದಾಖಲೆ

ಕಳೆದ ಎರಡು ದಶಕದಲ್ಲಿ ಮೇಲುಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಸಿ.ಎಸ್.ಪುಟ್ಟರಾಜು ಅವರು ಅಭಿವೃದ್ಧಿಯ ಹೊಸ ಮೈಲುಗಲ್ಲುಗಳನ್ನೇ ಸೃಷ್ಟಿಸಿದ್ದಾರೆ. ಇವರು ಕ್ಷೇತ್ರಕ್ಕೆ ನೀಡಿರುವಷ್ಟು ಶಾಶ್ವತ ಕೊಡುಗೆಗಳನ್ನು ಮತ್ತಾವ ರಾಜಕಾರಣಿಯೂ ನೀಡುವುದಕ್ಕೆ ಸಾಧ್ಯವಾಗಿಲ್ಲ. ಅವರು ಅಧಿಕಾರವಧಿಯಲ್ಲಿದ್ದಷ್ಟು ಕಾಂಗ್ರೆಸ್-ಬಿಜೆಪಿ ಸರ್ಕಾರಗಳೇ ಹೆಚ್ಚು ಕಾಲ ಅಧಿಕಾರದಲ್ಲಿದ್ದರೂ ಕ್ಷೇತ್ರಕ್ಕೆ ಅಭಿವೃದ್ಧಿ ಯೋಜನೆಗಳು ನಿರಂತರವಾಗಿ ಹರಿದುಬರುತ್ತಿದ್ದವು. ಪಕ್ಷ ಯಾವುದೇ ಇರಲಿ, ನಾಯಕ ಯಾರೇ ಆಗಿರಲಿ ಕ್ಷೇತ್ರದ ಅಭಿವೃದ್ಧಿಗೆ ಬೆಂಬಲವಾಗಿ ನಿಲ್ಲುವಂತೆ ಮಾಡುವಲ್ಲಿ ಯಶಸ್ವಿಯಾಗಿದ್ದರು. ಅಂತಹದೊಂದು ವಿಶಿಷ್ಟ ವ್ಯಕ್ತಿತ್ವ ಮತ್ತು ಶಕ್ತಿಯನ್ನು ಸಿ.ಎಸ್.ಪುಟ್ಟರಾಜು ಸಂಪಾದಿಸಿದ್ದರು.

ವಿದ್ಯುತ್ ಕ್ಷೇತ್ರ

2004ರಲ್ಲಿ ಶಾಸಕರಾಗಿದ್ದ ಸಮಯದಲ್ಲಿ ಪಾಂಡವಪುರದ ವಿ.ವಿ.ನಗರದಲ್ಲಿ ಒಂದೇ ಒಂದು ವಿದ್ಯುತ್ ಉಪಕೇಂದ್ರವಿತ್ತು. ಇಡೀ ತಾಲೂಕಿಗೆ ಆ ಒಂದು ಕೇಂದ್ರದಿಂದ ವಿದ್ಯುತ್ ಸರಬರಾಜು ಮಾಡಬೇಕಿತ್ತು. ಕಳೆದ 20 ವರ್ಷದಲ್ಲಿ ನಾರಾಯಣಪುರ, ಚಿನಕುರಳಿ, ಬನ್ನಂಗಾಡಿ, ಬೇಬಿ, ಕನಗನಮರಡಿ, ಮಹದೇಶ್ವರಪುರ, ಜಕ್ಕನಹಳ್ಳಿ, ಸುಂಕಾತೊಣ್ಣೂರು, ದುದ್ದ ಹೋಬಳಿಯ ವಿ.ಸಿ.ಫಾರಂ, ಜಿ.ಮಲ್ಲೀಗೆರೆ, ಬೇವುಕಲ್ಲು ಗ್ರಾಮಗಳಲ್ಲಿ 11.5 ಕೆ.ವಿ. ಸಾಮರ್ಥ್ಯದ ವಿದ್ಯುತ್ ಸಬ್‌ಸ್ಟೇಷನ್‌ಗಳನ್ನು ತಲಾ 8 ಕೋಟಿ ರು. ಅನುದಾನದಲ್ಲಿ ನಿರ್ಮಿಸಲಾಗಿದೆ. ಪಾಂಡವಪುರ ವಿಧಾನಸಭಾ ಕ್ಷೇತ್ರದಲ್ಲಿದ್ದ ಶೀಳನೆರೆ, ಹುಯಿಗೋನಹಳ್ಳಿಯಲ್ಲಿ 220 ಕೆವಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಿ ಕೆ.ಆರ್.ಪೇಟೆ ಮತ್ತು ಪಾಂಡವಪುರಕ್ಕೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಪಾಂಡವಪುರ ತಾಲೂಕಿನ ಆನಾಳು ಗ್ರಾಮದಲ್ಲಿ ಮತ್ತೊಂದು 220 ಕೆವಿ ವಿದ್ಯುತ್ ಉಪಕೇಂದ್ರ ಸ್ಥಾಪನೆಗೆ 10 ಎಕರೆ ಭೂಮಿಯನ್ನು ಪಡೆಯಲಾಗಿತ್ತು.

ಶೈಕ್ಷಣಿಕ ಸೇವೆಯಲ್ಲಿ ಪುತ್ರ ಶಿವರಾಜ್

ಅಮೆರಿಕಾದಲ್ಲಿದ್ದ ತಮ್ಮ ಪುತ್ರ ಶಿವರಾಜ್ ಅವರನ್ನು ತವರೂರಿಗೆ ಕರೆಸಿಕೊಂಡು ಗ್ರಾಮಾಂತರ ಪ್ರದೇಶದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕೆಂಬ ಧ್ಯೇಯದೊಂದಿಗೆ ಪುಟ್ಟರಾಜು ಅವರ ತಂದೆ-ತಾಯಿ ಹೆಸರಿನಲ್ಲಿ ಎಸ್‌ಟಿಜಿ ವಿದ್ಯಾಸಂಸ್ಥೆಯನ್ನು ಸ್ಥಾಪಿಸಿದರು. ಕೆಲವೇ ವರ್ಷಗಳಲ್ಲಿ ರಾಜ್ಯದಲ್ಲಿ ಹೆಸರುವಾಸಿಯಾದ ವಿದ್ಯಾಸಂಸ್ಥೆಯಾಗಿ ಬೆಳೆದು ನಿಂತಿದೆ. ಪಿಯು ವಿಭಾಗದಲ್ಲಿ ಜಿಲ್ಲೆಗೆ ಟಾಪರ್ ಎನಿಸಿದ್ದರೆ ಪದವಿ ಕಾಲೇಜು ವಿಶ್ವವಿದ್ಯಾನಿಲಯ ವಿಭಾಗದ ಫಲಿತಾಂಶದಲ್ಲಿ ಟಾಪರ್ ಆಗಿದೆ. ಸಿಬಿಎಸ್‌ಸಿ ಶಾಲೆಯನ್ನು ಅಮೆರಿಕಾದ ಸಾಗಿನವ ಯೂನಿವರ್ಸಿಟಿ ಜೊತೆ ಒಪ್ಪಂದ ಮಾಡಿಕೊಂಡು ಈ ಭಾಗದ ಶಿಕ್ಷಣ, ಸಂಸ್ಕೃತಿಯನ್ನು ಪರಸ್ಪರ ವಿನಿಮಯ ಮಾಡಿಕೊಳ್ಳಲಾಗುತ್ತಿದೆ.

ಪಾಂಡವಪುರಕ್ಕೆ ಹೊಸ ಕಳೆ

ಪಾಂಡವಪುರ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯನ್ನು 100 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಿದರು. ಮಿನಿ ವಿಧಾನಸೌಧ ನಿರ್ಮಾಣ, ಸುಸಜ್ಜಿತ ಬಸ್ ನಿಲ್ದಾಣ, ಬಸ್ ಡಿಪೋ, ಕ್ರೀಡಾಂಗಣ, ಉದ್ಯಾನವನಗಳು, ಪಟ್ಟಣದ ಜನರಿಗೆ ಕಾವೇರಿ ನದಿಯಿಂದ ಕುಡಿಯುವ ನೀರು ಯೋಜನೆ, ಒಳಚರಂಡಿ ವ್ಯವಸ್ಥೆ, ಸುಮಾರು 50 ಕೋಟಿ ರು. ವೆಚ್ಚದಲ್ಲಿ ಪಟ್ಟಣದ ರಸ್ತೆಗಳ ಅಗಲೀಕರಣ. ಶಿವಳ್ಳಿ, ಚಿನಕುರಳಿ, ಜಕ್ಕನಹಳ್ಳಿ, ಹಿರೇಮರಳಿಯಲ್ಲಿ ಸಮುದಾಯ ಆರೋಗ್ಯಕೇಂದ್ರಗಳ ಸ್ಥಾಪನೆ ಮಾಡಿದ್ದಾರೆ.

ಹೈಕೋರ್ಟ್ ಮಾದರಿಯಲ್ಲಿ ಸರ್ಕಾರಿ ಶಾಲೆ

ಪಾಂಡವಪುರ ತಾಲೂಕಿನ ಟಿ.ಎಸ್.ಛತ್ರ ಗ್ರಾಮದಲ್ಲಿ ಸುಪ್ರೀಂಕೋರ್ಟ್ ನ್ಯಾಯಾಧೀಶರಾಗಿದ್ದ ಇ.ಎಸ್. ವೆಂಕಟರಾಮಯ್ಯ ಅವರ ಸವಿನೆನಪಿಗಾಗಿ ಸರ್ಕಾರಿ ಪ್ರೌಢಶಾಲೆಯನ್ನು ಹೈಕೋರ್ಟ್ ವಿನ್ಯಾಸದಲ್ಲಿ ನಿರ್ಮಿಸಿದ್ದಾರೆ. 3.50 ಕೋಟಿ ರು. ವೆಚ್ಚದಲ್ಲಿ ಶಾಲೆ ನಿರ್ಮಾಣಗೊಂಡಿದ್ದು, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು 20 ಲಕ್ಷ ರು. ನೀಡಿದ್ದಾರೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಿಎಸ್‌ಆರ್ ಅನುದಾನದಲ್ಲಿ ಹಣ ನೀಡುವ ಭರವಸೆ ನೀಡಿದ್ದು, ಉಳಿದ ಹಣವನ್ನು ಎಸ್‌ಟಿಜಿ ವಿದ್ಯಾಸಂಸ್ಥೆಯಿಂದ ತೊಡಗಿಸಿದ್ದಾರೆ. ಇ.ಎಸ್.ವೆಂಕಟರಾಮಯ್ಯನವರ ಪುತ್ರಿ ಈಗ ಸುಪ್ರೀಂಕೋರ್ಟ್ ಜಡ್ಜ್ ಆಗಿದ್ದರೆ, ಅವರ ತಮ್ಮನ ಮಗ ಹೈಕೋರ್ಟ್ ನ್ಯಾಯಮೂರ್ತಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಶಾಲೆಯನ್ನು ಹೆಚ್.ಡಿ.ಕುಮಾರಸ್ವಾಮಿ ಅವರು ದತ್ತು ಪಡೆದುಕೊಂಡಿದ್ದು, ರಾಜ್ಯಕ್ಕೇ ಮಾದರಿ ಶಾಲೆಯಾಗಿ ಮಾಡುವ ಪಣ ತೊಟ್ಟಿದ್ದಾರೆ.

ಮಂಡ್ಯದಲ್ಲಿ ರೈತ ಸಭಾಂಗಣ ಪುನಶ್ಚೇತನ, ವಿ.ಸಿ.ಫಾರಂನಲ್ಲಿ ಕ್ರೀಡಾಂಗಣ

ಮಂಡ್ಯ ನಗರದಲ್ಲಿರುವ ಪಾರಂಪರಿಕ ಕಟ್ಟಡ ಎನಿಸಿರುವ ರೈತಸಭಾಂಗಣ ಶಿಥಿಲಾವಸ್ಥೆಯಲ್ಲಿದ್ದು, ಅದರ ಪುನಶ್ಚೇತನಕ್ಕೆ ಕೇಂದ್ರಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಗಮನಸೆಳೆದು 4.75 ಕೋಟಿ ರು. ಹಣ ಬಿಡುಗಡೆ ಮಾಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಅದರ ಕಾಮಗಾರಿ ನಡೆಯುತ್ತಿದೆ. ಮೇಲುಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ವಿ.ಸಿ.ಫಾರಂನಲ್ಲಿ ಕೇಂದ್ರದ ಅನುದಾನದಿಂದ ಭವ್ಯವಾದ ಒಳಾಂಗಣ ಕ್ರೀಡಾಂಗಣ ತರುವಲ್ಲಿ ಯಶಸ್ವಿಯಾಗಿರುವ ಸಿ. ಎಸ್.ಪುಟ್ಟರಾಜು, ಎರಡು ತಿಂಗಳ ಹಿಂದಷ್ಟೇ ಹೆಚ್.ಡಿ. ಕುಮಾರಸ್ವಾಮಿ ಅವರಿಂದ ಶಂಕುಸ್ಥಾಪನೆ ನೆರವೇರಿಸಿದ್ದಾರೆ.

ಸಣ್ಣ ನೀರಾವರಿ ಖಾತೆಗೆ ಹೊಸ ಚೈತನ್ಯ

ಸಣ್ಣ ನೀರಾವರಿ ಖಾತೆ ಮಂತ್ರಿಯಾಗುವುದಕ್ಕೆ ಹಿಂದೇಟು ಹಾಕುವವರೇ ಹೆಚ್ಚು. ಆದರೂ 2018ರಲ್ಲಿ ಜೆಡಿಎಸ್-ಕಾಂಗ್ರೆಸ್ ಸಮ್ಮಿಶ್ರ ಸರ್ಕಾರದಲ್ಲಿ ಮುಖ್ಯಮಂತ್ರಿಯಾಗಿದ್ದ ಹೆಚ್.ಡಿ.ಕುಮಾರಸ್ವಾಮಿ ತಮಗೆ ಕೊಟ್ಟ ಸಣ್ಣ ನೀರಾವರಿ ಖಾತೆಯ ಜವಾಬ್ದಾರಿ ವಹಿಸಿಕೊಂಡು ಅಲ್ಪಾವಧಿಯಲ್ಲೇ ಎಲ್ಲರೂ ಅತ್ತ ತಿರುಗಿನೋಡುವಂತೆ ಮಾಡಿದರು. ಬಳಘಟ್ಟ ಏತನೀರಾವರಿ ಯೋಜನೆಗೆ 190 ಕೋಟಿ ರು., ಶ್ಯಾದೇನಹಳ್ಳಿ ಏತ ನೀರಾವರಿ ಯೋಜನೆಗೆ 86 ಕೋಟಿ ರು., ಸುಂಕಾತೊಣ್ಣೂರು ಏತ ನೀರಾವರಿಗೆ 36 ಕೋಟಿ ರು., ಬಳ್ಳೇಕುಪ್ಪೆ ಏತ ನೀರಾವರಿಗೆ 10 ಕೋಟಿ ರು., ಬೇಬಿಬೆಟ್ಟ ಏತ ನೀರಾವರಿ ಯೋಜನೆಗೆ 10 ಕೋಟಿ ರು. ನೀಡಿ ಅನುಷ್ಠಾನಕ್ಕೆ ಮುಂದಾಗಿದ್ದರು. ಹಲವಾರು ಚೆಕ್‌ಡ್ಯಾಂಗಳನ್ನು ನಿರ್ಮಿಸಿ ಚೈತನ್ಯ ನೀಡಿದರು. ಸಣ್ಣ ನೀರಾವರಿ ಸಚಿವರಾಗಿದ್ದ ಸಮಯದಲ್ಲಿ ಬರಗಾಲದಿಂದ ಶ್ರೀ ಕ್ಷೇತ್ರ ಧರ್ಮಸ್ಥಳದಲ್ಲಿ ನೀರಿಗೆ ತೊಂದರೆ ಎದುರಾಗಿತ್ತು. ಈ ವೇಳೆ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆಯವರು ಭಕ್ತರು ಕ್ಷೇತ್ರಕ್ಕೆ ಬರದಂತೆ ಮನವಿ ಮಾಡಿದ್ದರು. ಈ ವಿಷಯ ತಿಳಿದ ಸಚಿವರಾಗಿದ್ದ ಸಿ.ಎಸ್.ಪುಟ್ಟರಾಜು ಅವರು ಮುಖ್ಯಮಂತ್ರಿಯಾಗಿದ್ದ ಹೆಚ್.ಡಿ.ಕುಮಾರಸ್ವಾಮಿ ಅವರ ಮನವೊಲಿಸಿ 16 ಕೋಟಿ ರು. ಹಣವನ್ನು ಒಂದೇ ಕಂತಿನಲ್ಲಿ ಬಿಡುಗಡೆಗೊಳಿಸಿ ನೇತ್ರಾವತಿ ನದಿಯಿಂದ ಕುಡಿಯುವ ನೀರಿಗೆ ವ್ಯವಸ್ಥೆ ಮಾಡಿಕೊಟ್ಟರು. ಇದೀಗ 200 ಕೋಟಿ ರು. ವೆಚ್ಚದಲ್ಲಿ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುತ್ತಿದೆ.





ಶಿಕ್ಷಣ ಕ್ಷೇತ್ರ


ಪಾಂಡವಪುರ ತಾಲೂಕಿನ ಮೇಲುಕೋಟೆ, ಕ್ಯಾತನಹಳ್ಳಿ ಹಾಗೂ ಪಾಂಡವಪುರಕ್ಕೆ ಮೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನಾರಾಯಣಪುರ, ಸುಂಕಾತೊಣ್ಣೂರು, ಬನ್ನಂಗಾಡಿ, ಅರಳಕುಪ್ಪೆ, ಚಿಕ್ಕಬ್ಯಾಡರಹಳ್ಳಿಗೆ ಪದವಿಪೂರ್ವ ಕಾಲೇಜುಗಳು, ಹುಳಿಗೆರೆ ಮೊರಾಜಿ ವಸತಿ ಶಾಲೆ, ಬೇಬಿ ವಸತಿ ಶಾಲೆ, ಕಟ್ಟೇರಿಯಲ್ಲಿ ಕಸ್ತೂರಿಬಾ ಶಾಲೆ, ಎಲೆಕೆರೆ ಹ್ಯಾಂಡ್‌ಪೋಸ್ಟ್‌ನಲ್ಲಿ ಆದರ್ಶ ವಸತಿ ಶಾಲೆ, ಚಿನಕುರಳಿಯಲ್ಲಿ ಟಾಟಾ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯವರಿಂದ ಅತ್ಯಾಧುನಿಕ ಐಟಿಐ ಕಾಲೇಜು, ಮೂಡಲಕೊಪ್ಪಲು ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆ, ದುದ್ದ ಹೋಬಳಿಗೆ ಅಂಬೇಡ್ಕರ್ ಶಾಲೆ, ಮಹದೇಶ್ವರಪುರದಲ್ಲಿ ಅಂಬೇಡ್ಕರ್ ವಸತಿ ಶಾಲೆ ಸೇರಿದಂತೆ ಹಲವು ಹಾಸ್ಟೆಲ್ ಕಟ್ಟಡಗಳನ್ನು ನಿರ್ಮಿಸಿರುವ ಶ್ರೇಯಸ್ಸು ಸಿ.ಎಸ್.ಪುಟ್ಟರಾಜು ಅವರದ್ದು. ಹಿರಿಯರು ನಡೆಸಿಕೊಂಡು ಬಂದಂತಹ ಪಾಂಡವಪುರ ಬಾಲಕಿಯರ ವಿದ್ಯಾಸಂಸ್ಥೆ, ವಿಜಯಾ ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ಜೊತೆ ಜವಾಬ್ದಾರಿ ಹೊತ್ತು, ಆಡಳಿತ ಮಂಡಳಿ ನಿರ್ದೇಶಕರ ಸಹಕಾರದೊಂದಿಗೆ ವಿದ್ಯಾಸಂಸ್ಥೆಗಳಿಗೆ ಹೊಸ ಕಟ್ಟಡಗಳನ್ನು ಸ್ವಂತ ಹಣದಲ್ಲಿ ನಿರ್ಮಿಸಿಕೊಡುವುದರೊಂದಿಗೆ ಗ್ರಾಮೀಣ ಮಕ್ಕಳ ಶಿಕ್ಷಣಕ್ಕೆ ಆಸರೆಯಾಗಿದ್ದಾರೆ.



ಸಾಹಿತ್ಯ, ಸಾಂಸ್ಕೃತಿಕವಾಗಿಯೂ ಶ್ರೀಮಂತ


ಸಿ.ಎಸ್.ಪುಟ್ಟರಾಜು ರಾಜಕಾರಣಿಯಾಗಿದ್ದರೂ ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲೂ ವಿಶೇಷ ಆಸಕ್ತಿ. ಶಾಸಕರಾಗಿದ್ದಾಗ ಪಾಂಡವಪುರ ತಾಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನವನ್ನು ರಾಜ್ಯಮಟ್ಟದ ಸಮ್ಮೇಳನದ ಮಾದರಿಯಲ್ಲಿ ಆಯೋಜಿಸಿದ್ದರು. ಸಮ್ಮೇಳನಕ್ಕೆ ಆಗಮಿಸಿದ್ದ ಸಾಹಿತಿಗಳು ತಾಲೂಕು ಮಟ್ಟದ ಸಮ್ಮೇಳನವನ್ನು ಈ ರೀತಿಯೂ ಆಚರಿಸಬಹುದಾ ಎಂದು ಅಚ್ಚರಿಪಟ್ಟಿದ್ದರು. ಪ್ರಪಂಚದ ಎಲ್ಲಾ ಕನ್ನಡ ಸಂಘದ ಮುಖ್ಯಸ್ಥರನ್ನು ಪಾಂಡವಪುರಕ್ಕೆ ಕರೆಸಿ ಸನ್ಮಾನಿಸಿದ್ದರು. ಮೂರು ಜಿಲ್ಲಾಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸಿ, ಪಟ್ಟಣದಲ್ಲಿ ಸಾಹಿತ್ಯ ಭವನವನ್ನೂ ನಿರ್ಮಿಸಿದ್ದಾರೆ. ಇವೆಲ್ಲವೂ ಸಾಧ್ಯವಾಗುವುದು ಕೇವಲ ಪುಟ್ಟರಾಜು ಅವರೊಬ್ಬರಿಂದ ಮಾತ್ರ ಸಾಧ್ಯ ಎನ್ನುವುದು ಸತ್ಯದ ಸಂಗತಿ. ಇನ್ನು ಪುಟ್ಟರಾಜು ನೇತೃತ್ವದಲ್ಲಿ ಒಂದು ತಿಂಗಳ ಕಾಲ ಪಾಂಡವಪುರದ ಪಾಂಡವ ಕ್ರೀಡಾಂಗಣದಲ್ಲಿ ಕನ್ನಡ ಹಬ್ಬ ಆಚರಿಸಿದ್ದು ಕನ್ನಡ ಭಾಷೆ, ನಾಡು-ನುಡಿ ಬಗ್ಗೆ ಅಭಿಮಾನ ಹೆಚ್ಚಿಸುವಂತೆ ಮಾಡಿತ್ತು. ಖ್ಯಾತ ಗಾಯಕರಾಗಿದ್ದ ಎಸ್.ಪಿ.ಬಾಲಸುಬ್ರಹ್ಮಣ್ಯಂ ಅವರಿಂದ ರಸಮಂಜರಿ ಕಾರ್ಯಕ್ರಮ ಏರ್ಪಡಿಸಿದ್ದರು. ಜಾತ್ರೆ, ಹಬ್ಬಗಳನ್ನು ಬಹಳ ಸಂಭ್ರಮದಿಂದ ಆಚರಿಸುತ್ತಾ ಹಳ್ಳಿಗಾಡಿನ ಸಂಸ್ಕೃತಿ, ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಾಜಿ ಸಚಿವ ಪುಟ್ಟರಾಜು ಕೊಡುಗೆ ಮತ್ತು ಕಾಳಜಿ ಅನನ್ಯವಾದುದು.





ಒಂದೇ ವರ್ಷದಲ್ಲಿ ಮೂರು ಚುನಾವಣೆ ಎದುರಿಸಿದ ದಾಖಲೆ

ಯಾರಾದರೂ ಒಬ್ಬ ರಾಜಕಾರಣಿ ಒಂದೇ ವರ್ಷದಲ್ಲಿ ಮೂರು ಚುನಾವಣೆ ಎದುರಿಸಿರುವ ದಾಖಲೆ ಇದ್ದರೆ ಅದು ಸಿ.ಎಸ್.ಪುಟ್ಟರಾಜು ಮಾತ್ರ. 2013ರ ವಿಧಾನಸಭಾ ಚುನಾವಣೆಯಲ್ಲಿ ಸಿ.ಎಸ್.ಪುಟ್ಟರಾಜು ಅವರು ಸರ್ವೋದಯ ಕರ್ನಾಟಕ ಪಕ್ಷದ ಅಭ್ಯರ್ಥಿಯಾಗಿದ್ದ ಕೆ.ಎಸ್.ಪುಟ್ಟಣ್ಣಯ್ಯ ಅವರ ವಿರುದ್ಧ ಸೋಲನುಭವಿಸಿದ್ದರು. ಅದಾದ ಕೆಲ ತಿಂಗಳುಗಳಲ್ಲೇ ಸಂಸದರಾಗಿದ್ದ ಎನ್.ಚಲುವರಾಯಸ್ವಾಮಿ ರಾಜೀನಾಮೆಯಿಂದ ಲೋಕಸಭೆಗೆ ನಡೆದ ಉಪ ಚುನಾವಣೆಯಲ್ಲಿ ಚಿತ್ರನಟಿ ರಮ್ಯಾ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದರು. ಅವರಿಗೆ ಎದುರಾಗಿ ಸ್ಪರ್ಧಿಸಿದ್ದ ಸಿ.ಎಸ್.ಪುಟ್ಟರಾಜು ಪರಾಜಿತರಾದರು. ಪುಟ್ಟರಾಜು ರಾಜಕೀಯ ಭವಿಷ್ಯ ಮುಗಿದೇಹೋಯಿತು ಎಂದು ಹಲವರು ಭಾವಿಸಿದ್ದರು. ಮತ್ತೆ 2014ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್‌ನಿಂದ ಎದುರಾಳಿಯಾದ ನಟಿ ರಮ್ಯಾ ಅವರನ್ನು ಸೋಲಿಸಿ ರಾಜಕೀಯ ಧೂಳಿನಿಂದ ಮೇಲೆದ್ದು ಬಂದರು.



ಜನಾನುರಾಗಿ ನಾಯಕ
ಪವರ್‌ಫುಲ್ ಲೀಡರ್
ಸಿ.ಎಸ್.ಪುಟ್ಟರಾಜು

ಅಭಿವೃದ್ಧಿಯ ಕನಸುಗಾರ, ದಿಟ್ಟ ನಡೆ-ನುಡಿಯ ಅಪ್ರತಿಮ ರಾಜಕಾರಣಿ | ಮೇಲುಕೋಟೆ ಕ್ಷೇತ್ರದಲ್ಲಿ ಅಭಿವೃದ್ಧಿಯ ಪರ್ವ ಸೃಷ್ಟಿಸಿದ ಜನನಾಯಕ

ಅಭಿವೃದ್ಧಿಯ ಮಾಂತ್ರಿಕ, ಜನಾನುರಾಗಿ ರಾಜಕಾರಣಿ, ಅಂದುಕೊಂಡಿದ್ದನ್ನು ಸಾಧಿಸುವ ಛಲಗಾರ, ನೇರ, ದಿಟ್ಟ ನಡೆ-ನುಡಿಯ ಅಪ್ರತಿಮ ರಾಜಕಾರಣಿ, ಕ್ರಿಯಾಶೀಲ, ಸ್ನೇಹಪರ ವ್ಯಕ್ತಿತ್ವದೊಂದಿಗೆ ಮೇಲುಕೋಟೆ ಕ್ಷೇತ್ರದಲ್ಲಿ ಪಾದರಸದಂತೆ ಸಂಚರಿಸುತ್ತಾ ಪ್ರಗತಿಯಲ್ಲಿ ಹೊಸ ಕ್ರಾಂತಿಯನ್ನು ಸೃಷ್ಟಿಸಿದವರು ಜನಪ್ರಿಯ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು.

ವಿವಾದ ರಹಿತ ರಾಜಕಾರಣಿಯಾಗಿ ಜನರು ಕೊಟ್ಟ ಅಧಿಕಾರವನ್ನು ಜನಸೇವೆಗಾಗಿಯೇ ಮೀಸಲಿಟ್ಟಿರುವ ಅಪರೂಪದ ನಾಯಕ. ನೀರಾವರಿಗೆ ಪ್ರಥಮ ಆದ್ಯತೆ ನೀಡುವುದರೊಂದಿಗೆ ಏತ ನೀರಾವರಿ ಯೋಜನೆಗಳ ಮೂಲಕ ಕ್ಷೇತ್ರದಲ್ಲಿ ಬರಡಾಗಿದ್ದ ಪ್ರದೇಶಗಳಿಗೆ ಹಸಿರ ಸಿರಿ ತುಂಬುವಂತೆ ಮಾಡಿದ ಈ ನೆಲದ ಮಣ್ಣಿನ ಮಗ ಸಿ.ಎಸ್ .ಪುಟ್ಟರಾಜು. ಹೇಮಾವತಿ, ಕಾವೇರಿ ನದಿಯಿಂದ ನೂರಾರು ಕೆರೆಗಳಿಗೆ ಜೀವಕಳೆ ತುಂಬಿದ ಆಧುನಿಕ ಭಗೀರಥ ಎನಿಸಿಕೊಂಡಿದ್ದಾರೆ.

ದೂರದೃಷ್ಟಿನಾಯಕರೆನಿಸಿರುವ ಸಿ.ಎಸ್.ಪುಟ್ಟರಾಜು ಮೇಲುಕೋಟೆ ಕ್ಷೇತ್ರವನ್ನು ಅಭಿವೃದ್ಧಿಯ ಉತ್ತುಂಗಕ್ಕೇರಿಸಿದ್ದಾರೆ. ನೀರಾವರಿಗೆ ನೀಡಿರುವ ಆದ್ಯತೆಯನ್ನೇ ರಸ್ತೆಗಳು, ಸೇತುವೆಗಳು, ಶಿಕ್ಷಣ, ಸಾರಿಗೆ, ಆರೋಗ್ಯ ಸೇರಿದಂತೆ ಎಲ್ಲಾ ಕ್ಷೇತ್ರಗಳಿಗೂ ನೀಡುವುದರೊಂದಿಗೆ ಜನರ ಅಗತ್ಯತೆಗಳನ್ನು ಪೂರೈಸುತ್ತಾ ಬರುವುದರೊಂದಿಗೆ ಜನಪ್ರಿಯ ಶಾಸಕರಾಗಿ ಹೊರಹೊಮ್ಮಿದ್ದಾರೆ. ಸದಾ ಚಟುವಟಿಕೆಯಿಂದಿದ್ದು, ಹೊಸತನ್ನು ಆಲೋಚಿಸುತ್ತಲೇ ರಾಜಕೀಯದಲ್ಲಿ ಪ್ರವರ್ಧಮಾನಕ್ಕೆ ಬೆಳೆದುಬಂದ ಧೀಮಂತ ನಾಯಕರೂ ಆಗಿದ್ದಾರೆ.


ಯೋಜನೆ ಜಾರಿ ಎಷ್ಟೇ ಕಷ್ಟವಾಗಿದ್ದರೂ ಸಿ.ಎಸ್.ಪುಟ್ಟರಾಜು ಅದನ್ನು ಜಾರಿಗೊಳಿಸದೇ ಬಿಡುತ್ತಿರಲಿಲ್ಲ. ಎಲ್ಲ ಪಕ್ಷದ ನಾಯಕರೊಂದಿಗೆ ಆತ್ಮೀಯವಾದ ವಿಶ್ವಾಸ ಹಾಗೂ ಒಡನಾಟವನ್ನಿಟ್ಟುಕೊಂಡಿರುವ ಅವರು ಸುಗಮವಾಗಿ ಯೋಜನೆಗಳನ್ನು ಮಂಜೂರು ಮಾಡಿಸಿಕೊಂಡು ಬರುವಲ್ಲಿ ಸಿದ್ಧಹಸ್ತರೆನಿಸಿದ್ದಾರೆ. ಅಧಿಕಾರವಿರಲಿ, ಇಲ್ಲದಿರಲಿ ಪಾದರಸದಂತೆ ನಿತ್ಯವೂ ಮೇಲುಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಸುತ್ತಾಡುತ್ತಾ ಯಾವ ಗ್ರಾಮಗಳಲ್ಲಿ ಏನು ಸಮಸ್ಯೆಗಳಿವೆ, ಅವುಗಳಿಗೆ ಶೀಘ್ರದಲ್ಲೇ ಪರಿಹಾರ ಸೂಚಿಸುವ ಕಲೆಯನ್ನು ಚೆನ್ನಾಗಿ ಕರಗತ ಮಾಡಿಕೊಂಡಿದ್ದಾರೆ.

ಕ್ಷೇತ್ರಕ್ಕೆ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸುವ ಸಮಯದಲ್ಲೂ ಜನರಿಂದ ಅಭಿಪ್ರಾಯಗಳು, ಸಲಹೆ-ಸೂಚನೆಗಳನ್ನು ಪಡೆಯುವ ವಿಶಿಷ್ಟ ಗುಣ ಸಿ.ಎಸ್.ಪುಟ್ಟರಾಜು ಅವರಲ್ಲಿದೆ. ಯೋಜನೆಗಳಿಗೆ ಅಡ್ಡಿಯಾಗುವ ತಾಂತ್ರಿಕ, ಕಾನೂನಾತ್ಮಕ ಅಡಚಣೆಗಳನ್ನು ನಿಗದಿತ ಸಮಯದೊಳಗೆ ಬಗೆಹರಿಸಿ ನಿರ್ದಿಷ್ಟ ಸಮಯದೊಳಗೆ ಅನುಷ್ಠಾನಕ್ಕೆ ತರುವಂತಹ ಚಾಕಚಕ್ಯತೆಯನ್ನು ಮೈಗೂಡಿಸಿಕೊಂಡಿದ್ದಾರೆ. ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರನ್ನು ಭಿನ್ನಮತ, ಅಪಸ್ವರಗಳು ಎದುರಾಗದಂತೆ ಒಟ್ಟಾಗಿ ಕರೆದೊಯ್ಯುತ್ತಿರುವ ಸಿ.ಎಸ್.ಪುಟ್ಟರಾಜು ಕ್ಷೇತ್ರದಲ್ಲಿ ಸರಿಸಾಟಿಯಿಲ್ಲದ ನಾಯಕನಾಗಿ ಬೆಳೆದು ನಿಂತಿದ್ದಾರೆ.

ಅಭಿವೃದ್ಧಿ ವಿಚಾರದಲ್ಲಿ ಯಾರೊಂದಿಗೂ ವೈಮನಸ್ಸನ್ನು ಬೆಳೆಸಿಕೊಳ್ಳದ ಅಜಾತಶತ್ರು. ಯೋಜನೆಯ ಗಾತ್ರ ಹೆಚ್ಚಾದರೂ ಹಿಂಜರಿಯುವವರಲ್ಲ. ಅದನ್ನು ಸರ್ಕಾರದಿಂದ ಬಿಡುಗಡೆ ಮಾಡಿಸುವಂತಹ ಹಠವಾದಿ ಎನಿಸಿರುವ ಸಿ.ಎಸ್.ಪುಟ್ಟರಾಜು, ಸ್ಥಳೀಯ ಸಂಸ್ಥೆಗಳಲ್ಲೂ ಎಲ್ಲಾ ಪಕ್ಷದ ಸದಸ್ಯರನ್ನು ಒಗ್ಗೂಡಿಸಿಕೊಂಡು ಅಭಿವೃದ್ಧಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತಿರುವುದರಿಂದ ಅವರ ನಿರ್ಧಾರಗಳು, ನಿಲುವುಗಳು ದೃಢವಾಗಿದ್ದು, ಕ್ಷೇತ್ರವನ್ನು ಅಭಿವೃದ್ಧಿ ಪಥದಲ್ಲಿ ಮುನ್ನಡೆಸುವಲ್ಲಿ ಪರಿಣಾಮಕಾರಿ ಪಾತ್ರ ವಹಿಸಿದ್ದರು.

ಸಾಮಾನ್ಯ ಜನರ ಕಷ್ಟಗಳಿಗೆ ಮರುಗುತ್ತಾ, ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಓಗೊಡುತ್ತಾ, ರೈತಪರ ನಿಲುವುಗಳೊಂದಿಗೆ, ಮಹಿಳೆಯರಿಗೆ ಸ್ವಾಭಿಮಾನಿ ಬದುಕನ್ನು ಕಟ್ಟಿಕೊಡುವುದರ ಜೊತೆಗೆ ವೃದ್ಧಾಪ್ಯದಲ್ಲಿರುವ ಜನರ ನೋವುಗಳಿಗೆ ಮಿಡಿಯುತ್ತಿರುವ ಹೃದಯವಂತ ಎಂಬ ಕೀರ್ತಿಗೆ ಸಿ.ಎಸ್. ಪುಟ್ಟರಾಜು ಪಾತ್ರರಾಗಿದ್ದಾರೆ. ತಮಗೆ ಸಿಕ್ಕ ಅಧಿಕಾರವಧಿಯಲ್ಲಿ ಕ್ಷೇತ್ರದೊಳಗೆ ಅಭಿವೃದ್ಧಿಯ ಹಲವಾರು ಮೈಲಿಗಲ್ಲುಗಳನ್ನು ನಿರ್ಮಿಸಿದ್ದಾರೆ. ಸದಾಕಾಲ ಮೇಲುಕೋಟೆ ಕ್ಷೇತ್ರದ ಪ್ರಗತಿಯನ್ನೇ ಗುರಿಯಾಗಿಸಿ ಕೊಂಡು ಮುನ್ನುಗ್ಗುತ್ತಿರುವ ಪ್ರಬುದ್ಧ, ಮುತ್ಸದ್ದಿ ರಾಜಕಾರಣಿ ಎಂಬ ಹೆಗ್ಗಳಿಕೆ ಅವರದ್ದಾಗಿದೆ.

> **ಕ್ಷೇತ್ರದ ಜನರಿಗೆ ಅನುಕೂಲವಾಗುವಂತಹ ಕೆಲಸಗಳನ್ನು ಮಾಡಲು ಅಧಿಕಾರ ಬೇಕು. ಅಧಿಕಾರ ಕೊಟ್ಟಾಗ ಜನರು ಮತ್ತು ರೈತರ ಹಿತವನ್ನು ಮರೆಯಬಾರದು. ಅಧಿಕಾರದಲ್ಲಿದ್ದಾಗ ಜನರಿಗೆ ಕೊಟ್ಟ ಮಾತು ಇಟ್ಟ ಹೆಜ್ಜೆಯಿಂದ ನಾನು ಎಂದಿಗೂ ಹಿಂದೆ ಸರಿದವನಲ್ಲ. ದ್ವೇಷದ ರಾಜಕಾರಣ ನನಗೆ ಗೊತ್ತಿಲ್ಲ. ನನಗೆ ಗೊತ್ತಿರುವುದು ಅಭಿವೃದ್ಧಿ ಪರ ರಾಜಕಾರಣ ಮಾತ್ರ. ಕ್ಷೇತ್ರವನ್ನು ಪ್ರಗತಿಯ ದಿಕ್ಕಿನಲ್ಲಿ ಮುನ್ನಡೆಸುವುದಷ್ಟೇ ನನ್ನ ಮುಖ್ಯ ಗುರಿ.**
>
> • **ಸಿ.ಎಸ್.ಪುಟ್ಟರಾಜು** ಮಾಜಿ ಸಚಿವರು, ಮೇಲುಕೋಟೆ ಕ್ಷೇತ್ರ



ಮಧ್ಯರಾತ್ರಿಯೇ ರಕ್ಷಣಾ ಕಾರ್ಯಕ್ಕಿಳಿದ ಧೀಮಂತ ರಾಜಕಾರಣಿ

2022ರ ಆಗಸ್ಟ್ ತಿಂಗಳಲ್ಲಿ ಮೇಲುಕೋಟೆಯಲ್ಲಿ ಮಳೆ ಅಬ್ಬರದಿಂದ ಕೆರೆ-ಕಟ್ಟೆಗಳು ಒಡೆದು ಭಾರೀ ಪ್ರಮಾಣದ ನೀರು ಐತಿಹಾಸಿಕ ತೊಣ್ಣೂರು ಕೆರೆಯತ್ತ ಹರಿದುಬಂದು ಕೆರೆ ಒಡೆಯುವ ಆತಂಕ ಸೃಷ್ಟಿಸಿತ್ತು. ಅಂದು ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ಅವರು ಸಮಯಪ್ರಜ್ಞೆ ಮೆರೆದು ರಾತ್ರಿಯೇ ಅಧಿಕಾರಿಗಳೊಂದಿಗೆ ಕಾರ್ಯಾಚರಣೆಗಿಳಿದು ಮಳೆ ನೀರು ಕೆರೆಗೆ ಸೇರುವುದನ್ನು ತಡೆಯುವುದರೊಂದಿಗೆ ಐತಿಹಾಸಿಕ ಕೆರೆಗೆ ಸುರಕ್ಷತೆ ಒದಗಿಸುವಲ್ಲಿ ಯಶಸ್ವಿಯಾದರು. ವರುಣಾರ್ಭಟದಿಂದ ಕೆರೆ-ಕಟ್ಟೆಗಳು ಕೋಡಿ ಹರಿದು ಹಳ್ಳ-ಕೊಳ್ಳಗಳ ಮೂಲಕ ಭಾರೀ ಪ್ರಮಾಣದ ನೀರು ತೊಣ್ಣೂರು ಕೆರೆ ಹಿನ್ನೀರಿನ ಕಾಲುವೆ ಮೂಲಕ ಹರಿದುಬರುತ್ತಿತ್ತು. ಮಧ್ಯರಾತ್ರಿ 12 ಗಂಟೆಗೆ ಮಳೆ ನಡುವೆಯೇ ಅಧಿಕಾರಿಗಳು ಮತ್ತು ಜೆಸಿಬಿ ಯಂತ್ರದ ನೆರವಿನೊಂದಿಗೆ ಹಿನ್ನೀರಿನ ಕಾಲುವೆ ಬಳಿಗೆ ಆಗಮಿಸಿ ನೀರು ಬೇರೆ ಬೇರೆ ಕಡೆಗೆ ಹರಿದುಹೋಗುವಂತೆ ವ್ಯವಸ್ಥೆ ಮಾಡಿದರು. ಆ ಮೂಲಕ ತೊಣ್ಣೂರು ಕೆರೆ ಮೇಲೆ ನೀರಿನ ಒತ್ತಡ ಬೀಳದಂತೆ ತಡೆಯುವಲ್ಲಿ ಸಫಲರಾಗಿದ್ದರು. ಮುಂಜಾನೆ 3 ಗಂಟೆಯವರೆಗೂ ಅಧಿಕಾರಿಗಳ ಜೊತೆಗಿದ್ದು ಕೋಡಿ ಹರಿಯುವ ಕೆರೆಗಳ ಬಗ್ಗೆ ಮಾಹಿತಿ ಪಡೆದು ಕೊಂಡು ಎಲ್ಲಿಯೂ ಮಳೆಯಿಂದ ಹೆಚ್ಚಿನ ಅನಾಹುತವಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡ ರಲ್ಲದೆ, ಆತಂಕಗೊಂಡಿದ್ದ ಜನರಿಗೆ ಧೈರ್ಯ ತುಂಬಿದ ಜನಸ್ನೇಹಿ ರಾಜಕಾರಣಿ ಎನಿಸಿದರು.




ಕ್ರೀಡಾ ಪ್ರೇಮಿಯಿಂದ ಸೈಲಿಂಗ್ ಕ್ರೀಡೆಗೆ ಉತ್ತೇಜನ

ಸಿ.ಎಸ್.ಪುಟ್ಟರಾಜು ಕೇವಲ ರಾಜಕಾರಣಿ ಮಾತ್ರವಲ್ಲ. ಅವರೊಬ್ಬ ಕ್ರೀಡಾ ಪ್ರೇಮಿಯೂ ಹೌದು. ಅವರು ಶಾಸಕರಾಗಿದ್ದ ವೇಳೆ ಕೆಆರ್‌ಎಸ್ ಹಿನ್ನೀರಿನಲ್ಲಿ ಅಪರೂಪದ ಸೈಲಿಂಗ್ ಕ್ರೀಡೆಯನ್ನು ಉತ್ತೇಜಿಸಲು ಟೊಂಕಕಟ್ಟಿ ನಿಂತಿದ್ದರು. ಸೈಲಿಂಗ್ ಕ್ರೀಡೆ ಬಗ್ಗೆ ಕ್ರೀಡಾಪಟುಗಳಿಗೆ ಆಸಕ್ತಿ ಹೆಚ್ಚಿಸುವುದಕ್ಕೆ ಪೂರಕವಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು. ಅನೈತಿಕ ಚಟುವಟಿಕೆಯ ತಾಣ ವಾಗಿ ಪರಿವರ್ತನೆಯಾಗುತ್ತಿದ್ದ ಹಿನ್ನೀರಿನ ಸ್ಥಳವನ್ನು ಕ್ರೀಡಾಕೇಂದ್ರವಾಗಿ ಪರಿ ವರ್ತಿಸುವಲ್ಲಿ ಸಿ.ಎಸ್.ಪುಟ್ಟರಾಜು ಸಾಧನೆ ದೊಡ್ಡದು. ಭಾರತೀಯ ಸೇನೆಯ ಮದ್ರಾಸ್ ಇಂಜಿನಿಯರಿಂಗ್ ಗ್ರೂಪ್ ಮತ್ತು ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ಸಹಭಾಗಿತ್ವದಲ್ಲಿ ಸೈಲಿಂಗ್ ಚಾಂಪಿಯನ್‌ಶಿಪ್ ನಡೆಸಿದರು. ದೇಶದ ವಿವಿಧ ಭಾಗಗಳಿಂದ 120ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಿದ್ದರು. ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ 4 ಮಂದಿ ಕ್ರೀಡಾಪಟುಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿರುವುದು ಒಂದು ಹೆಗ್ಗಳಿಕೆ. ಖ್ಯಾತ ನಟ ಶಿವರಾಜ್‌ಕುಮಾರ್ ಅವರು ಸಮಾರೋಪ ಸಮಾರಂಭಕ್ಕೆ ಆಗಮಿಸಿ ವಿಜೇತ ಕ್ರೀಡಾಪಟುಗಳಿಗೆ ಬಹುಮಾನ ವಿತರಣೆ ಮಾಡುವುದರೊಂದಿಗೆ ಅಪರೂಪದ ಸೈಲಿಂಗ್ ಕ್ರೀಡೆಗೆ ಪ್ರೋತ್ಸಾಹ ನೀಡುತ್ತಿರುವ ಸಿ.ಎಸ್.ಪುಟ್ಟರಾಜು ಅವರ ಕಾರ್ಯವನ್ನು ಮುಕ್ತಕಂಠದಿಂದ ಪ್ರಶಂಸಿಸಿದ್ದರು. ಪುಟ್ಟರಾಜು ಅಧಿಕಾರದಲ್ಲಿದ್ದಾಗ ಸೈಲಿಂಗ್ ಚಾಂಪಿಯನ್‌ಶಿಪ್ ನಿರಂತರವಾಗಿ ನಡೆದುಕೊಂಡು ಬಂದಿತ್ತು. ಅಂತಾರಾಷ್ಟ್ರೀಯ ಮಟ್ಟದ ಚಾಂಪಿಯನ್‌ಶಿಪ್ ನಡೆಸಲು ಉದ್ದೇಶಿಸಿದ್ದರು.









"ಪ್ರತಿ ಹಳ್ಳಿಗೂ ಸುಂದರ ರಸ್ತೆ ನಿರ್ಮಾಣ"

ಪ್ರಮುಖ ರಸ್ತೆಗಳನ್ನು ಮೇಲ್ದರ್ಜೆಗೇರಿಸಿ ಉನ್ನತೀಕರಣ
ಕ್ಷೇತ್ರದ ಮೂಲೆ ಮೂಲೆಗೂ ರಸ್ತೆ ಸಂಪರ್ಕ ಜಾಲ ವಿಸ್ತರಣೆ

ಮೂರು ಬಾರಿ ಶಾಸಕರಾಗಿ, ಸಂಸದರಾಗಿ, ಒಮ್ಮೆ ಸಚಿವರಾಗಿ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಮೂಲೆ ಮೂಲೆಗೂ ರಸ್ತೆ ಸಂಪರ್ಕ ಜಾಲ ವಿಸ್ತರಿಸಿದರು. ಹೆದ್ದಾರಿ ರಸ್ತೆಗಳನ್ನು ಮೇಲ್ದರ್ಜೆಗೇರಿಸಿದರು. ವಿಶಾಲವಾದ ರಸ್ತೆಗಳನ್ನು ಅತ್ಯಂತ ಸುಂದರವಾಗಿ ನಿರ್ಮಿಸಿ ಸೌಂದರ್ಯ ಹೆಚ್ಚುವಂತೆ ಮಾಡಿದರು. ಸಾರ್ವಜನಿಕರ ಸಂಚಾರಕ್ಕೆ ಮತ್ತು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಸಾಗಿಸಲು ಯಾವುದೇ ಗ್ರಾಮಗಳಿಗೂ ರಸ್ತೆ ಸಂಪರ್ಕದಿಂದ ವಂಚಿತವಾಗಬಾರದೆಂಬ ಧ್ಯೇಯದೊಂದಿಗೆ ಪ್ರತಿ ಹಳ್ಳಿಗೂ ರಸ್ತೆ ಸಂಪರ್ಕ ಕಲ್ಪಿಸಿದ್ದಾರೆ.

ರಸ್ತೆಗಳ ನಿರ್ಮಾಣದ ಪ್ರಾಮುಖ್ಯತೆಯನ್ನು ಅರಿತಿರುವ ಮೇಲುಕೋಟೆ ಕ್ಷೇತ್ರದ ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ಅವರು ರಸ್ತೆಗಳಿಗೆ ಪಾಂಡವಪುರ ತಾಲೂಕಿನಲ್ಲಿ ಉತ್ತಮ ಕಾಯಕಲ್ಪ ನೀಡಿ ಎಲ್ಲರ ಮೆಚ್ಚುಗೆ ಗಳಿಸಿದ್ದಾರೆ. ಪಾಂಡವಪುರ ತಾಲೂಕು ಕೇಂದ್ರಗಳಿಂದ ಪ್ರತಿ ಗ್ರಾಮಗಳಿಗೂ ಸಂಪರ್ಕ ಕಲ್ಪಿಸುವಂತೆ ಡಾಂಬರು ರಸ್ತೆಗಳು ನಿರ್ಮಾಣಗೊಂಡು ಸೌಂದರ್ಯವನ್ನು ಹೆಚ್ಚಿಸಿವೆ. ಶ್ರೀರಂಗಪಟ್ಟಣ-ಬೀದರ್ ಹೆದ್ದಾರಿಯನ್ನು 336 ಕೋಟಿ ರು. ವೆಚ್ಚದಲ್ಲಿ ಮೇಲ್ದರ್ಜೆಗೇರಿಸಿದ ಕೀರ್ತಿ ಸಿ.ಎಸ್.ಪುಟ್ಟರಾಜು ಅವರದ್ದಾಗಿದೆ.

ಸುಮಾರು 46 ಕೋಟಿ ರು. ವೆಚ್ಚದಲ್ಲಿ ತೂಬಿನಕೆರೆಯಿಂದ ಹೊಸ ಶಾಯಪ್ಪನಹಳ್ಳಿವರೆಗೆ ರಸ್ತೆ ನಿರ್ಮಾಣ, ಪಾಂಡವಪುರ ಪಟ್ಟಣದಿಂದ ಎಲೆಕೆರೆ ಗ್ರಾಮದವರೆಗೆ ನಾಲ್ಕು ಪಥದ ರಸ್ತೆ, ಮೇಲುಕೋಟೆಯಿಂದ ಕೆ.ಆರ್.ಪೇಟೆವರೆಗೆ ಹಾಗೂ ಡಿಂಕಾದಿಂದ ಅಶೋಕನಗರದವರೆಗೆ ರಸ್ತೆ, ಚಿನಕುರಳಿಯಿಂದ ಬೂಕನಕೆರೆವರೆಗಿನ 11 ಕೋಟಿ ರು. ವೆಚ್ಚದ ರಸ್ತೆ, ಮೇಲುಕೋಟೆಯ ಗೌರಿ ಸರ್ಕಲ್‌ನಿಂದ ಬೋಗಾದಿಗೆ ಹೋಗುವ 5 ಕೋಟಿ ರು. ವೆಚ್ಚದ ರಾಜ್ಯ ಹೆದ್ದಾರಿ ನಿರ್ಮಿಸಿ ಕ್ಷೇತ್ರದ ಮೂಲೆ ಮೂಲೆಗೂ ರಸ್ತೆ ಸಂಪರ್ಕ ಜಾಲ ವಿಸ್ತರಣೆಯಾಗುವಂತೆ ಮಾಡಿದರು.

ಮೇಲುಕೋಟೆ ರಸ್ತೆಯನ್ನು 12 ಕೋಟಿ ರು.ವೆಚ್ಚದಲ್ಲಿ ನಿರ್ಮಿಸಿದರು. ಕೆಲವು ಗ್ರಾಮಗಳಲ್ಲಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಬರುವ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ಸೇರಿಸಿ 7.5 ಮೀಟರ್‌ವರೆಗೆ ರಸ್ತೆಗಳನ್ನು ಅಭಿವೃದ್ಧಿಪಡಿಸಿದ್ದರು. ಒಟ್ಟಾರೆ ಪುಟ್ಟರಾಜು ಅಧಿಕಾರದಲ್ಲಿದ್ದಾಗ ಮೇಲುಕೋಟೆ ವಿಧಾನಸಭಾ ಕ್ಷೇತ್ರದೊಳಗೆ ರಸ್ತೆಗಳ ನಿರ್ಮಾಣದಲ್ಲಿ ಅಭಿವೃದ್ಧಿಯ ಪರ್ವವೇ ಸೃಷ್ಟಿಯಾಗಿತ್ತು.

ಸರ್ಕಾರಿ ಶಾಲಾ-ಕಾಲೇಜುಗಳು ಖಾಸಗಿ ಶಾಲಾ-ಕಾಲೇಜುಗಳಿಗಿಂತ ಕಡಿಮೆ ಏನಿಲ್ಲ. ಇಲ್ಲಿಯೂ ಗುಣಮಟ್ಟದ ಶಿಕ್ಷಣ ಸಿಗುತ್ತಿದೆ. ನಾನು ಶಾಸಕನಾಗಿದ್ದಾಗ ಸೌಲಭ್ಯ ವಂಚಿತ ಶಾಲಾ-ಕಾಲೇಜುಗಳಿಗೆ ಎಲ್ಲ ರೀತಿಯ ಸೌಲಭ್ಯಗಳನ್ನೂ ದೊರಕಿಸಿಕೊಟ್ಟಿದ್ದೇನೆ. ಅಧ್ಯಾಪಕರು-ಶಿಕ್ಷಕರ ಕೊರತೆ ಎದುರಾಗದಂತೆ ಎಚ್ಚರ ವಹಿಸಿದ್ದೇವೆ. ಅತ್ಯಾಧುನಿಕ ವ್ಯವಸ್ಥೆಗಳನ್ನು ಕಲ್ಪಿಸಿಕೊಟ್ಟು ಗ್ರಾಮೀಣ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಿಕೊಟ್ಟಿದ್ದೇನೆ. ಸೌಲಭ್ಯ ವಂಚಿತ ಶಾಲಾ-ಕಾಲೇಜುಗಳಿಗೆ ಸಕಲ ಸೌಲಭ್ಯಗಳನ್ನು ಕಲ್ಪಿಸಿಕೊಡುವ ಕಾರ್ಯದಲ್ಲಿ ಮುಂದುವರೆದಿದ್ದೇನೆ.

• **ಸಿ.ಎಸ್.ಪುಟ್ಟರಾಜು** ಮಾಜಿ ಸಚಿವರು, ಮೇಲುಕೋಟೆ ವಿಧಾನಸಭಾ ಕ್ಷೇತ್ರ.

ಕೊರೋನಾ ಸಂಕಷ್ಟಕ್ಕೆ ಮಿಡಿದ ಮಾತೃಹೃದಯಿ


ಮಹಾಮಾರಿ ಕೊರೋನಾ ಮರಣಮೃದಂಗ ಬಾರಿಸುತ್ತಿದ್ದ ಸಮಯದಲ್ಲೂ ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ಪ್ರಾಣಕ್ಕೆ ಹೆದರಿ ಮನೆಯಲ್ಲಿ ಕೂರಲಿಲ್ಲ. ಪಾಂಡವಪುರ ತಾಲೂಕಿನಲ್ಲಿ ಕೊರೋನಾ ನಿಯಂತ್ರಿಸುವುದಕ್ಕೆ ಪಣ ತೊಟ್ಟರು. ಎರಡನೇ ಅಲೆ ತೀವ್ರಗೊಂಡ ಸಮಯದಿಂದಲೂ ಕ್ಷೇತ್ರದಲ್ಲೇ ಠಿಕಾಣಿ ಹೂಡಿ ಅಧಿಕಾರಿಗಳೊಂದಿಗೆ ನಿರಂತರ ಸಭೆ ನಡೆಸುತ್ತಾ, ಗ್ರಾಮಗಳಲ್ಲಿ ಸಂಚರಿಸಿ ಜನರಲ್ಲಿ ಜಾಗೃತಿ ಮೂಡಿಸಿದರು. ಸಾವನ್ನಪ್ಪಿದವರ ಕುಟುಂಬದವರ ನೆರವಿಗೆ ನಿಂತು ಅಂತ್ಯಕ್ರಿಯೆಗೆ ಸಕಲ ವ್ಯವಸ್ಥೆ ಮಾಡಿಕೊಟ್ಟ ಮಾತೃಹೃದಯಿ ರಾಜಕಾರಣಿ ಸಿ.ಎಸ್.ಪುಟ್ಟರಾಜು.

ಒಂದೇ ದಿನ ಪಾಂಡವಪುರ ತಾಲೂಕಿನಲ್ಲಿ 6 ಜನರು ಕೊರೋನಾ ಸೋಂಕಿಗೆ ಬಲಿಯಾದ ಸಮಯದಲ್ಲಿ ಮೃತಪಟ್ಟವರ ಊರುಗಳಿಗೆ ತೆರಳಿದ ಸಿ.ಎಸ್.ಪುಟ್ಟರಾಜು ಅವರು ಅಂತ್ಯಕ್ರಿಯೆಗೆ ಮಾಡಲಾದ ವ್ಯವಸ್ಥೆಯನ್ನು ವೀಕ್ಷಿಸಿದರು. ಮೃತರ ಕುಟುಂಬದವರಿಗೆ ಧೈರ್ಯ ತುಂಬಿ ನೆರವಿನ ಸಹಾಯಾಸ್ತ ನೀಡಿದರು.

ಗ್ರಾಮಗಳಲ್ಲಿ ಸಂಚರಿಸಿದ ಸಿ.ಎಸ್.ಪುಟ್ಟರಾಜು ಅವರು ಜನರಲ್ಲಿ ಕೊರೋನಾ ಸೋಂಕಿನ ಬಗ್ಗೆ ಜಾಗೃತಿ ಮೂಡಿಸಿದರು. ಯಾರೂ ಅನವಶ್ಯಕವಾಗಿ ಬೀದಿಗಳಲ್ಲಿ ಓಡಾಡಬಾರದು. ಎಲ್ಲರೂ ಕೊರೋನಾ ಲಸಿಕೆ ಹಾಕಿಸಿಕೊಳ್ಳುವ ಮೂಲಕ ಸೋಂಕಿನಿಂದ ಪಾರಾಗಬೇಕು. ಗ್ರಾಮದ ಜನರು ಕಡ್ಡಾಯವಾಗಿ ಮಾಸ್ಕ್ ಧರಿಸಿ ಓಡಾಡಬೇಕು. ಆಗಾಗ ಸೋಪಿನಿಂದ ಕೈ ತೊಳೆದುಕೊಂಡು ಶುಚಿತ್ವ ಕಾಪಾಡಿಕೊಳ್ಳಬೇಕು. ಕುಡಿಯುವುದಕ್ಕೆ ಬಿಸಿನೀರನ್ನೇ ಉಪಯೋಗಿಸುವಂತೆ ಸಲಹೆ ನೀಡುತ್ತಾ ಜನಪರ ಕಾಳಜಿ ಪ್ರದರ್ಶಿಸಿದ್ದರು.

ತಾಲೂಕಿನಲ್ಲಿ ನಿತ್ಯ ವರದಿಯಾಗುತ್ತಿರುವ ಸೋಂಕಿನ ಸಂಖ್ಯೆ, ಮೃತರ ಮಾಹಿತಿ, ಸೋಂಕು ಹೆಚ್ಚಳಕ್ಕೆ ಕಾರಣಗಳೇನು, ನಿತ್ಯ ಎಷ್ಟು ಜನರಿಗೆ ಕೋವಿಡ್ ಪರೀಕ್ಷೆ ಮಾಡಲಾಗುತ್ತಿದೆ, ಪರೀಕ್ಷಾ ವರದಿ ಯಾವಾಗ ತಿಳಿಸಲಾಗುತ್ತಿದೆ ಎಂಬೆಲ್ಲಾ ಬಗ್ಗೆ ಮಾಹಿತಿಗಳನ್ನು ಸಂಗ್ರಹಿಸುತ್ತಾ ತಾಲೂಕಿನಲ್ಲಿ ಕೊರೋನಾಗೆ ಕಡಿವಾಣ ಹಾಕುವುದಕ್ಕೆ ಟೊಂಕ ಕಟ್ಟಿ ನಿಂತು ಅಚ್ಚರಿ ಮೂಡಿಸಿದರು.

ಪಾಂಡವಪುರ ಪಟ್ಟಣದ ಉಪವಿಭಾಗೀಯ ಆಸ್ಪತ್ರೆಯಲ್ಲಿ ಹೊಂಬಾಳೆ ಫಿಲಂಸ್ ಎಂಟರ್‌ಪ್ರೈಸಸ್‌ನ ವಿಜಯ್ ಕಿರಗಂದೂರು ಅವರ ಮನವೊಲಿಸಿ 90 ಲಕ್ಷ ರು. ವೆಚ್ಚದಲ್ಲಿ ಆಮ್ಲಜನಕ ತಯಾರಿಕಾ ಘಟಕವನ್ನು ಸ್ಥಾಪಿಸಿ ಕೋವಿಡ್‌ನಿಂದ ಜನರ ಪ್ರಾಣ ಉಳಿಸುವ ಕೆಲಸ ಮಾಡಿದ್ದು ಎಲ್ಲರ ಮೆಚ್ಚುಗೆ ಗಳಿಸಿತ್ತು.



ಪಾಂಡವಪುರ ಸರ್ಕಾರಿ ಕಾಲೇಜಿಗೆ ಹೈಟೆಕ್ ಸ್ಪರ್ಶ..!

ಅತ್ಯಾಧುನಿಕ ಸೌಲಭ್ಯಗಳೊಂದಿಗೆ ಜೀವಕಳೆ ಪಡೆದ ಕಾಲೇಜು





ಸರ್ಕಾರಿ ಶಾಲಾ-ಕಾಲೇಜುಗಳೆಂದರೆ ಮುಖ ತಿರುಗಿಸಿಯೂ ನೋಡದ ಇಂದಿನ ದಿನಗಳಲ್ಲಿ ಪಾಂಡವಪುರ ಸರ್ಕಾರಿ ಕಾಲೇಜಿಗೆ ಹೈಟೆಕ್ ಸ್ಪರ್ಶ ನೀಡುವುದರೊಂದಿಗೆ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಿರುವವರು ಮೇಲುಕೋಟೆ ಕ್ಷೇತ್ರದ ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು.

ಅತ್ಯಾಧುನಿಕ ಮೂಲಸೌಲಭ್ಯಗಳೊಂದಿಗೆ ಹೈಟೆಕ್ ಮೆರುಗನ್ನು ಪಡೆದುಕೊಂಡಿರುವ ಕಾಲೇಜು ವಿದ್ಯಾರ್ಥಿಗಳನ್ನು ಸೂಜಿಗಲ್ಲಿನಂತೆ ಈಗಲೂ ಆಕರ್ಷಿಸುತ್ತಿದೆ. ಸುವ್ಯವಸ್ಥಿತ ಶೌಚಾಲಯ, ಕುಡಿಯುವ ನೀರು, ಆಡಿಟೋರಿಯಂ, ಶಾರದಾ ಮಂದಿರ, ಪ್ರಯೋಗಾಲಯ, ಸುಸಜ್ಜಿತ ಕಟ್ಟಡ ಹಾಗೂ ಸುಣ್ಣ ಬಣ್ಣಗಳೊಂದಿಗೆ ಕಾಲೇಜು ಹೊಸ ಜೀವಕಳೆ ಪಡೆದುಕೊಂಡಿದೆ.

ಶಾಸಕರಾಗಿದ್ದ ವೇಳೆ ಸಿ.ಎಸ್.ಪುಟ್ಟರಾಜು ಅವರು ಪಾಂಡವಪುರ ಸರ್ಕಾರಿ ಪದವಿಪೂರ್ವ ಕಾಲೇಜು, ಪ್ರೌಢಶಾಲೆ ಹಾಗೂ ಶತಮಾನೋತ್ಸವ ಕಂಡಿರುವ ಫ್ರೆಂಚ್ ರಾಕ್ಸ್ ಶಾಲೆಯನ್ನು ದತ್ತು ಪಡೆದು ಮಾದರಿಯಾಗಿ ಅಭಿವೃದ್ಧಿಪಡಿಸಿದ್ದಾರೆ. ವಿಶಾಲವಾದ ಪ್ರದೇಶದಲ್ಲಿ ತಲೆಎತ್ತಿರುವ ಬೃಹತ್ ಕಟ್ಟಡಕ್ಕೆ ಸಕಲ ಸೌಲಭ್ಯಗಳನ್ನು ಸುವ್ಯವಸ್ಥಿತವಾಗಿ ದೊರಕಿಸಿಕೊಟ್ಟು ಹೊಸ ರೂಪವನ್ನು ನೀಡಿದ್ದರು.

ಸರ್ಕಾರಿ ಕಾಲೇಜು, ಪ್ರೌಢಶಾಲೆ, ಶತಮಾನೋತ್ಸವ ಶಾಲೆ (ಫ್ರೆಂಚ್‌ರಾಕ್ಸ್)ಗಳು ಹಲವು ವರ್ಷಗಳಿಂದ ಅನೇಕ ಸೌಲಭ್ಯಗಳಿಂದ ವಂಚಿತವಾಗಿದ್ದವು. ಶೌಚಾಲಯ, ಕುಡಿಯುವ ನೀರು, ಪ್ರಯೋಗಾಲಯ, ಕಂಪ್ಯೂಟರ್, ರಂಗಮಂದಿರ ಸೇರಿದಂತೆ ಅನೇಕ ಸೌಲಭ್ಯಗಳಿದ್ದರೂ ಅವ್ಯವಸ್ಥೆಯ ಆಗರವಾಗಿತ್ತು. ಕ್ರೀಡಾ ಚಟುವಟಿಕೆಗೆ ಉತ್ತಮವಾದ ಕೋರ್ಟ್‌ಗಳಿರಲಿಲ್ಲ, ಶಾಲೆಯ ವಿವಿಧೆಡೆ ಅಳವಡಿಸಿದ್ದ ಗೇಟ್‌ಗಳು ತುಕ್ಕು ಹಿಡಿದು ಹಾಳಾಗಿದ್ದವು, ಕಟ್ಟಡದ ಮೆಟ್ಟಿಲುಗಳು ಹಾಳಾಗಿ, ನೀರಿನ ಸಂಪ್‌ಗಳು ಶುಚಿತ್ವ ಕಾಣದಂತಾಗಿದ್ದವು. ಶಾಲಾ-ಕಾಲೇಜುಗಳ ಕೊಠಡಿಗಳ ಕೆಲವು ಬಾಗಿಲು, ಕಿಟಕಿಗಳು ಮುರಿದಿದ್ದವು, ರಾತ್ರಿ ವೇಳೆ ಗಾಢಾಂಧಕಾರ ತುಂಬಿತ್ತು. ಇಡೀ ಕಟ್ಟಡ ಬಣ್ಣ ಕಳೆದುಕೊಂಡು ಕಳಾಹೀನವಾಗಿತ್ತು.

ಪೂರ್ವ ಯೋಜನೆ ತಯಾರು

ಅಂದು ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ಈ ಕಾಲೇಜನ್ನು ದತ್ತು ಪಡೆದುಕೊಂಡರು. ಕೂಡಲೇ ಅಭಿವೃದ್ಧಿ ಚಟುವಟಿಕೆಯಲ್ಲಿ ಕ್ರಿಯಾಶೀಲರಾದರು. ಕಾಲೇಜಿನ ಪ್ರಾಂಶುಪಾಲರು, ಮುಖ್ಯ ಶಿಕ್ಷಕರು, ಅಧ್ಯಾಪಕರೊಂದಿಗೆ ಸಭೆ ನಡೆಸಿ ಕಾಲೇಜಿಗೆ ಅಗತ್ಯವಿರುವ ಸೌಲಭ್ಯಗಳ ಪಟ್ಟಿಯನ್ನು ಪಡೆದುಕೊಂಡರು. ಕಾಲೇಜಿಗೆ ಅತ್ಯುತ್ತಮ ಆಡಿಟೋರಿಯಂ, ಅಧ್ಯಾಪಕರು, ವಿದ್ಯಾರ್ಥಿಗಳಿಗೆ ಪ್ರತ್ಯೇಕ ಹೈಟೆಕ್ ಶೌಚಾಲಯ, ಕಾಲೇಜಿನ ಸುತ್ತ ಉದ್ಯಾನವನ, ಶಾರದಾ ಧ್ಯಾನ ಮಂದಿರಗಳನ್ನು ನವೀನ ಮಾದರಿಯಲ್ಲಿ ನಿರ್ಮಿಸಲು ಚಾಲನೆ ನೀಡಿದರು. ಅವ್ಯವಸ್ಥೆಯಿಂದ ಕೂಡಿದ್ದ ಶೌಚಾಲಯಗಳು ಅತ್ಯಾಧುನಿಕ ರೀತಿಯಲ್ಲಿ ನಿರ್ಮಾಣಗೊಂಡಿವೆ.

ಹೊಸದಾಗಿ ವಿದ್ಯುತ್ ಸಂಪರ್ಕ

ಜಿಲ್ಲೆಯ ಯಾವುದೇ ಸರ್ಕಾರಿ ಶಾಲೆಯಲ್ಲೂ ಕಾಣಲಾಗದ ಸುಸಜ್ಜಿತ ಆಡಿಟೋರಿಯಂ ತಲೆಎತ್ತಿ ನಿಂತಿತು. ಸುಸಜ್ಜಿತ ವೇದಿಕೆ, ಧ್ವನಿವರ್ಧಕ, ಮೈಕ್‌ಗಳು, ಕಣ್ಣುಕೋರೈಸುವ ವಿದ್ಯುದ್ದೀಪಾಲಂಕಾರದಿಂದ ಸಜ್ಜುಗೊಂಡಿದೆ. ಕಾಲೇಜು ಕಟ್ಟಡಕ್ಕೆ ಹೊಸದಾಗಿ ವಿದ್ಯುತ್ ಸಂಪರ್ಕ ಕಲ್ಪಿಸಿದರು. ಕಾಲೇಜಿನ ಒಳಾವರಣ, ಹೊರಗೆ ವಿದ್ಯುತ್ ಬೆಳಕು ತುಂಬಿರುವಂತೆ ವ್ಯವಸ್ಥೆ ಮಾಡಿದರು. ಕಾಲೇಜಿನ ಪ್ರಯೋಗಾಲಯಕ್ಕೆ ಅತ್ಯಾಧುನಿಕ ಉಪಕರಣಗಳನ್ನು ತರಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಅನುಕೂಲ ಕಲ್ಪಿಸಿಕೊಟ್ಟರು.

ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ 100 ಲೀಟರ್ ಶುದ್ಧ ಕುಡಿಯುವ ನೀರು ಘಟಕ, 24 ಗಂಟೆ ಕಾಲೇಜಿಗೆ ನೀರು ಸರಬರಾಜಾಗುವಂತೆ ವ್ಯವಸ್ಥೆ ಮಾಡಿದ್ದಾರೆ. ಹಳೆಯ ನೀರಿನ ಸಂಪ್‌ಗಳನ್ನು ಸ್ವಚ್ಛಗೊಳಿಸಿ ಹೊಸ ರೂಪ ನೀಡಿದ್ದು, ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಿ ಸದಾಕಾಲ ಅವುಗಳಲ್ಲಿ ನೀರು ತುಂಬಿರುವಂತೆ ಮಾಡಿದ್ದರು.

ಹೊಸ ಕೋರ್ಟ್‌ಗಳ ನಿರ್ಮಾಣ

ಕಾಲೇಜು ಆವರಣದೊಳಗೆ ಕ್ರೀಡಾ ಚಟುವಟಿಕೆಗೆ ಅನುಕೂಲವಾಗುವಂತೆ ವಾಲಿಬಾಲ್, ಷಟಲ್ ಬ್ಯಾಡ್ಮಿಂಟನ್, ಖೋ-ಖೋ ಕೋರ್ಟ್‌ಗಳನ್ನು ನಿರ್ಮಿಸಿದ್ದಾರೆ. ತುಕ್ಕು ಹಿಡಿದು ಹಾಳಾಗಿದ್ದ ಕಾಲೇಜಿನ ಸುತ್ತಲಿನ ಗೇಟ್‌ಗಳನ್ನು ಬದಲಾಯಿಸಿ ಇಂಟರ್‌ಲಾಕಿಂಗ್ ಸಿಸ್ಟಮ್ ಮೂಲಕ ಶಾಲೆಗೆ ಭದ್ರತೆಯನ್ನು ಒದಗಿಸಿದ್ದಾರೆ. ವಿದ್ಯಾರ್ಥಿಗಳು ಧ್ಯಾನ ಮಾಡುವುದಕ್ಕಾಗಿ ಶಾರದಾ ಧ್ಯಾನ ಮಂದಿರ, ಬಿಸಿಯೂಟ ತಯಾರಿಸುವ ಅಡುಗೆ ಮನೆಯನ್ನೂ ಹೈಟೆಕ್ ಮಾದರಿಯಲ್ಲಿ ನಿರ್ಮಿಸಿದ್ದರು. ಅಡುಗೆ ಮಾಡುವ ಸ್ಥಳ, ಹೊರಭಾಗದಲ್ಲಿ ಸುಸಜ್ಜಿತ ನಳಸಂಪರ್ಕವನ್ನು ಪೂರೈಸಿರುವುದಲ್ಲದೆ, ಹೊಸ ಪಾತ್ರೆಗಳು, ಅಡುಗೆ ಮನೆಯಲ್ಲಿ ಪದಾರ್ಥಗಳನ್ನು ಸಂಗ್ರಹಿಸಿಡಲು ಉತ್ತಮ ಕೊಠಡಿಗಳನ್ನು ನಿರ್ಮಿಸಿದ್ದಾರೆ.

ಮೇಲುಕೋಟೆ ಕ್ಷೇತ್ರದಲ್ಲಿ ನೀರಾವರಿ ಕ್ರಾಂತಿ

185.16 ಕೋಟಿ ರು. ವೆಚ್ಚದಲ್ಲಿ ಅನುಷ್ಠಾನ 51 ಕೆರೆಗಳಲ್ಲಿ ಜಲಧಾರೆ

ಬಳಘಟ್ಟ ಏತ ನೀರಾವರಿಯಿಂದ 1044 ಹೆಕ್ಟೇರ್‌ಗೆ ನೀರು

ಅಂತರ್ಜಲ ವೃದ್ಧಿಗಾಗಿ ಹಲವು ಕೆರೆಗಳ ನೀರಿನ ಸಂಗ್ರಹ ಸಾಮರ್ಥ್ಯ ಹೆಚ್ಚಳ



ಕಾವೇರಿ ಕಣಿವೆ ಪ್ರದೇಶದಲ್ಲಿ ಅಧಿಕ ಮಳೆಯಾದ ಸಂದರ್ಭದಲ್ಲೆಲ್ಲಾ ಕೆಆರ್‌ಎಸ್ ಜಲಾಶಯದಿಂದ ನೂರಾರು ಟಿಎಂಸಿ ನೀರು ವ್ಯರ್ಥವಾಗಿ ತಮಿಳುನಾಡಿಗೆ ಹರಿದುಹೋಗುತ್ತಿತ್ತು. ಈ ರೀತಿ ವ್ಯರ್ಥವಾಗಿ ಹರಿದುಹೋಗುವ ನೀರನ್ನು ಕೆರೆಗಳನ್ನು ತುಂಬಿಸುವುದಕ್ಕೆ, ಕುಡಿಯುವ ನೀರಿಗೆ ಬಳಕೆ ಮಾಡಿಕೊಳ್ಳುವ ಉಪಯುಕ್ತ ಯೋಜನೆಗಳನ್ನು ಜಾರಿಗೊಳಿಸಿ ಸಿ. ಎಸ್.ಪುಟ್ಟರಾಜು ಇತರರಿಗೆ ಮಾದರಿಯಾಗಿದ್ದಾರೆ.

ಕನಿಷ್ಠ ಪ್ರಮಾಣದ ನೀರನ್ನು ಬಯಲುಸೀಮೆಗೆ ತೆಗೆದುಕೊಂಡು ಹೋಗಿ ಅಲ್ಲಿನ ಜನ-ಜಾನುವಾರುಗಳ ಹಿತ ಕಾಯುವುದರೊಂದಿಗೆ ಅಂತರ್ಜಲ ವೃದ್ಧಿಗೂ ಸಹಕಾರಿಯಾಗಿದ್ದರು. ಮೇಲುಕೋಟೆ ಕ್ಷೇತ್ರದ ಶೇ.90ರಷ್ಟು ಪ್ರದೇಶಕ್ಕೆ ನೀರುಣಿಸುವಲ್ಲಿ ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ಯಶಸ್ವಿಯಾಗಿ ಕ್ಷೇತ್ರದ ನೀರಾವರಿಯಲ್ಲಿ ಹೊಸ ಕ್ರಾಂತಿಯನ್ನೇ ಸೃಷ್ಟಿಸಿದ್ದರು. ನೀರಾವರಿಗೆ ಮೊದಲ ಆದ್ಯತೆ ನೀಡುತ್ತಿರುವ ಜಿಲ್ಲೆಯ ಮೊದಲ ಶಾಸಕರೆಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದರು.

ಪಾಂಡವಪುರ ತಾಲೂಕು ನೀರಾವರಿ ಪ್ರದೇಶದಂತೆ ಕಂಡುಬಂದರೂ ಬಹುತೇಕ ಭಾಗ ಮಳೆಯಾಶ್ರಿತ ಪ್ರದೇಶದಲ್ಲಿದೆ. ಮಳೆ ಬಂದರಷ್ಟೇ ಬೆಳೆ ಎನ್ನುವ ಸ್ಥಿತಿ ಇದೆ. ಇಂತಹ ಬರಪೀಡಿತ ಪ್ರದೇಶಗಳ ಕೆರೆಗಳಿಗೆ ನೀರು ಹರಿಸಿ ಜನರ ನೀರಿನ ಬವಣೆಯನ್ನು ನೀಗಿಸದ ಭಗೀರಥ ಸಿ.ಎಸ್.ಪುಟ್ಟರಾಜು ಎನ್ನುವುದು ಜನಜನಿತವಾಗಿದೆ.

ಬಳಘಟ್ಟ ಏತ ನೀರಾವರಿ ಯೋಜನೆ

ಬರಪೀಡಿತ ಪ್ರದೇಶಗಳಲ್ಲಿ ಬಳಘಟ್ಟ ವ್ಯಾಪ್ತಿಯ 40ಕ್ಕೂ ಹೆಚ್ಚು ಹಳ್ಳಿಗಳೂ ಸೇರಿವೆ. ಈ ಗ್ರಾಮಗಳಲ್ಲಿರುವ 51 ಕೆರೆಗಳಿಗೆ ಮಳೆಬಂದರಷ್ಟೇ ನೀರು. ಕೆರೆ ಅಚ್ಚುಕಟ್ಟು ಪ್ರದೇಶದ ರೈತರು ಬೆಳೆ ಬೆಳೆಯಲು ಮಳೆಯನ್ನೇ ಅವಲಂಬಿಸಿದ್ದರು. ಬಳಘಟ್ಟ ಏತನೀರಾವರಿ ಯೋಜನೆ ಜಾರಿಯಿಂದ 51 ಕೆರೆಗಳಲ್ಲಿ ಜಲರಾಶಿಯ ವೈಭವ ಮೇಳೈಸುವಂತಾಯಿತು. ಕೆರೆಗಳಿಗೆ, ರೈತರ ಕೃಷಿ ಚಟುವಟಿಕೆಗಳಿಗೆ ನೀರು ತರುವುದರಲ್ಲಿ ಸಿ.ಎಸ್.ಪುಟ್ಟರಾಜು ಸದಾ ಸಿದ್ಧಹಸ್ತರು. ಕೃಷ್ಣರಾಜಸಾಗರ ಜಲಾಶಯದಿಂದ 0.906 ಕ್ಯೂಮಿಕ್ಸ್ (ಕ್ಯೂಬಿಕ್ ಮೀಟರ್ ಫಾರ್ ಸೆಕೆಂಡ್) ನೀರನ್ನು ಬಳಘಟ್ಟ ಏತ ನೀರಾವರಿ ಯೋಜನೆಗೆ ಬಳಸಿಕೊಳ್ಳಲಾಗುತ್ತಿದೆ. ಅಂತರ್ಜಲ ಪಾತಾಳ ಸೇರಿ ರುವ ಈ ಪ್ರದೇಶಗಳಲ್ಲಿ ಅಂತರ್ಜಲ ವೃದ್ಧಿಗಾಗಿ ಸಣಬ, ಹಂದಿಕಟ್ಟೆ, ಕದಲೀ ಕೆರೆ ಗ್ರಾಮದ ಕೆರೆಗಳ ನೀರಿನ ಸಂಗ್ರಹ ಸಾಮರ್ಥ್ಯವನ್ನು ಹೆಚ್ಚಿಸಲಾಗಿದೆ.

ಮೂರು ಹಂತದ ಕಾಮಗಾರಿ

ಮೂರು ಹಂತಗಳಲ್ಲಿ ಏತ ನೀರಾವರಿ ಯೋಜನೆಯ ಕಾಮಗಾರಿಯನ್ನು 36.5 ಕಿ.ಮೀ. ದೂರದವರೆಗೆ ನಡೆಸಲಾಗಿತ್ತು. ಮೊದಲ ಹಂತದಲ್ಲಿ 20 ಕಿ.ಮೀ. ದೂರದವರೆಗೆ 10 ಕೆರೆಗಳು, ಎರಡನೇ ಹಂತದಲ್ಲಿ 12 ಕಿ.ಮೀ. ದೂರದ ವರೆಗೆ 12 ಕೆರೆಗಳು ಹಾಗೂ ಮೂರನೇ ಹಂತದಲ್ಲಿ 4.5 ಕಿ.ಮೀ. ದೂರದವರೆಗಿನ 29 ಕೆರೆಗಳನ್ನು ತುಂಬಿಸುವಂತೆ ಯೋಜನೆ ರೂಪಿಸಿಕೊಂಡು 185.16 ಕೋಟಿ ರೂ. ವೆಚ್ಚದಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲಾಯಿತು.

ಈ ಏತ ನೀರಾವರಿ ಯೋಜನೆಗೆ ಕೃಷ್ಣರಾಜಸಾಗರ, ಸಣಬ ಹಾಗೂ ದಳವಾಯಿ ಕೆರೆ ಬಳಿ ಮೂರು ಜಾಕ್‌ವೆಲ್‌ಗಳನ್ನು ನಿರ್ಮಿಸಿದ್ದು ಪ್ರತಿ ಜಾಕ್‌ವೆಲ್ ಬಳಿ ಮೂರು ಮೋಟಾರ್ ಪಂಪ್‌ಸೆಟ್‌ಗಳನ್ನು ಅಳವಡಿಸಿದೆ. ಈ ಜಾಕ್‌ವೆಲ್‌ಗಳಿಗೆ ದಿನದ 24 ಗಂಟೆಯೂ ವಿದ್ಯುತ್ ಸರಬರಾಜಾಗುವಂತೆ 11 ಕೆವಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಕುಡಿವ ನೀರಿಗೆ ಆಧಾರ

ಬಳಘಟ್ಟ ಏತ ನೀರಾವರಿ ಯೋಜನೆಯಿಂದ ಕೇವಲ ಕೃಷಿ ಚಟುವಟಿಕೆಗೆ ಮಾತ್ರವಲ್ಲದೆ ಈ ಭಾಗದ ಜನರ ಜನ-ಜಾನುವಾರುಗಳ ಕುಡಿಯುವ ನೀರಿಗೂ ಆಧಾರವಾಗಿದೆ. ಜೊತೆಗೆ ಅಂತರ್ಜಲ ವೃದ್ಧಿಯಾಗುವುದರಿಂದ ಕೊಳವೆ ಬಾವಿಗಳಲ್ಲಿ ನೀರು ಮರುಪೂರಣಗೊಳ್ಳಲಿದೆ. ಏತ ನೀರಾವರಿಯಿಂದ ಕೆರೆ ಅಚ್ಚುಕಟ್ಟು ಪ್ರದೇಶದ ಜನರಿಗೆ ದೊರೆತ ನೀರಿನ ಆಸರೆಯಿಂದ ನೆಮ್ಮದಿಯ ಬದುಕು ಕಂಡುಕೊಳ್ಳಲು ಅನುಕೂಲವಾಗಿದೆ.

ಹೆಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದ ಸಮಯದಲ್ಲಿ ಬರಪೀಡಿತ ಹಾಗೂ ಸಂಪೂರ್ಣ ಮಳೆಯನ್ನೇ ಆಶ್ರಯಿಸಿದ್ದ ಬಳಘಟ್ಟ ವ್ಯಾಪ್ತಿಯ ಪ್ರದೇಶಗಳಲ್ಲಿ ರೈತರು ಎದುರಿಸುತ್ತಿದ್ದ ಸಂಕಷ್ಟ ಪರಿಸ್ಥಿತಿಯನ್ನು ಮನಗಂಡ ಮೇಲುಕೋಟೆ ಕ್ಷೇತ್ರದ ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ಅವರು ಕೃಷ್ಣರಾಜಸಾಗರ ಜಲಾಶಯದಿಂದ ನೀರನ್ನು ಈ ಭಾಗಕ್ಕೆ ತಂದು ಏತ ನೀರಾವರಿ ಯೋಜನೆ ಮೂಲಕ ಕೆರೆಗಳನ್ನು ತುಂಬಿಸುವುದಕ್ಕೆ ನಿರ್ಧರಿಸಿದರು. ಇದಕ್ಕೆ 18.7.2019ರಲ್ಲಿ ಕಾರ್ಯಾದೇಶ ದೊರಕಿತ್ತು. ಮೂರೇ ವರ್ಷದಲ್ಲಿ ಯೋಜನೆಯನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಿದರು.



ಅಂತರ್ಜಲವೃದ್ಧಿಗೆ 3 ಕೆರೆಗಳ ವಿಸ್ತರಣೆ

ಅಂತರ್ಜಲ ಪಾತಾಳಕ್ಕೆ ಕುಸಿದಿರುವ ಬಳಘಟ್ಟ ವ್ಯಾಪ್ತಿಯ ಸಣಬ, ಹಂದಿಕಟ್ಟೆ, ಕದಲೀಕೆರೆ ಗ್ರಾಮ ಗಳ ಕೆರೆಗಳ ವ್ಯಾಪ್ತಿಯನ್ನು ವಿಸ್ತರಣೆ ಮಾಡಿ ನೀರು ಸಂಗ್ರಹ ಸಾಮರ್ಥ್ಯವನ್ನು ಹೆಚ್ಚಿಸಿದೆ. ಸಣಬ ಕೆರೆಯಲ್ಲಿ 4.5 ಎಂಸಿಎಫ್‌ಟಿ, ಹಂದಿಕಟ್ಟೆ ಕೆರೆಯನ್ನು 7.8 ಎಂಸಿಎಫ್‌ಟಿ ಹಾಗೂ ಕದಲೀಕೆರೆಯಲ್ಲಿ 45.5 ಎಂಸಿಎಫ್‌ಟಿ ನೀರು ಸಂಗ್ರಹವಾಗುವಂತೆ ವಿಸ್ತರಿಸಲಾಗಿದೆ. ಪ್ರಸ್ತುತ ಈ ಮೂರು ಕೆರೆಗಳು ಅತಿ ಚಿಕ್ಕ ಕೆರೆಗಳಾಗಿದ್ದು ನೀರಿಲ್ಲದೆ ಬರಡಾಗಿದ್ದವು. ಇದರಿಂದ ಅಂತರ್ಜಲವೂ ಗಣನೀಯ ಪ್ರಮಾಣದಲ್ಲಿ ಕುಸಿದಿತ್ತು. ಈ ಭಾಗದ ರೈತರು ಸಾವಿರ ಅಡಿಗಳಷ್ಟು ಕೊಳವೆ ಬಾವಿ ಕೊರೆಸಿದರೂ ನೀರು ಬರುತ್ತಿರಲಿಲ್ಲ. ಹೀಗಾಗಿ ಬೆಳೆ ನಷ್ಟ ಅನುಭವಿಸುವುದು ಸಾಮಾನ್ಯವಾಗಿತ್ತು. ಇದನ್ನು ಅರಿತ ಸಿ.ಎಸ್. ಪುಟ್ಟರಾಜು ಅವರು ಏತ ನೀರಾವರಿ ಯೋಜನೆಯೊಳಗೆ ಮೂರು ಗ್ರಾಮಗಳ ಕೆರೆಗಳ ವ್ಯಾಪ್ತಿ ವಿಸ್ತರಣೆ ಮಾಡುವುದನ್ನೂ ಸೇರಿಸಿ ಕೆರೆಗಳಲ್ಲಿ ಸಾಕಷ್ಟು ನೀರು ಸಂಗ್ರಹವಾಗುವಂತೆ ಮಾಡಿದ್ದಾರೆ.

ದುದ್ದ ಹೋಬಳಿ ಕೆರೆಗಳಲ್ಲಿ ಜಲವೈಭವ

ಕೃಷಿಮೇಲೆಅಪಾರಪ್ರೀತಿ, ರೈತಪರಆಲೋಚನೆಗಳನ್ನುಮೈಗೂಡಿಸಿಕೊಂಡಿರುವ ಸಿ.ಎಸ್.ಪುಟ್ಟರಾಜು ಅವರು ಮೇಲುಕೋಟೆ ಕ್ಷೇತ್ರ ವ್ಯಾಪ್ತಿಯೊಳಗೆ ನೀರಾವರಿ ಯೋಜನೆಗಳನ್ನು ಜಾರಿಗೊಳಿಸಿ ಹೊಸ ಕ್ರಾಂತಿಯನ್ನೇ ಸೃಷ್ಟಿಸಿದ್ದಾರೆ. ಕೆರೆಕಟ್ಟೆಗಳನ್ನು ತುಂಬಿಸುವುದರೊಂದಿಗೆ ಕೆರೆಯ ಅಚ್ಚುಕಟ್ಟು ಪ್ರದೇಶಗಳಿಗೆ ನೀರೊದಗಿಸಿ ರೈತರ ಬದುಕನ್ನು ಹಸನುಗೊಳಿಸಿದ್ದಾರೆ.

ಬಳಘಟ್ಟ ವ್ಯಾಪ್ತಿಯ 40ಕ್ಕೂ ಹೆಚ್ಚು ಹಳ್ಳಿಗಳ 51 ಕೆರೆಗಳಿಗೆ ನೀರು ಹರಿಸಿದ್ದರೆ, ಶ್ಯಾದೇನಹಳ್ಳಿ ಏತ ನೀರಾವರಿ ಯೋಜನೆಯ ಕಾಮಗಾರಿಯನ್ನು ಆರಂಭಿಸಿ ಜನ ಮನ ಗೆದ್ದಿದ್ದರು. ನಂತರದಲ್ಲಿ 144 ಕೋಟಿ ರು. ವೆಚ್ಚದಲ್ಲಿ ದುದ್ದ ಹೋಬಳಿಯ 54 ಕೆರೆ-ಕಟ್ಟೆಗಳಿಗೆ ಶ್ರೀರಂಗಪಟ್ಟಣ ತಾಲೂಕಿನ ಶ್ರೀನಿವಾಸ ಅಗ್ರಹಾರ ಗ್ರಾಮದ ಬಳಿ ಲೋಕಪಾವನಿ ನದಿಯಿಂದ ನೀರನ್ನು ತಂದು ಕುಡಿಯುವ ನೀರಿಗೆ ಅನುಕೂಲ ಮಾಡಿಕೊಡುವ ಮಹತ್ಕಾರ್ಯಕ್ಕೆ ಮುಂದಾಗಿದ್ದರು.

ಸಣ್ಣ ನೀರಾವರಿ ಸಚಿವರಾಗಿದ್ದ ವೇಳೆ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಮೇಘಾ ಇಂಜಿನಿಯರಿಂಗ್ ಇನ್‌ಫ್ರಾಸ್ಟ್ರಕ್ಚರ್ ಪ್ರೈವೇಟ್ ಲಿಮಿಟೆಡ್‌ನವರ ಮೂಲಕ ಮೊದಲ ಹಂತದ ಏರು ಕೊಳವೆ ಮಾರ್ಗದ ಕಾಮಗಾರಿಯನ್ನು ಶ್ರೀರಂಗಪಟ್ಟಣ ವ್ಯಾಪ್ತಿಯಲ್ಲಿ 150 ಮೀ. ಉದ್ದಕ್ಕೆ ಪೂರ್ಣಗೊಳಿಸಿದ್ದರು. ಶ್ರೀನಿವಾಸ ಅಗ್ರಹಾರದ ಬಳಿ ಜಾಕ್‌ವೆಲ್, ಪಂಪ್‌ಹೌಸ್ ಕಾಮಗಾರಿ, ಪಂಪ್, ಮೋಟಾರ್ ಅಳವಡಿಕೆ ಕಾರ್ಯ ಪೂರ್ಣಗೊಂಡಿತ್ತು. ಏರುಕೊಳವೆ ಮಾರ್ಗಕ್ಕೆ ಸಂಬಂಧಿಸಿದ ಕಾಮಗಾರಿ ಪೂರ್ಣಗೊಳಿಸಿ ಮೊದಲ ಹಂತದಲ್ಲಿ 19 ಕ್ಯುಸೆಕ್ ನೀರನ್ನು ಮೇಲೆತ್ತಿ 20 ಕೆರೆಗಳಿಗೆ ಹರಿಸಿದ್ದರು. ಎರಡನೇ ಹಂತದಲ್ಲಿ ಪಾಂಡವಪುರ ತಾಲೂಕಿನ ಕಾಳೇನಹಳ್ಳಿ ಕೆರೆ ಬಳಿ ಪಂಪ್ ಹೌಸ್, ಜಾಕ್‌ವೆಲ್ ನಿರ್ಮಾಣ ಕಾಮಗಾರಿ, ಪಂಪ್ ಮತ್ತು ಮೋಟಾರ್‌ಗಳ ಅಳವಡಿಕೆ ಕಾರ್ಯ ನಡೆಸಲಾಗಿತ್ತು. ಇಲ್ಲಿಂದ 13.50 ಕ್ಯುಸೆಕ್ ನೀರನ್ನು ಮೇಲೆತ್ತುವುದರೊಂದಿಗೆ 34 ಕೆರೆಗಳನ್ನು ತುಂಬಿಸುವಂತೆ ಯೋಜನೆಯನ್ನು ರೂಪಿಸಿ ಕಾರ್ಯಗತಗೊಳಿಸಿದ್ದರು.



ಶ್ಯಾದೇನಹಳ್ಳಿ ಏತ ನೀರಾವರಿಯಿಂದ ಸೂಕ್ಷ್ಮ ನೀರಾವರಿ ಪರಿಚಯ

ನೀರು ವ್ಯರ್ಥವಾಗದಂತೆ ತಡೆಯಲು ನವೀನ ವಿಧಾನ

ಕೃಷಿ ಪದ್ಧತಿಯಲ್ಲಿ ಹೊಸ ಬದಲಾವಣೆ ತರುವ ಉದ್ದೇಶ

ಮೇಲುಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನೀರಾವರಿಗೆ ಪ್ರಾಧಾನ್ಯತೆ ನೀಡುವ ಉದ್ದೇಶದಿಂದ ಸಣ್ಣ ನೀರಾವರಿ ಸಚಿವರಾಗಿದ್ದ ಸಮಯದಲ್ಲಿ ಸಿ.ಎಸ್.ಪುಟ್ಟರಾಜು ಅವರು ಶ್ಯಾದೇನಹಳ್ಳಿ ಏತ ನೀರಾವರಿ ಯೋಜನೆಯ ಮೂಲಕ ಹೊಸದಾಗಿ ಕಣಿವೆ ಕೆರೆ ನಿರ್ಮಿಸಿ ನೀರು ತುಂಬಿಸುವ ಕಾರ್ಯಕ್ಕೆ ಚಾಲನೆ ನೀಡಿದ್ದರು.


ಶ್ಯಾದೇನಹಳ್ಳಿ ಗ್ರಾಮಕ್ಕೆ ಹೋಗುವ ಅಡ್ಡರಸ್ತೆಯ ಬಳಿ ಹರಿಯುವ ಮೊಸಳೆ ಹಳ್ಳಕ್ಕೆ ಪಿಕಪ್ ನಿರ್ಮಿಸಿ ಏತ ನೀರಾವರಿ ಮೂಲಕ ವಡ್ಡರಹಳ್ಳಿ ಗ್ರಾಮದಹತ್ತಿರಹೊಸದಾಗಿಕಣಿವೆಕೆರೆನಿರ್ಮಿಸಿನೀರುತುಂಬಿಸುವುದು ಹಾಗೂ ಸೂಕ್ಷ್ಮ ನೀರಾವರಿ ವ್ಯವಸ್ಥೆ ಕಲ್ಪಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿತ್ತು.

ಜೆಡಿಎಸ್-ಕಾಂಗ್ರೆಸ್ ಸಮ್ಮಿಶ್ರ ಸರ್ಕಾರದಲ್ಲಿ ಸಣ್ಣ ನೀರಾವರಿ ಸಚಿವರಾಗಿದ್ದಾಗ ಶ್ಯಾದೇನಹಳ್ಳಿ ಏತ ನೀರಾವರಿ ಯೋಜನೆ ಚಿಗುರೊಡೆದು 17 ಜುಲೈ 2019ರಲ್ಲಿ ಟೆಂಡರ್ ಅನುಮೋದನೆಗೊಂಡಿತ್ತು. 81 ಕೋಟಿ ರು.ವೆಚ್ಚದಲ್ಲಿ ಬೆಂಗಳೂರಿನ ಅಮೃತ್ ಕನ್‌ಸ್ಟ್ರಕ್ಷನ್ ಪ್ರೈವೇಟ್ ಲಿಮಿಟೆಡ್‌ನವರು ಕಾಮಗಾರಿ ವಹಿಸಲಾಗಿತ್ತು.

ನೀರು ವ್ಯರ್ಥವಾಗುವುದನ್ನು ತಡೆಯುವ ಸಲುವಾಗಿ ಸಿ.ಎಸ್. ಪುಟ್ಟರಾಜು ಅವರು ಶ್ಯಾದೇನಹಳ್ಳಿ ಏತ ನೀರಾವರಿ ಮೂಲಕ ಸೂಕ್ಷ್ಮ ನೀರಾವರಿ ವ್ಯವಸ್ಥೆಯನ್ನು ಅಳವಡಿಸುವುದಕ್ಕೆ ಮುಂದಾಗಿದ್ದರು. ಈ ಯೋಜನೆಯಿಂದ 3800 ಎಕರೆ ಪ್ರದೇಶಕ್ಕೆ ಹನಿ ನೀರಾವರಿ ವ್ಯವಸ್ಥೆ, 3 ಕೆರೆಗಳಿಗೆ ನೀರು ತುಂಬಿಸುವ ಹಾಗೂ ಕಣಿವೆ ಕೆರೆಯನ್ನು ನಿರ್ಮಿಸಿ ನೀರು ತುಂಬಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿತ್ತು. ನೀರು ಪೋಲಾಗುವುದನ್ನು ತಡೆದು ರೈತರನ್ನು ಹನಿ ನೀರಾವರಿ ವ್ಯವಸ್ಥೆಗೆ ಒಗ್ಗಿಸುವುದರೊಂದಿಗೆ ಕೃಷಿ ಪದ್ಧತಿಯಲ್ಲಿ ಹೊಸ ಬದಲಾವಣೆಯನ್ನು ತರುವ ಉದ್ದೇಶವನ್ನು ಈ ಯೋಜನೆ ಒಳಗೊಂಡಿತ್ತು.



> **ಬಳಘಟ್ಟ ವ್ಯಾಪ್ತಿಯಲ್ಲಿ ಬರುವ ಸುಮಾರು 40ಕ್ಕೂ ಹೆಚ್ಚು ಹಳ್ಳಿಗಳು ನೀರೇ ಕಾಣದಂತಹ ಪ್ರದೇಶಗಳಾಗಿದ್ದವು. ಮಳೆ ಬಾರದಿದ್ದರೆ ಅಲ್ಲಿನ ರೈತರು ಯಾವ ಬೆಳೆಯನ್ನೂ ಬೆಳೆಯಲಾಗುತ್ತಿರಲಿಲ್ಲ. ಕೊಳವೆ ಬಾವಿಗಳಲ್ಲಿ ನೀರು ಸಿಗುತ್ತಿರಲಿಲ್ಲ. ಬದುಕು ಕಟ್ಟಿಕೊಳ್ಳಲು ಈ ಭಾಗದ ಜನರು ಪರಿತಪಿಸುತ್ತಿರುವುದನ್ನು ಕಂಡು ಕೆಆರ್‌ಎಸ್‌ನಿಂದ ನೀರು ತಂದು ಬಳಘಟ್ಟ ವ್ಯಾಪ್ತಿಯ 51 ಕೆರೆಗಳಿಗೆ ನೀರು ತುಂಬಿಸಲು ನಿರ್ಧರಿಸಿದೆ. ನಾನು ಸಣ್ಣ ನೀರಾವರಿ ಸಚಿವನಾಗಿದ್ದ ಸಮಯದಲ್ಲೇ ಕಾರ್ಯಯೋಜನೆ ರೂಪಿಸಿ ಬಜೆಟ್‌ನಲ್ಲಿ ಅನುಮೋದನೆ ಪಡೆದು ಅನುಷ್ಠಾನಗೊಳಿಸಿದೆ. ಶ್ಯಾದೇನಹಳ್ಳಿ ಏತನೀರಾವರಿ ಯೋಜನೆ ಹನಿ ನೀರಾವರಿ ಪರಿಚಯಿಸಲು ರೂಪಿಸಿದ ಯೋಜನೆ.**
>
> • **ಸಿ.ಎಸ್.ಪುಟ್ಟರಾಜು** ಮಾಜಿ ಸಚಿವರು, ಮೇಲುಕೋಟೆ ವಿಧಾನಸಭಾ ಕ್ಷೇತ್ರ



ಹೇಮಾವತಿಯಿಂದಲೂ ದುದ್ದಕ್ಕೆ ನೀರು

ಹೇಮಾವತಿಯಿಂದ ಮೇಲುಕೋಟೆ ಕ್ಷೇತ್ರಕ್ಕೆ ಸೇರಿದ ಮಂಡ್ಯ ಭಾಗಕ್ಕೆ ನಿಗದಿಪಡಿಸಿರುವಷ್ಟು ಪ್ರಮಾಣದ ನೀರು ಹರಿಯುತ್ತಿಲ್ಲವೆಂಬ ಕೂಗಿನ ನಡುವೆಯೂ ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ತಮ್ಮ ಕ್ಷೇತ್ರಕ್ಕೆ ಅಗತ್ಯವಿರುವಷ್ಟು ಹೇಮಾವತಿ ನೀರನ್ನು ಹರಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದರು. ಮೇಲುಕೋಟೆ ಕ್ಷೇತ್ರಕ್ಕೆ ಸೇರಿದ ದುದ್ದ ಹೋಬಳಿ ಬರಡು ಪ್ರದೇಶವಾಗಿದ್ದು ನೀರಾವರಿಯಿಂದ ವಂಚಿತವಾಗಿತ್ತು. ಈ ವ್ಯಾಪ್ತಿಯ ಜನರ ಬವಣೆಯನ್ನು ಅರಿತ ಸಿ.ಎಸ್.ಪುಟ್ಟರಾಜು ವ್ಯವಸಾಯ ಮತ್ತು ಕುಡಿಯುವ ನೀರಿಗೆ ತೊಂದರೆಯಾಗದಂತೆ ಹೇಮಾವತಿ ನೀರನ್ನೂ ಪ್ರತಿ ವರ್ಷ ಸಕಾಲಕ್ಕೆ ಹರಿಸುವಲ್ಲಿ ಯಶಸ್ವಿಯಾಗಿದ್ದರು. ಹೇಮಾವತಿ ನೀರಿನ ಆಶ್ರಯದಲ್ಲಿ ದುದ್ದ ಹೋಬಳಿ ಹೇಮಾವತಿ ಎಡದಂಡೆ ನಾಲಾ ವ್ಯಾಪ್ತಿಯಲ್ಲಿರುವ 37 ಕೆರೆಗಳು 170.56 ಎಂಸಿಎಫ್‌ಟಿ ನೀರು ಸಂಗ್ರಹ ಸಾಮರ್ಥ್ಯವನ್ನು ಹೊಂದಿವೆ. ವರ್ಷಪೂರ್ತಿ ಕೆರೆಗಳಲ್ಲಿ ನೀರು ತುಂಬಿರುವಂತೆ ಮಾಡಲು ಸಿ.ಎಸ್.ಪುಟ್ಟರಾಜು ನಿರಂತರ ಶ್ರಮ ವಹಿಸಿದ್ದರು.